ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 3
10–6–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 3

## ಛತ್ರಪತಿ ಶಿವಾಜಿ ಮಹಾರಾಜರ ಕುರಿತ ಕನ್ನಡ ಅನುವಾದಿತ ಪುಸ್ತಕ ಬಿಡುಗಡೆ

**ದಾವಣಗೆರೆ:** ಮಹಾರಾಷ್ಟ್ರ ಪುಣೆಯ ಮಾವಲ ಜವಾನ್ ಸಂಸ್ಥೆ ಮತ್ತು ಕರ್ನಾಟಕ ಮರಾಠ ಕಲ್ಯಾಣ ಸಂಘದಿಂದ ಬೆಂಗಳೂರು ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಛತ್ರಪತಿ ಶಿವಾಜಿ ಮಹಾರಾಜರ 352 ನೇ ಪಟ್ಟಾಭಿಷೇಕ ಸಮಾರಂಭದಲ್ಲಿ ವಿಶ್ವದ ಶ್ರೇಷ್ಠ ನಾಯಕ ಛತ್ರಪತಿ ಶಿವಾಜಿ ಮಹಾರಾಜರ ಕುರಿತಾದ ಮೊದಲ ಕನ್ನಡ ಭಾಷಾ ಪುಸ್ತಕವನ್ನು ಮಾಜಿ ಸಚಿವ ಪಿ ಜಿ ಆರ್ ಸಿಂಧ್ಯಾ ಲೋಕಾರ್ಪಣೆ ಮಾಡಿದರು.

ಪ್ರಸಿದ್ಧ ಬರಹಗಾರ ದತ್ತಾಜಿ ನಲವಾಡೆ ಬರೆದ ಈ ಪುಸ್ತಕವನ್ನು ದಾವಣಗೆರೆಯ ಪ್ರೊ. ಶಿವಾಜಿರಾವ್ ಚೌಹಾಣ್ ಕನ್ನಡ ಭಾಷೆಯಲ್ಲಿ ಅನುವಾದಿಸಿದ ಮೊದಲ ಸಮಗ್ರ ಕೃತಿಯನ್ನು ಇದಾಗಿದೆ ಎಂದು ಸಿಂಧ್ಯಾ ಹೇಳಿದರು.

ಛತ್ರಪತಿ ಶಿವಾಜಿ ಮಹಾರಾಜರ ಜೀವನ ಚರಿತ್ರೆ ನಿಜಕ್ಕೂ ದೇಶಭಕ್ತಿಯ ಜ್ಯೋತಿ. ಶಿವಾಜಿ ಮಹಾರಾಜರು ಜಗತ್ತಿಗೆ ಸ್ವಾತಂತ್ರ್ಯದ ಸ್ಫೂರ್ತಿ ನೀಡಿದ ದೇವರು. ಅವರು ಭಾರತ ಮತ್ತು ಪ್ರಪಂಚದ ಲಕ್ಷಾಂತರ ಜನರಿಗೆ ಸ್ವಾತಂತ್ರ್ಯ ಮತ್ತು ಸ್ವಾಭಿಮಾನದ ಸ್ಫೂರ್ತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ವಿಜಯನಗರ ಸಾಮ್ರಾಜ್ಯದ ವಂಶಸ್ಥ ರಾಜ ಕೃಷ್ಣದೇವರಾಯ, ಚಿತ್ರನಟ ಗಣೇಶರಾವ್ ಕೇಸರಕರ್, ಮಾಜಿ ಜಿಲ್ಲಾ ಪರಿಷತ್ ಸದಸ್ಯ ತೇಜಸ್ವಿ ಪಟೇಲ್, ಮರಾಠಾ ಸಂಘದ ಅಧ್ಯಕ್ಷ ಮನೋಜಕುಮಾರ ರಾಣೋರೆ, ಅಣ್ಣಾಜಿ ನಲವಾಡೆ, ಸಚಿನ್ ಪಾಯುಡೆ, ಬಾಜಿರಾವ್ ಪಾರ್ಗೆ, ಸಾಗರ್ ಶಾಹದೆ ಮೊದಲಾದವರು ಉಪಸ್ಥಿತರಿದ್ದರು.

## ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

**ಚಿಕ್ಕಮಗಳೂರು, ಜೂ. 9:** ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಆರ್.ಪಾಟೀಲ ಅವರು ಜೂನ್ 10 ರಂದು ಮತ್ತು 11 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಜೂ.10 ರಂದು ಚಿಕ್ಕಮಗಳೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಹೂಡಲಿರುವ ಸಚಿವರು, ಜೂನ್ 11 ರಂದು ಬೆಳಿಗ್ಗೆ 8.30 ಗಂಟೆಗೆ ಬಾಳೆಹೊನ್ನೂರಿಗೆ ತೆರಳಿ ಶ್ರೀ ಜಗದ್ಗುರು ರಂಭಾಪುರಿ ಮಹಾಸಂಸ್ಥಾನ ಪೀಠಕ್ಕೆ ಭೇಟಿ ನೀಡುವರು. ಬೆಳಿಗ್ಗೆ 11.30ಕ್ಕೆ ಬಾಳೆಹೊನ್ನೂರಿನಿಂದ ಚಿಕ್ಕಮಗಳೂರಿಗೆ ಆಗಮಿಸಲಿದ್ದು, ಮಧ್ಯಾಹ್ನ 1 ಗಂಟೆಗೆ ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡುವರು. ಮಧ್ಯಾಹ್ನ 3 ಗಂಟೆಗೆ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. 4 ಗಂಟೆಗೆ ಬೆಂಗಳೂರಿಗೆ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 11 ರಂದು ದಿಶಾ ಸಭೆ

**ಚಿಕ್ಕಮಗಳೂರು, ಜೂ. 9:** ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ(ದಿಶಾ)ಯು ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ಹಾಸನ ಸಂಸದ ಶ್ರೇಯಸ್ ಎಂ.ಪಟೇಲ್ ಅವರ ಸಹ ಅಧ್ಯಕ್ಷತೆಯಲ್ಲಿ ಜೂನ್ 11 ರಂದು 11 ಗಂಟೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ಸಜೀರ್ ಸಾಬ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿ.ಪಂ.ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಅವರು ತಿಳಿಸಿದ್ದಾರೆ.

## ಜೂ.15 ರಿಂದ ನಿರ್ದಿಷ್ಟ ಹುದ್ದೆಗಳಿಗೆ ಲಿಖಿತ ಪರೀಕ್ಷೆ

**ಚಿಕ್ಕಮಗಳೂರು, ಜೂ.9:** ಜಿಲ್ಲಾ ನ್ಯಾಯಾಂಗ ಇಲಾಖೆ, ಲೋಕೋಪಯೋಗಿ ಇಲಾಖೆ, ತರೀಕೆರೆ ಮತ್ತು ಅಜ್ಜಂಪುರ ಬಾರ್ ಅಸೋಸಿಯೇಶನ್ ಮತ್ತು ಶಾಲಾ ಶಿಕ್ಷಣ ಇಲಾಖೆ ಆಶ್ರಯದಲ್ಲಿ ಜೂನ್ 12 ರಂದು ಬೆಳಿಗ್ಗೆ 10.30 ಗಂಟೆಗೆ ಶೆಟ್ರು ಸಿದ್ದಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅಜ್ಜಂಪುರದ ಸಿವಿಲ್ ಮತ್ತು ಜೆಎಂಎಫ್‌ಸಿ ಸಂಚಾರಿ ನ್ಯಾಯಾಲಯದ ಉದ್ಘಾಟನಾ ಸಮಾರಂಭ ನಡೆಯಲಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ರಾಜೇಶ್ವರಿ ಎನ್.ಹೆಗ್ಡೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಗೌರವಾನ್ವಿತ ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ಪ್ರಧಾನ ನ್ಯಾಯಾಧೀಶರಾದ ವೈದ್ಯ ಶ್ರೀಕಾಂತ್, ಲೋಕೋಪಯೋಗಿ ಇಲಾಖೆಯ ಶಿವಮೊಗ್ಗ ವಲಯದ ಮುಖ್ಯ ಅಭಿಯಂತರ ಬಿ.ವಿ.ಜಗದೀಶ್ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

# ನರೇಂದ್ರ ಮೋದಿ ಸರ್ಕಾರದ 11 ವರ್ಷಗಳನ್ನು 'ಸುವರ್ಣಾಕ್ಷರ'ಗಳಲ್ಲಿ ಬರೆದಿಡುವಂತಹದ್ದು



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರ 11 ವರ್ಷಗಳ ಅಧಿಕಾರಾವಧಿಯನ್ನು ಶ್ಲಾಘಿಸಿದ ಭಾರತೀಯ ಜನತಾ ಪಕ್ಷದ ಅಧ್ಯಕ್ಷ ಜೆ.ಪಿ. ನಡ್ಡಾ ಅವರು, ಮೋದಿ ನಾಯಕತ್ವದಲ್ಲಿ ಸರ್ಕಾರ ಮಾಡಿದ ಕೆಲಸಗಳನ್ನು 'ಸುವರ್ಣಾಕ್ಷರಗಳಲ್ಲಿ' ಬರೆಯಲ್ಪಡಬೇಕು ಎಂದು ಹೇಳಿದರು.

ಪ್ರಧಾನಿ ಮೋದಿ ಅವರು ದೇಶದ ರಾಜಕೀಯ ಸಂಸ್ಕೃತಿಯನ್ನು ಬದಲಾಯಿಸಿದರು. ಜವಾಬ್ದಾರಿಯುತ ಸರ್ಕಾರವನ್ನು ಒದಗಿಸುವ ಮೂಲಕ ಉತ್ತಮ ಆಡಳಿತದ ರಾಜಕೀಯವನ್ನು ಪ್ರಾರಂಭಿಸಿದರು ಎಂದು ನಡ್ಡಾ ಹೇಳಿದರು. ಆದರೆ ಕಾಂಗ್ರೆಸ್ ನೇತೃತ್ವದ ಹಿಂದಿನ ಯುಪಿಎ ಸರ್ಕಾರ 'ಭ್ರಷ್ಟಾಚಾರ, ಹಗರಣಗಳು ಮತ್ತು ಸಮಾಧಾನ'ದ ರಾಜಕೀಯಕ್ಕೆ ಹೆಸರುವಾಸಿಯಾಗಿತ್ತು ಎಂದರು.

ಬಿಜೆಪಿ ಪ್ರಧಾನ ಕಚೇರಿಯಲ್ಲಿ ನಡೆದ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ನಡ್ಡಾ, ಪ್ರಧಾನಿ ಮೋದಿ ಜವಾಬ್ದಾರಿಯುತ ಮತ್ತು ಬಲಿಷ್ಠ ಸರ್ಕಾರವನ್ನು ಒದಗಿಸಿದ್ದಾರೆ ಎಂದು ಬಿಜೆಪಿ ಅಧ್ಯಕ್ಷರು ಹೇಳಿದರು. ಮೋದಿ ಸರ್ಕಾರ ತೆಗೆದು–ಕೊಂಡ ದಿಟ್ಟ ನಿರ್ಧಾರಗಳಲ್ಲಿ 370ನೇ ವಿಧಿ ರದ್ದತಿ, ತ್ರಿವಳಿ ತಲಾಖ್ ರದ್ದತಿ, ವಕ್ಫ್ ತಿದ್ದುಪಡಿ, ನೋಟು ರದ್ದತಿ, ಮಹಿಳಾ ಮೀಸಲಾತಿ ಮಸೂದೆ ಸೇರಿವೆ ಎಂದು ನಡ್ಡಾ ಉಲ್ಲೇಖಿಸಿದರು. ಪ್ರಧಾನಿ ಮೋದಿ ಜೂನ್ 9, 2024 ರಂದು ಮೂರನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದರು. ಮೋದಿ ಸರ್ಕಾರವು ತನ್ನ ಮೂರನೇ ಅವಧಿಯ ಮೊದಲ ವಾರ್ಷಿಕೋತ್ಸವ ಮತ್ತು ಸೋಮವಾರ ಒಟ್ಟಾರೆಯಾಗಿ 11ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ.

ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ಮತ್ತು ಆಪರೇಷನ್ ಸಿಂಧೂರ್ ಬಗ್ಗೆ ಟೀಕಿಸಿದ್ದಕ್ಕಾಗಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಟೀಕಿಸಿದ ಅವರು, ಅವರು ಬೇಜವಾಬ್ದಾರಿ ವಿರೋಧ ಪಕ್ಷದ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ದೇವರು ಅವರಿಗೆ ಬುದ್ಧಿವಂತಿಕೆಯನ್ನು ನೀಡಲಿ ಎಂದು ಹೇಳಿದರು. ಸರ್ಕಾರದ ಸ್ಥಿರತೆಯ ಪ್ರಶ್ನೆಗೆ, ಎನ್‌ಡಿಎ ಸರ್ಕಾರ ಈ ಅವಧಿಯ ಜೊತೆಗೆ ಮುಂದಿನ ಅವಧಿಯನ್ನೂ ಪೂರ್ಣಗೊಳಿಸುತ್ತದೆ ಎಂದು ನಡ್ಡಾ ಹೇಳಿದರು.

## ರಾಜ್ಯದಲ್ಲಿ ಕೊರೋನಾ ದಿಢೀರ್ ಹೆಚ್ಚಳ; ಇಂದು 265 ಮಂದಿಗೆ ಪಾಸಿಟಿವ್

**ಬೆಂಗಳೂರು:** ರಾಜ್ಯದಲ್ಲಿ ಕೊರೋನಾ ಮತ್ತೆ ದಿಢೀರ್ ಹೆಚ್ಚಳವಾಗಿದ್ದು, ಕಳೆದ 24 ಗಂಟೆಯಲ್ಲಿ ಬರೋಬ್ಬರಿ 265 ಮಂದಿಗೆ ಕೋವಿಡ್–19 ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ಸೋಂಕಿತರ ಸಂಖ್ಯೆ 1220ಕ್ಕೆ ಏರಿಕೆಯಾಗಿದೆ.

ಇನ್ನೂ ರಾಜ್ಯದಲ್ಲಿ ಇಂದು ಮಹಾಮಾರಿ ಕೊರೋನಾದಿಂದ ಯಾವುದೇ ಸಾವು ವರದಿಯಾಗಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ರಾಜ್ಯದಲ್ಲಿ ಇಂದು ಒಟ್ಟು 650 ಜನರನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಲಾಗಿದ್ದು, ಆ ಪೈಕಿ 265 ಜನರಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ಪಾಸಿಟಿವ್ ಪ್ರಮಾಣ ಶೇ.40ಕ್ಕೆ ಏರಿಕೆಯಾಗಿದೆ.

ರಾಜ್ಯದಲ್ಲಿ ಒಟ್ಟು 559 ಸಕ್ರಿಯ ಪ್ರಕರಣಗಳಿದ್ದು, ಈ ಪೈಕಿ 552 ಮಂದಿ ಮನೆ ಆರೈಕೆಯಲ್ಲಿದ್ದಾರೆ ಮತ್ತು 7 ಮಂದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಆರೋಗ್ಯ ಇಲಾಖೆ ಕೋವಿಡ್ ಪರಿಸ್ಥಿತಿಯ ನಿಗಾ ವಹಿಸಿದ್ದು, ಹತೋಟಿಗೆ ತರಲು ಕ್ರಮಗಳನ್ನ ಕೈಗೊಳ್ಳುತ್ತಿದೆ. ಆತಂಕ ಪಡುವ ಪರಿಸ್ಥಿತಿ ಬಂದಿಲ್ಲವಾದರೂ, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ರಾಜ್ಯ ಸರ್ಕಾರ ಮನವಿ ಮಾಡಿದೆ.

# ಗೌರವ ಹೆಚ್ಚಿಸಿಕೊಳ್ಳುವ ರೀತಿ ಬೆಳೆಯಿರಿ: ಶಾಸಕ ಕೆ.ಎಸ್.ಬಸವಂತಪ್ಪ

**ದಾವಣಗೆರೆ:** ಯಾರು ನಮ್ಮನ್ನು ನೋಡಿ ಅನುಕರಣೆ ಮಾಡುವ ರೀತಿ ಬೆಳೆಯುತ್ತಾರೋ, ಆಗ ಆ ವ್ಯಕ್ತಿಯ ಗೌರವ ಹೆಚ್ಚಾಗುತ್ತದೆ. ನಿಮ್ಮ ಜೀವನ ಶೈಲಿ ರೂಪಿಸಿಕೊಂಡರೆ ನೀವು ಕೂಡ ಅವರಂತೆ ಆಗಬಹುದು ಎಂದು ಶಾಸಕ ಕೆ.ಎಸ್. ಬಸವಂತಪ್ಪ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ತಾಲ್ಲೂಕಿನ ಮಾಯಕೊಂಡ ಗ್ರಾಮದ ಬಸವೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ 2024–25ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್‌ಕ್ರಾಸ್ ಹಾಗೂ ರೇಂಜರ್ಸ್ ಮತ್ತು ರೋವರ್ಸ್ ಘಟಕಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಸಮುದಾಯ ದೇಶದ ಮುಂದಿನ ಭವಿಷ್ಯದ ಪ್ರಜೆಗಳು. ನಿಮ್ಮಲ್ಲಿ ಅನೇಕ ಪ್ರತಿಭೆಗಳು ಇವೆ. ನಿಮಗೆ ಒಂದು ಸೂಕ್ತ ವೇದಿಕೆ ಸಿಕ್ಕಾಗ ನೀವು ಅದನ್ನು ಸದುಪಯೋಗ ಮಾಡಿಕೊಂಡರೆ ನಿಮಗೆ ಉತ್ತಮ ಭವಿಷ್ಯವಿದೆ ಎಂದರು.



ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿ ಉತ್ತಮ ಸಾಧನೆ ಮಾಡಿರುವ ಹಿಂದಿನ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳನ್ನು ನೀವು ಮೆಲುಕು ಹಾಕಬೇಕು. ಈ ಕಾಲೇಜಿನಲ್ಲೇ ಓದಿದ ಶಿಲ್ಪಾ ಎಂಬುವರು ಈಗ ಗ್ರಾಮ ಪಂಚಾಯಿತಿ ಸದಸ್ಯರಾಗಿ ಈ ಊರಿನ ಪ್ರತಿಭೆ ಹೊರಹೊಮ್ಮಿದೆ. ನೀವು ಕೂಡ ಯಾವುದಾದರೂ ಒಂದು ಕ್ಷೇತ್ರದಲ್ಲಿ ನಿಮ್ಮ ಪ್ರತಿಭೆ ಅನಾವರಣಗೊಳ್ಳಬೇಕೆಂದು ಸಲಹೆ ನೀಡಿದರು.

ಮಾಯಕೊಂಡ ಕ್ಷೇತ್ರ ಅತೀ ಹಿಂದುಳಿದ ಪ್ರದೇಶವಾಗಿದೆ. ಇಲ್ಲಿ ಪದವಿ ಕಾಲೇಜು, ಪಿಯು ಕಾಲೇಜು, ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಇವೆ. ಮಕ್ಕಳ ಉಜ್ವಲ ಭವಿಷ್ಯಕ್ಕೆ ಮತ್ತು ಕಾಲೇಜುಗಳ ಅಭಿವೃದ್ಧಿಗೆ ಪ್ರತಿಯೊಬ್ಬರೂ ಗಮನ ಹರಿಸಬೇಕು. ಈ ಕಾಲೇಜಿನಲ್ಲಿ ನುರಿತ ಉಪನ್ಯಾಸಕರು ಇದ್ದಾರೆ. ನೀವು ಕೂಡ ಮಕ್ಕಳ ಉತ್ತಮ ಭವಿಷ್ಯಕ್ಕೆ ಹಗಲಿರುಳು ಶ್ರಮಿಸಬೇಕೆಂದು ಕಿವಿಮಾತು ಹೇಳಿದರು.

ಸರ್ಕಾರ ಸಂಬಳ ಕೊಡುತ್ತದೆ. ಏನಾದರೂ ಒಂದು ಕೆಲಸ ಮಾಡಿದರೆ ಸಾಕು, ಎಂಬ ಮನೋಭಾವನೆ ಬೆಳೆಸಿಕೊಳ್ಳದೆ ಜವಾಬ್ದಾರಿಯಿಂದ ಕೆಲಸ ಮಾಡಿ ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಬೇಕು. ಶೇ.90ರಷ್ಟು ಶಿಕ್ಷಕರು ಪ್ರಾಮಾಣಿಕವಾಗಿ ಕೆಲಸ ಮಾಡಿದರೆ, ಇನ್ನುಳಿದ ಶೇ.10ರಷ್ಟು ಶಿಕ್ಷಕರು ಮಾಡುವ ಬೇಜವಾಬ್ದಾರಿ ಕೆಲಸದಿಂದ ಇಡೀ ಶಿಕ್ಷಕ ಸಮೂಹಕ್ಕೆ ಕೆಟ್ಟ ಹೆಸರು ಬರುತ್ತದೆ. ಇಂತಹ ಕೆಲಸ ಮಾಡಬಾರದು. ಅಂತಹ ಶಿಕ್ಷಕರಿದ್ದರೆ ನಿರ್ಗಮಿಸಿ ಉತ್ತಮ ಶಿಕ್ಷಕರನ್ನು ತರುವ ಕೆಲಸ ಪ್ರಾಂಶುಪಾಲರು ಮಾಡಬೇಕೆಂದು ಸೂಚನೆ ನೀಡಿದರು.

ಈ ಹಿಂದೆ ಕಾಲೇಜಿನಲ್ಲಿ ಮಕ್ಕಳ ದಾಖಲಾತಿ ಸಂಖ್ಯೆ ಹೆಚ್ಚಳ ಮಾಡಬೇಕು ಎಂದು ಸೂಚನೆ ನೀಡಲಾಗಿತ್ತು. ಆದರೂ ಮಕ್ಕಳ ಸಂಖ್ಯೆ ಕುಂಠಿತವಾಗಿದೆ. ಪ್ರಸಕ್ತ ವರ್ಷ ಬಿಸಿಎ, ಬಿಎಸ್ಸಿ ಕೋರ್ಸ್ ಜಾರಿ ಆಗಿದೆ. ಮುಂದಿನ ದಿನಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಳ ಮಾಡುವುದರ ಕಡೆಗೆ ಹೆಚ್ಚು ಗಮನ ಹರಿಸಬೇಕು. ಪೋಷಕರ ಸಭೆ ಕರೆ ಮಕ್ಕಳನ್ನು ದಾಖಲಿಸಲು ಮನವೊಲಿಸಬೇಕು. ಒಂದು ಬಾರಿ ಪದವಿ ಕಾಲೇಜು ಕಳೆದುಕೊಂಡರೆ ಮತ್ತೆ ಸಿಗುವುದು ಕಷ್ಟವಾಗುತ್ತದೆ. ಈ ನಿಟ್ಟಿನಲ್ಲಿ ಉಪನ್ಯಾಸಕರು ಮಕ್ಕಳ ಸಂಖ್ಯೆ ಹೆಚ್ಚಳ ಮಾಡುವುದರ ಕಡೆ ಗಮನ ಹರಿಸಬೇಕೆಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ತ್ರಿವೇಣಿ, ಸಾಂಸ್ಕೃತಿಕ ವೇದಿಕೆ ಸಂಚಾಲಕ ದಿನೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಸಾಕಮ್ಮ ಲಿಂಗಪ್ಪ, ಉಪಾಧ್ಯಕ್ಷರಾದ ಶಿವಮ್ಮ ಮಲ್ಲಿಕಾರ್ಜುನಪ್ಪ, ಮುಖಂಡರಾದ ಗೋಪಾಲಣ್ಣ, ಜಗಣ್ಣ, ಮಂಜಣ್ಣ, ಕೃಷ್ಣಮೂರ್ತಿ ಹಾಗೂ ವಿದ್ಯಾರ್ಥಿಗಳು ಇದ್ದರು.

### ಮೌನ ಮುರಿದ ಸಿದ್ದರಾಮಯ್ಯ

# ಇದರಲ್ಲಿ ನನ್ನ ತಪ್ಪೇನು? 2 ಗಂಟೆಗಳ ಕಾಲ ನನಗೆ ಘಟನೆ ಬಗ್ಗೆ ತಿಳಿಸಿರಲಿಲ್ಲ

ಬೆಂಗಳೂರು: ಆರ್ ಸಿಬಿ ವಿಜಯೋತ್ಸವ ಆಚರಣೆ ಸಂಬಂಧ ಬುಧವಾರ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಸಾವನ್ನಪ್ಪಿದ್ದರು. ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ದುರಂತದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೌನ ಮುರಿದಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಪ್ರತಿಭಟನೆಗಳು ರಾಜಕೀಯ ಪ್ರೇರಿತ ಎಂದು ಹೇಳಿದ್ದಾರೆ. ಪೊಲೀಸ್ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ.

ದುರಂತದ ದಿನದಂದು ವಿಧಾನಸೌಧದಲ್ಲಿ ಹಾಜರಿದ್ದ ಬಗ್ಗೆ ಸ್ಪಷ್ಟಪಡಿಸಿದ ಅವರು, "ನನ್ನನ್ನು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಆಹ್ವಾನಿಸಲಾಗಿಲ್ಲ. ಮಧ್ಯಾಹ್ನ 3.50 ಕ್ಕೆ ಕಾಲ್ತುಳಿತ ಸಂಭವಿಸಿದೆ, ಆದರೆ ಸಂಜೆ 5.45 ಕ್ಕೆ ನನಗೆ ಮಾಹಿತಿ ನೀಡಲಾಯಿತು. ನಗರ ಪೊಲೀಸ್ ಆಯುಕ್ತರು ನನಗೆ ಮೊದಲು ಮಾಹಿತಿ ನೀಡಬೇಕಿತ್ತು. ಆದರೆ ನನಗೆ ಮಾಹಿತಿ ನೀಡಿಲ್ಲ. ಕರ್ತವ್ಯಲೋಪ ಮಾಡಿದವರ ಮೇಲೆ ಕ್ರಮವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ನಗರ ಪೊಲೀಸ್? ಆಯುಕ್ತ ದಯಾನಂದ ಅವರ ಅಮಾನತ್ತನ್ನು ಸಮರ್ಥಿಸಿಕೊಂಡರು

ಪೊಲೀಸ್ ಅಧಿಕಾರಿಗಳನ್ನು ಬೆದರಿಸಿದ್ದಾರೆ ಎಂದು ಬಿಜೆಪಿ ಮತ್ತು ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್‌ಡಿ ಕುಮಾರಸ್ವಾಮಿ ಅವರ ಆರೋಪಗಳನ್ನು ತಳ್ಳಿಹಾಕಿದ ಅವರು, " ಇದರಲ್ಲಿ ನನ್ನ ತಪ್ಪೇನು? ಪೊಲೀಸರ ಮೇಲೆ ಬಿಜೆಪಿಗೆ ಹಠಾತ್ ಪ್ರೀತಿಬಂದಿರುವುದು ರಾಜಕೀಯ ನಾಟಕವಲ್ಲದೆ ಬೇರೇನೂ ಅಲ್ಲ. ಅವರೇ ನ್ಯಾಯಾಂಗ ತನಿಖೆಗೆ ಒತ್ತಾಯಿಸಿದರು – ನಾವು ಅದಕ್ಕೆ ಒಪ್ಪಿದ್ದೇವೆ. ಹಾಗಾದರೆ ಈಗ ಸಮಸ್ಯೆ ಏನು? ಎಂದು ಸಿಎಂ ಪ್ರಶ್ನಿಸಿದ್ದಾರೆ.

ವಿಧಾನಸೌಧದ ಭದ್ರತಾ ಮುಖ್ಯಸ್ಥ ಡಿಸಿಪಿ ಎಂ.ಎನ್. ಕರಿಬಸವನ ಗೌಡ ಅವರು ಸೌಧದಲ್ಲಿ ಸನ್ಮಾನ ಸಮಾರಂಭ ನಡೆಸದಂತೆ ಎಚ್ಚರಿಕೆ ನೀಡಿದಾಗ, ಪೊಲೀಸ್ ಅಧಿಕಾರಿಗಳು ಕಾರ್ಯಕ್ರಮಕ್ಕೆ ಷರತ್ತುಗಳನ್ನು ವಿಧಿಸಿದ್ದರು ಎಂದು ಸ್ಪಷ್ಟಪಡಿಸಿದರು, ಆದರೆ ಅವುಗಳನ್ನು ನಿರ್ವಹಿಸಲಾಯಿತು. ಪೊಲೀಸರು ತೆಗೆದುಕೊಂಡ ಕ್ರಮಗಳಿಗೆ ಒಪ್ಪಿಕೊಂಡು ಅದಕ್ಕೆ ಅನುಗುಣವಾಗಿ ಕಾರ್ಯಕ್ರಮ ನಡೆಸಿದ್ದಾರೆ, ಅದರಲ್ಲಿ ತಪ್ಪು ಎಲ್ಲಿದೆ" ಎಂದು ಅವರು ಕೇಳಿದರು.



ನನಗೆ ನೇರವಾಗಿ ಮಾಹಿತಿ ನೀಡಲಾಗಿಲ್ಲ. ಘಟನೆ ವಿಧಾನಸೌಧದ ಒಳಗೆ ನಡೆದಿಲ್ಲ. ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮವನ್ನು ನಾವು ಆಯೋಜಿಸಿಲ್ಲ. ಸತ್ಯವತಿಯನ್ನು ದೂಷಿಸುವುದು ಸರಿಯಲ್ಲ. ಘಟನೆ ಬೇ–ರೆಡೆ ನಡೆದಾಗ ಅವರ ವಿರುದ್ಧ ಏಕೆ ಕ್ರಮ ಕೈಗೊಳ್ಳಬೇಕು" ಎಂದು ಅವರು ಕೇಳಿದರು.

ಭದ್ರತಾ ವ್ಯವಸ್ಥೆಗಳ ಬಗ್ಗೆ ಮಾಹಿತಿ ನೀಡುವುದು ಪೊಲೀಸ್ ಆಯುಕ್ತರ ಜವಾಬ್ದಾರಿಯಾಗಿದೆ , ಅದು ಆಗಲಿಲ್ಲ. "ಪೊಲೀಸರು ಕಾರ್ಯಕ್ರಮಕ್ಕೆ ಅನುಮತಿ ನೀಡಿದ್ದಾರೆ ಎಂದು ನನ್ನ ಕಾರ್ಯದರ್ಶಿ ನನಗೆ ಹೇಳಿದರು. ಅದರ ಆಧಾರದ ಮೇಲೆ ನಾನು ಒಪ್ಪಿದೆ ಎಂದು ಎಂದು ಮುಖ್ಯಮಂತ್ರಿ ಹೇಳಿದರು. ಪೊಲೀಸ್ ಆಯುಕ್ತರನ್ನು ಮಾತ್ರವಲ್ಲದೆ ಐದು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ, ತಮ್ಮ ಆಪ್ತ ಕಾರ್ಯದರ್ಶಿ ಗೋವಿಂದರಾಜ್ ಅವರನ್ನು ಸಹ ತೆಗೆದುಹಾಕಲಾಗಿದೆ. "ನಾವು ನಿಜವಾಗಿಯೂ ತಪ್ಪಿತಸ್ಥರಾಗಿದ್ದರೆ, ಅದು ಸರ್ಕಾರಕ್ಕೆ ಕಪ್ಪು ಚುಕ್ಕೆಯಾಗುತ್ತಿತ್ತು. ಆದರೆ ನಮ್ಮ ಕಡೆಯಿಂದ ಯಾವುದೇ ತಪ್ಪಿಲ್ಲ ಎಂದು ಸಿಎಂ ಸಮರ್ಥಿಸಿಕೊಂಡಿದ್ದಾರೆ.

ಸರ್ಕಾರದ ವರ್ಚಸ್ಸಿಗೆ ಕಾಲ್ತುಳಿತ ಪ್ರಕರಣ ಧಕ್ಕೆ ತಂದಿದೆ ಎಂಬ ಕುಮಾರಸ್ವಾಮಿಯವರ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಉದ್ಘಾಟನಾ ದಿನದಂದು ಸೇತುವೆ ಕುಸಿದು ಕುಂಭಮೇಳದಲ್ಲಿ ಕಾಲ್ತುಳಿತ ಸಂಭವಿಸಿದಾಗ ಬಿಜೆಪಿ ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ ಎಂದು ಅವರು ಹೇಳಿದರು.

ಆರ್‌ಸಿಬಿ ರೋಡ್ ಶೋಗೆ ಅವಕಾಶ ನೀಡದಿದ್ದಕ್ಕಾಗಿ ಬಿಜೆಪಿ ಆರಂಭದಲ್ಲಿ ಸರ್ಕಾರ ಮತ್ತು ಗೃಹ ಸಚಿವ ಜಿ ಪರಮೇಶ್ವರ ಅವರನ್ನು ಟೀಕಿಸಿತ್ತು ಎಂದು ಅವರು ಗಮನಸೆಳೆದರು. ಸರ್ಕಾರವು ತಮ್ಮ ನೆಚ್ಚಿನ ಕ್ರಿಕೆಟಿಗರನ್ನು ಹತ್ತಿರದಿಂದ ನೋಡಲು ಪೆರೇಡ್‌ಗೆ ಅವಕಾಶ ನೀಡುತ್ತಿಲ್ಲ ಎಂದು ಬಿಜೆಪಿ ಹೇಳಿತ್ತು. ಆದರೆ ಕಾಲ್ತುಳಿತದ ನಂತರ ಅವರು ತಮ್ಮ ವರಸೆ ಬದಲಾಯಿಸಿದರು ಎಂದು ಅವರು ಹೇಳಿದರು.

ಕಳೆದ ಏಳು ತಿಂಗಳಿನಿಂದ 5,000 ನರೇಗಾ ಉದ್ಯೋಗಿಗಳಿಗೆ ಸಂಬಳ ಪಾವತಿಸದಿರುವ ಬಗ್ಗೆ ಮಾತನಾಡಿದ ಅವರು ಕೇಂದ್ರವು ಎನ್‌ಆರ್‌ಇಜಿಎ ಹಣವನ್ನು ಸಮಯಕ್ಕೆ ಸರಿಯಾಗಿ ಬಿಡುಗ–'ಡೆ ಮಾಡುತ್ತಿಲ್ಲ, ಇದು ಸಮಸ್ಯೆಯನ್ನುಂಟುಮಾಡುತ್ತಿದೆ ಎಂದು ಅವರು ಹೇಳಿದರು. ಇದು ಇತರ ರಾಜ್ಯಗಳಲ್ಲಿಯೂ ನಡೆಯುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಸಂಗೂರ ಜಿಎಂ ಶುಗರ್ಸ್ ಕಾರ್ಖಾನೆಗೆ ರೈತರಿಗೆ ಹಣ ಸಂದಾಯ ಮಾಡುವಂತೆ ಒತ್ತಾಯಿಸಿ ಬೀಗ ಜಡಿದು ರೈತರ ಪ್ರತಿಭಟನೆ



**ಹಾವೇರಿ :** ತಾಲ್ಲೂಕಿನ ಸಂಗೂರ ಜಿಎಂ ಶುಗರ್ಸ್ ಕಾರ್ಖಾನೆಗೆ ರೈತರಿಗೆ ಹಣ ಸಂದಾಯ ಮಾಡುವಂತೆ ಒತ್ತಾಯಿಸಿ ಬೀಗ ಜಡಿದು ರೈತರು ಪ್ರತಿಭಟನೆ ಮಾಡಿದರು.

2024–25 ಹಂಗಾಮಿನಲ್ಲಿ 2 ಲಕ್ಷ ಟನ್ ಕಬ್ಬನ್ನು ಕಾರ್ಖಾನೆಯಲ್ಲಿ ಕಬ್ಬು ಅರೆದಿದ್ದು ಈ ವರ್ಷದ ಎಫ್‌ಆರ್‌ಪಿ ದರ ರೂ.3151 ಇದ್ದು ಅದರಲ್ಲಿ 3035 ರೂಪಾಯಿ ಹಣವನ್ನು ಹಾಕಿದ್ದಾರೆ ಇನ್ನು ಉಳಿದ 116 ರೂಪಾಯಿ ಹಣವನ್ನು ಕಾರ್ಖಾನೆಗೆ ಕಬ್ಬು ಸಾಗಿಸಿ ಏಳು ತಿಂಗಳು ಆದರೂ ರೈತರಿಗೆ ಹಣ ಸಂದಾಯ ಮಾಡಿಲ್ಲ. ರೈತರು ಪದೇ ಪದೇ ಕಾರ್ಖಾನೆಗೆ ಅಡ್ಡಾಡಿದರು ಸರಿಯಾದ ಮಾಹಿತಿಯನ್ನು ಕೊಡುತ್ತಿಲ್ಲ ಜಿಲ್ಲಾ ಫುಡ್ ಡಿಡಿ ಅವರು ಆಗಮಿಸಿದರು ಅವರಿಗೂ ಸರಿಯಾದ ಮಾಹಿತಿಯನ್ನು ಕೊಟ್ಟಿರುವುದಿಲ್ಲ ಸರ್ಕಾರಕ್ಕೆ ತಪ್ಪು ಮಾಹಿತಿಯನ್ನು ತೋರಿಸಿದ್ದಾರೆ ರೈತರಿಗೆ ಯಾವುದೇ ತರ ಬಿಲ್ಲನ್ನು ಕೊಡುವುದಿಲ್ಲ ಎಂದು ಹೇಳಿದ್ದಾರೆ ಸರ್ಕಾರಕ್ಕೆ ಸಹಿತ ಅದೇ ರೀತಿ ತಪ್ಪು ಮಾಹಿತಿಯನ್ನು ಕೊಟ್ಟಿದ್ದಾರೆ ಅದು ಎಲ್ಲ ರೈತರಿಗೆ ತಿಳಿದಾಗ ರೈತರು ರೊಚ್ಚಿಗೆದ್ದು ಕಾರ್ಖಾನೆ ಎದುರುಗಡೆ ಪ್ರತಿಭಟನೆ ಮಾಡಿ ಕಾರ್ಖಾನೆ ಇಂದ ಹೊರಹೋಗುವ ಮೂರು ಗೇಟುಗಳನ್ನು ಬಂದ್ ಮಾಡಿದ್ದಾರೆ ಸುಮಾರು 25 ಲಾರಿಗಳು ಸಕ್ಕರೆಯನ್ನು ತುಂಬಿ ನಿಂತಿವೆ ಪ್ರತಿದಿನ ಸಕ್ಕರೆ ಮಾರಿದರು ಕಾರ್ಖಾನೆ ಗುತ್ತಿಗೆದಾರ ರೈತರಿಗೆ ಬರಬೇಕಾದ (ಎರಡು ಕೋಟಿ ಮೂವತ್ತೆರಡು ಲಕ್ಷ ಅರವತ್ತು ಸಾವಿರ)

### ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನದ ಜಿಲ್ಲಾ ಸಮ್ಮೇಳನ

# ದಲಿತ ಸಂಘಟನೆಗಳ ಪುನಶ್ಚೇತನ ಅವಶ್ಯ




**ದಾವಣಗೆರೆ:** ಎಂಬತ್ತರ ದಶಕದಲ್ಲಿ ಉಚ್ಛ್ರಾಯ ಸ್ಥಿತಿಯಲ್ಲಿದ್ದ ದಲಿತ ಸಂಘಟನೆಗಳು ವಿಘಟನೆಯಾಗಿವೆ. ಅವುಗಳನ್ನು ಪುನಶ್ಚೇತನಗೊಳಿಸುವ ಅವಶ್ಯವಿದೆ ಎಂದು ಎಐಡಿಆರ್‌ಎಂ ರಾಜ್ಯಾಧ್ಯಕ್ಷ ಡಾ.ಜನಾರ್ಧನ್ ಹೇಳಿದರು.

ನಗರದ ಕಾಂ. ಪಂಪಾಪತಿ ಭವನದಲ್ಲಿ ನಡೆದ ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನದ ಜಿಲ್ಲಾ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಾತಿಯ ಹೆಸರಿನಲ್ಲಿ ಅತ್ಯಂತ ಶೋಷಣೆಗೆ ಒಳಗಾಗಿರುವವರು ದಲಿತರು. ಹನ್ನೆರಡನೇ ಶತಮಾನದ ಶರಣರು ಈ ಸಮಸ್ಯೆಗೆ ಅಂದೇ ಉತ್ತರ ಹೇಳಿದ್ದಾರೆ.ಸಮ ಸಮಾಜದ ಕನಸನ್ನು ಕಟ್ಟುವವರ ಅವರ ಆಶಯಗಳನ್ನು ನಾವು ಮುಂದುವರೆಸಿಕೊಂಡು ಹೋಗಬೇಕೆಂದು ಕಾರ್ಲ್ ಮಾರ್ಕ್ಸ್ ಹೇಳುತ್ತಾರೆ. ಭೂಮಿ ಸರ್ಕಾರದ ಕೈಯ್ಯಲ್ಲಿರಬೇಕು. ಕೈಗಾರಿಕೆಗಳು ಸಾರ್ವಜನಿಕ ಸ್ವತ್ತಾಗಬೇಕು ಎಂದು ಅಂಬೇಡ್ಕರ್ ಹೇಳಿದ್ದಾರೆ. ಇವರಿಬ್ಬರ ನಡುವಿನ ವ್ಯತ್ಯಾಸವನ್ನು ಸೃಷ್ಟಿ ಮಾಡುವ ಮೂರ್ಖರೂ ಇದ್ದಾರೆ. ಆದ್ದರಿಂದ ನಾವು ಎಚ್ಚರದಿಂದ ಇರಬೇಕೆಂದು ಹೇಳಿದರು.

1920 ಕ್ಕಿಂತ ಮೊದಲಿನಿಂದಲೂ ದಲಿತ ಹಕ್ಕುಗಳಿಗಾಗಿ ಸಿಪಿಐ ಹೋರಾಟ ಮಾಡುತ್ತಾ ಬಂದಿದೆ. ಕೆಲವರು ಇದನ್ನು ದಿಕ್ಕು ತಪ್ಪಿಸುವ ಸಲುವಾಗಿ ಅಪಪ್ರಚಾರ ಮಾಡುವವರಿದ್ದಾರೆ. ಶೋಷಿತ ಸಮುದಾಯದ ಮಧ್ಯೆ ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿದೆ. ನಾವು ಅದನ್ನು ಒಂದು ಆಂದೋಲನವೆಂದು ಕರೆಯುತ್ತೇವೆ ಎಂದರು.

ಎಲ್ಲಾ ದಲಿತ ಸಂಘಟನೆಗಳನ್ನು ಸೇರಿಸಿ ಕೊಂಡು ಹೋರಾಟ ಮಾಡುವ ಉದ್ದೇಶದಿಂದ ದೂರು ದೃಷ್ಟಿಯ ಆಲೋಚನೆಗಳಿಂದಾಗಿ ದಲಿತ ಹಕ್ಕುಗಳಿಗಾಗಿ ಹೋರಾಟ ಮಾಡುತ್ತೇವೆ. ಎಂಬತ್ತರ ದಶಕದಲ್ಲಿ ಅತ್ಯಂತ ಉಚ್ಛ್ರಾಯ ಸ್ಥಿತಿಯಲ್ಲಿದ್ದ ದಲಿತ ಸಂಘಟನೆಗಳು ವಿಘಟನೆಗೊಂಡಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇತ್ತೀಚಿನ ದಿನಗಳಲ್ಲಿ ದಲಿತ ಮಹಿಳೆಯರನ್ನು ಕೀಳಾಗಿ ಕಾಣಲಾಗುತ್ತಿದೆ. ದೇವದಾಸಿ ಪದ್ಧತಿಯಲ್ಲಿರುವವರು ದಲಿತ ಮಹಿಳೆಯರು. ಈ ಬಗ್ಗೆ ಜಾಗೃತಿ ಮೂಡಿಸುವ ಮೂಲಕ ಆ ಪದ್ಧತಿಯನ್ನು ಹೋಗಲಾಡಿಸಬೇಕಾಗಿದೆ ಎಂದು ಹೇಳಿದರು.

ಸಿಪಿಐ ಜಿಲ್ಲಾ ಕಾರ್ಯದರ್ಶಿ ಆವರಗೆರೆ ಚಂದ್ರು ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಾರ್ಯಕರ್ತರು ಹಳ್ಳಿಗಳಿಗೆ, ನಗರದ ಕೆಲವು ಏರಿಯಾಗಳಿಗೆ ತೆರಳಿ ಎಲ್ಲಾ ಜಾತಿಯ ಬಡವರ ಪರವಾಗಿ ಅವರ ಹಕ್ಕುಗಳನ್ನು ಕೊಡಿಸಲು ಸಂಘಟನೆ ಮಾಡುವ ಮೂಲಕ ಸಂಘಟನೆಯ ಬಲವರ್ಧನೆಗೆ ಮುಂದಾಗಬೇಕೆಂದರು.

ಸಿಪಿಐ ಜಿಲ್ಲಾ ಸಹ ಕಾರ್ಯದರ್ಶಿ ಆವರಗೆರೆ ಹೆಚ್.ಜಿ. ಉಮೇಶ್, ಮುಖಂಡರಾದ ಪಿ. ಷಣ್ಮುಖಸ್ವಾಮಿ, ಎಸ್.ಎಸ್. ಮಲ್ಲಮ್ಮ, ವಿ. ಲಕ್ಷ್ಮಣ್, ಜಿ. ಯಲ್ಲಪ್ಪ, ನರೇಗಾ ರಂಗನಾಥ್, ಶೇಖರನಾಯ್ಕ ಮತ್ತಿತರರು ಮಾತನಾಡಿದರು.

ಯುವ ಮುಖಂಡ ಕೆರನಹಳ್ಳಿ ರಾಜು ಸ್ವಾಗತಿಸಿದರು. ಎ. ತಿಪ್ಪೇಶ್ ವಂದಿಸಿದರು.

## ರೈಲ್ವೆ ರಕ್ಷಣಾ ಪಡೆಯಿಂದ 'ಆಪರೇಷನ್ ನಾರ್ಕೋಸ್': ಮಾದಕ ವಸ್ತುಗಳ ವಶ



**ದಾವಣಗೆರೆ:** "ಆಪರೇಷನ್ ನಾರ್ಕೋಸ್" ಎಂಬ ವಿಶೇಷ ಕಾರ್ಯಚರಣೆ–ಯ ಅಡಿಯಲ್ಲಿ, ನೈಋತ್ಯ ರೈಲ್ವೆ ಮೈಸೂರು ವಿಭಾಗದ ರೈಲ್ವೆ ರಕ್ಷಣಾ ಪಡೆಯ (ಆರ್‌ಪಿಎಫ್) ವಿಶೇಷ ತಂಡವು, ರೈಲು ಸಂಖ್ಯೆ 18111 ಟಾಟಾ ಯಶವಂತಪುರ ಎಕ್ಸ್‌ಪ್ರೆಸ್ ನಲ್ಲಿ ಬೀರೂರು ಮತ್ತು ಕಡೂರು ನಿಲ್ದಾಣಗಳ ನಡುವೆ ಅಚ್ಚರಿ ತಪಾಸಣೆಯನ್ನು ನಡೆಸಿತು.

ಈ ಕಾರ್ಯಚರಣೆ ಮೈಸೂರು ವಿಭಾಗದ ಹಿರಿಯ ವಿಭಾಗೀಯ ಸುರಕ್ಷತಾ ಆಯುಕ್ತರಾದ ಸ್ಯಾಮ್ ಪ್ರಸಾಂತ್ ಜೆ.ಆರ್. ಅವರ ನೇತೃತ್ವದಲ್ಲಿ ನಡೆಯಿತು. ತಂಡದಲ್ಲಿ ಆನಂದ ಬಿ. (ಂಖಿಖ/ಅಖಿಃ/ಒಜಖ, ಕ್ರೈಮ್ ಪ್ರಿವೆನ್ಷನ್ ಡಿಟೆಕ್ಷನ್ ತಂಡದ ಉಸ್ತುವಾರಿ), ಶಿವನಂದ ಟಿ., ಹೆಡ್ ಕಾನ್ಸ್ಟೇಬಲ್, ದಾವಣಗೆರೆ ಮತ್ತು ಸಿ. ವೆಂಕಟೇಶ (ASI/RPF/RRB) ಇದ್ದರು.

ಪರಿಶೀಲನೆಯ ಸಂದರ್ಭದಲ್ಲಿ, ತಂಡವು ಜನರಲ್ ಕೋಚ್ ಸಂಖ್ಯೆ ಖಘಖ 247321 ರಲ್ಲಿ ಪ್ರಾಥಮಿಕ ತನಿಖೆಯಿಂದ ನಿಖರವಾದ ಬ್ಯಾಗ್ ಅನ್ನು ಪತ್ತೆಹಚ್ಚಿತು. ಹತ್ತಿರದ ಪ್ರಯಾಣಿಕರಿಂದ ಮಾಹಿತಿ ಪಡೆದುಕೊಂಡರೂ ಯಾರೂ ಇದನ್ನು ತಮ್ಮದು ಎಂದು ಹೇಳಲಿಲ್ಲ. ಅನುಮಾನಾಸ್ಪದ ಪರಿಸ್ಥಿತಿಯಲ್ಲಿ ಬ್ಯಾಗ್ ತೆರೆಯಲಾಗಿದ್ದು, ಅದರಲ್ಲಿ ಸುಮಾರು 1,25,000 ರೂ. ಮೌಲ್ಯದ 25 ಗ್ರಾಂ ಎಂಡಿಎಂಎ (ಕೃತಕ ಮಾದಕ ವಸ್ತು), 90,000 ರೂ.ಮೌಲ್ಯದ 1.522 ರೂಂ. ಕೆ.ಜಿ ಗಾಂಜಾ ಮತ್ತು 1,850 ಮೌಲ್ಯದ 210 ಗ್ರಾಂ ತೂಕದ 37 ಭಾಂಗ್ ಚಾಕೊಲೇಟ್‌ಗಳನ್ನು ಪತ್ತೆಹಚ್ಚಲಾಯಿತು. ವಶಪಡಿಸಿಕೊಂಡ ಮಾದಕ ವಸ್ತುಗಳ ಒಟ್ಟು ಅಂದಾಜು ಮೌಲ್ಯ 2,16,850 ರೂಪಾಯಿಗಳು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ನೀವು ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ. ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಯಾರಾದರೂ ನಿಮ್ಮನ್ನು ಶ್ಲಾಘಿಸಬಹುದು. ಇದು ಒಂದು ಅನುಕೂಲಕರವಾದ ದಿನ, ಕೆಲಸದಲ್ಲಿ ಇದನ್ನು ಸೂಕ್ತವಾಗಿ ಬಳಸಿಕೊಳ್ಳಿ.

### ಮಿಥುನ ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕರ್ಕ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ. ಇದು ವೈಯಕ್ತಿಕ ಜೀವನವನ್ನು ಘಾಸಿಗೊಳಿಸದೇ ನಿಮಗೆ ಮಾನಸಿಕ ಶಾಂತಿ ನೀಡುತ್ತದೆ. ನೀವು ಎರಡಕ್ಕೂ ಸಮನಾದ ಗಮನ ನೀಡಬೇಕು ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಸಿಂಹ ರಾಶಿ

ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಚುಡಾಯಿಸುತ್ತೀರಿ.

### ಕನ್ಯಾ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ನಿಮಗೆ ಆಕರ್ಷಕವಾಗಿ ತೊರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಜಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ.

### ತುಲಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ. ಬಾಕಿಯಿರುವ ಯೋಜನೆಗಳು ಅಂತಿಮ ರೂಪ ಪಡೆಯುತ್ತವೆ.

### ವೃಶ್ಚಿಕ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಮಕರ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

### ಕುಂಭ ರಾಶಿ

ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

### ಮೀನ ರಾಶಿ

ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಕುಟುಂಬದ ಸದಸ್ಯರೊಂದಿಗೆ ನಿಮ್ಮ ಸಮಸ್ಯೆಗಳನ್ನು ಹಂಚಿಕೊಂಡು ನೀವು ಒಳಿಯದನ್ನು ಅನುಭವಿಸಬಹುದು ಆದರೆ ಕೊಲವೊಮ್ಮೆ ನೀವು ನಿಮ್ಮ ಅಹಂಕಾರವನ್ನು ಮುಂದೆ ಇಟ್ಟುಕೊಂಡು ಕುಟುಂಬ ಸದಸ್ಯರಿಗೆ ಪ್ರಮುಖ ವಿಷಯಗಳನ್ನು ಹೇಳುವುದಿಲ್ಲ.

# ಕುತೂಹಲ ಕೆರಳಿಸಿದೆ ಗೃಹ ಸಚಿವ ಪರಮೇಶ್ವರ್ ಹಾಗೂ ಕೇಂದ್ರ ಸಚಿವ ಸೋಮಣ್ಣ ಭೇಟಿ

**ಬೆಂಗಳೂರು:** ಗೃಹ ಸಚಿವ ಡಾ. ಜಿ ಪರಮೇಶ್ವರ್ ಇಂದು ಬೆಳಗ್ಗೆ ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ ಅವರನ್ನು ಭೇಟಿ ಮಾಡಿರುವುದು ಕುತೂಹಲ ಕೆರಳಿಸಿದೆ. ಪರಮೇಶ್ವರ್ ಅವರ ಶೈಕ್ಷಣಿಕ ಸಂಸ್ಥೆಗಳ ಮೇಲೆ ಇತ್ತೀಚೆಗೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿ, ಎರಡು ದಿನ ದಾಖಲಾತಿಗಳ ಪರಿಶೋಧನೆ ನಡೆಸಿದ್ದರು.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದಿದ್ದ ಕಾಲ್ತುಳಿತ ಪ್ರಕರಣದಲ್ಲಿ ಹನ್ನೊಂದು ಮಂದಿ ಅಮಾಯಕರು ಜೀವ ಕಳೆದುಕೊಂಡಿದ್ದರು. ಈ ಪ್ರಕರಣದಲ್ಲಿ ಬಿಜೆಪಿ ಆರಂಭದಲ್ಲಿ ಸಚಿವ ಪರಮೇಶ್ವರ್ ಅವರ ರಾಜೀನಾಮೆಗೆ ಒತ್ತಾಯಿಸಿತ್ತು.

ಇದ್ದಕ್ಕಿದ್ದಂತೆ ಬಿಜೆಪಿಯ ಬೇಡಿಕೆ ಬದಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ರಾಜೀನಾಮೆಗೆ ವಿರೋಧ ಪಕ್ಷಗಳು ಪಟ್ಟು ಹಿಡಿದಿವೆ. ಸೋಮಣ್ಣ ಅವರು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿದ್ದಾರೆ. ಆದರೆ ಪರಮೇಶ್ವರ್ ವಿಷಯ ಬಂದಾಗ ಮೃದು ಧೋರಣೆ ಅನುಸರಿಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಸೋಮಣ್ಣ ಮತ್ತು



ಪರಮೇಶ್ವರ್ ಭೇಟಿ ನಾನಾ ಚರ್ಚೆಗಳಿಗೆ ಕಾರಣವಾಗಿದೆ.ಸೋಮಣ್ಣ ಅವರ ಭೇಟಿಯ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡುವ ವೇಳೆ ಸಚಿವ ಪರಮೇಶ್ವರ್ ಸ್ಪಷ್ಟನೆ ನೀಡಿದ್ದಾರೆ. ಬೆಂಗಳೂರಿನಿಂದ ತುಮಕೂರಿಗೆ ಹೋಗುವಾಗ ಕಣ್ಣು ಮುಚ್ಚಿ ತೆಗೆಯುವಷ್ಟರಲ್ಲಿ ತಲುಪಿರುತ್ತೇವೆ. ತುಮಕೂರು ಎಲ್ಲಿ ಇದೆ ಎಂಬುದೇ ಗೊತ್ತಾಗುವುದಿಲ್ಲ. ಅದಕ್ಕಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ತುಮಕೂರು ಪ್ರದೇಶದ ಆರಂಭದಲ್ಲಿ ಸ್ವಾಗತ ಕಮಾನು ಅಳವಡಿಸಲು ಸ್ಮಾರ್ಟ್ ಸಿಟಿ ಯೋಜನೆಯಲ್ಲಿ 5 ಕೋಟಿ ರೂ.ಗಳನ್ನು ಮೀಸಲಿರಿಸಲಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿಯ ಪ್ರಾಧಿಕಾರದ ಸ್ಥಳೀಯ ನಿರ್ದೇಶಕರು ಸ್ವಾಗತಕಮಾನು ಅಳವಡಿಕೆಗೆ ಅನುಮತಿ ನಿರಾಕರಿಸಿದ್ದಾರೆ. ಇದಕ್ಕಾಗಿ ಸೋಮಣ್ಣ ಅವರನ್ನು ಭೇಟಿ ಮಾಡಿ ಕೇಂದ್ರ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರಿಂದ ಅನುಮತಿ ಕೊಡಿಸುವಂತೆ ಮನವಿ ಮಾಡಿದ್ದೇನೆ ಎಂದರು. ರಾಮನಗರವನ್ನು ಬೆಂಗಳೂರಿಗೆ ಸೇರಿಸಿಕೊಂಡಂತೆ ತುಮಕೂರನ್ನು ಅಭಿವೃದ್ಧಿ ದೃಷ್ಟಿಯಿಂದ ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಸೇರಿಸುವಂತೆ ಮನವಿ ಮಾಡಿದ್ದೇವೆ.ತುಮಕೂರಿಗೆ ಮೆ ಟ್ರೋ ರೈಲ್ವೆ ಯೋಜನೆ ನಿರ್ಮಾಣವಾಗಬೇಕು ಎಂಬ ಬೇಡಿಕೆಗೆ ಸೋಮಣ್ಣ ಕೂಡ ಬೆಂಬಲ ವ್ಯಕ್ತ ಪಡಿಸಿದ್ದಾರೆ. ಈ ನಿಟ್ಟಿನಲ್ಲಿ ಇಂದು ಸೋಮಣ್ಣ ಅವರ ಜೊತೆ ಚರ್ಚೆ ನಡೆಸಲಾಗಿದೆ ಎಂದರು.

ಮೆಟ್ರೊ ಮತ್ತು ಸಬರ್‌ಬಂದ್ ರೈಲ್ ಎರಡೂ ಕೂಡ ತುಮೂರಿಗೆ ಬರುವುದು ಒಳ್ಳೆಯದು. ಅಲ್ಲಿ ಬೃಹತ್ ಕೈಗಾರಿಕಾ ಪಾರ್ಕ್ ನಿರ್ಮಾಣವಾಗಿದೆ. ಉದ್ಯೋಗವಕಾಶಗಳು ಹೆಚ್ಚುತ್ತಿವೆ ಎಂದರು.ಜಿಲ್ಲೆಯಿಂದ ಹಲವರು ನೀರಾವರಿ ಯೋಜನೆಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಅವುಗಳ ಅಂಗೀಕಾರಕ್ಕೆ ಸಂಬಂಧ ಪಟ್ಟಂತೆಯೂ ಸೋಮಣ್ಣ ಅವರೊಂದಿಗೆ ಚರ್ಚಿಸಲಾಗಿದೆ. ಅವರು ನೀರಾವರಿ ಸಚಿವರಾಗಿರವುದರಿಂದ ಶೀಘ್ರ ನಿರ್ಧಾರ ತೆಗೆದುಕೊಳ್ಳಲು ಅನುಕೂಲವಾಗಲಿದೆ ಎಂದರು.

# ಇಂದಿನಿಂದ ಜೂ.13ರವರೆಗೂ ಮಳೆ ಸಾಧ್ಯತೆ ಹೆಚ್ಚು

**ಬೆಂಗಳೂರು:** ನೈಋತ್ಯ ಮುಂಗಾರು ರಾಜ್ಯದಲ್ಲಿ ಕಳೆದ ಎರಡು ದಿನಗಳಿಂದ ಚೇತರಿಕೆಯಾಗಿದ್ದು, ಇಂದಿನಿಂದ ಮಳೆ ಪ್ರಮಾಣ ಹೆಚ್ಚಾಗಲಿದೆ. ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಈ ವಾರಾಂತ್ಯದವರೆಗೂ ರಾಜ್ಯದಲ್ಲಿ ಮಳೆ ಮುಂದುವರೆಯಲಿದೆ. ನಿನ್ನೆ ರಾಜ್ಯದ ಹಲವೆಡೆ ಮಳೆಯಾಗಿದ್ದು, ಕೆಲವೆಡೆ ಭಾರೀ ಮಳೆಯಾಗಿದ್ದರೆ, ಹಲವೆಡೆ

ವಿಜಯನಗರ, ದಕ್ಷಿಣ ಕನ್ನಡ, ಉಡುಪಿ, ವಿಜಯಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ರಾಯಚೂರು, ಬೆಂಗಳೂರು ನಗರ, ರಾಮನಗರ, ಕೋಲಾರ, ಬೆಳಗಾವಿ, ಕಲಬುರಗಿ, ಯಾದಗಿರಿ, ಮಂಡ್ಯ, ದಾವಣಗೆರೆ, ಬೀದರ್, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಿದೆ. ಉಳಿದಂತೆ ಕೆಲವೆಡೆ ಚದುರಿದಂತೆ ಸಾಧಾರಣ ಮಳೆಯಾಗಿದೆ.

ಧಾರವಾಡದ ಶಿವಳ್ಳಿಯಲ್ಲಿ 154 ಮಿ.ಮೀಟರ್‌ನಷ್ಟು ಭಾರೀ ಮಳೆಯಾಗಿದು, ಚಿತ್ರದುರ್ಗ ಜಿಲ್ಲೆಯ ಪರಶುರಾಮಪುರದಲ್ಲಿ 12 ಸೆಂ.ಮೀಟರ್, ಕುಂದಾಪುರ–ಯಾದಗಿರಿ ಜಿಲ್ಲೆಯ ಘಟಗೇರಿಯಲ್ಲಿ ತಲಾ 8 ಸೆಂ.ಮೀ., ಸಿಂಧನೂರು, ಧಾರವಾಡ, ರಾಯಚೂರು ಜಿಲ್ಲೆಯ ಬಾಲಗಣನೂರಿನಲ್ಲಿ ತಲಾ 5 ಸೆಂ.ಮೀ, ಕೋಟಾ, ಮಸ್ಕಿ, ಹಿಂಡಿ, ವಿಜಯಪುರ, ಮಂತಾಳ, ನಿಪ್ಪಾಣಿ, ಹುಮ್ನಾಬಾದ್, ಕೂಡಲ ಸಂಗಮ, ಆಗುಂಬೆ, ರಾಯಲ್ಪಡುಗಳಲ್ಲಿ ತಲಾ 4 ಸೆಂ.ಮೀಟರ್‌ನಷ್ಟು ಮಳೆಯಾಗಿದೆ. ಉಳಿದಂತೆ ಸಾಧಾರಣ ಮಳೆಯಾಗಿದೆ. ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿದ್ದು, ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತವಾಗುವ ಸಾಧ್ಯತೆಯಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಮೋಡ ಕವಿದ ವಾತಾವರಣ ಕಂಡುಬರಲಿದ್ದು, ಆಗಾಗ್ಗೆ ಹಗುರದಿಂದ ಕೂಡಿದ ಸಾಧಾರಣ ಮಳೆಯಾಗಲಿದೆ.ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಲಿದ್ದು, ಕರಾವಳಿ, ಮಲೆನಾಡು, ಕಲಚದುರಿದಂತೆ ಅಲ್ಲಲ್ಲಿ ಸಾಧಾರಣ ಮಳೆಯಾಗುವ ಮುನ್ಸೂಚನೆಯಿದೆ.

# ಸಿನಿಮಾ ಶೈಲಿಯಲ್ಲಿ ನಡೆದ 'ಹನಿಮೂನ್ ಮರ್ಡರ್' ಮಿಸ್ಟರಿ ಬೇಧಿಸಿದ ಮೇಘಾಲಯ ಪೊಲೀಸರು, ಪತ್ನಿಯೇ ವಿಲನ್

**ಶಿಲ್ಲಾಂಗ್:** ದೇಶಾದ್ಯಂತ ಭಾರಿ ಸಂಚಲನ ಮೂಡಿಸಿದ್ದ ಮಧುಚಂದ್ರಕ್ಕೆ ಬಂದಿದ್ದ ನವದಂಪತಿ ನಾಪತ್ತೆ ರಹಸ್ಯಭೋಧಿಸುವಲ್ಲಿ ಮೇಘಾಲಯ ಪೊಲೀಸರು ಯಶಸ್ವಿಯಾಗಿದ್ದು ನಾಲ್ವರನ್ನು ಬಂಧಿಸಿದ್ದಾರೆ. ಸಿನಿಮಾ ರೀತಿ ಮಧುಚಂದ್ರಕ್ಕೆ ಬಂದು ಪತಿಯನ್ನು ಹತ್ಯೆ ಮಾಡಿಸಿದ ಮಹಾಸತಿ ತಂತ್ರಗಾರಿಕೆಗೆ ಪೊಲೀಸರೇ ಬೆಚ್ಚಿಬಿದ್ದಿದ್ದಾರೆ.

ಮಧ್ಯ ಪ್ರದೇಶದ ಇಂದೋರ್‌ನ ನಿವಾಸಿ ರಾಜಾ ರಘುವಂಶಿ ಅವರನ್ನು ಕೊಲೆ ಮಾಡಲು ಪತ್ನಿ ನೇಮಿಸಿದ್ದ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಡಿಜಿಪಿ ಐ ನೊಂಗ್ರಾಂಗ್ ತಿಳಿಸಿದ್ದಾರೆ. ಉತ್ತರ ಪ್ರದೇಶದ ಘಾಜಿಪುರದಲ್ಲಿ ಪೊಲೀಸರ ಮುಂದೆ ರಾಜಾ ರಘುವಂಶಿ ಪತ್ನಿ ಸೋನಮ್ ಶರಣಾಗಿದ್ದಾರೆ ಮತ್ತು ಇತರ ಮೂವರನ್ನು ರಾತ್ರಿಯಿಡೀ ಕರ್ಯಾಚರಣೆ ನಡೆಸಿದ ಬಂಧಿಸಲಾಗಿದೆ ಎಂದು ಹೇಳಿದರು.

ಕಳೆದ ಮೇ 23 ರಂದು ಮೇಘಾಲಯದ ಸೊಹ್ರಾ ಪ್ರದೇಶದಲ್ಲಿ ಪ್ರವಾಸದಲ್ಲಿದ್ದಾಗ ರಘುವಂಶಿ ಮತ್ತು ಅವರ ಪತ್ನಿ ಸೋನಮ್ಮನಾಪತ್ತೆಯಾಗಿದ್ದರು.ನಂತರ ಜೂನ್ 2 ರಂದು ಹುಡುಕಾಟ ನಡೆಯುತ್ತಿರುವಾಗ ಅವರ ರಘುವಂಶಿ ಮೃತದೇಹ ಕಮರಿಯಲ್ಲಿ ಪತ್ತೆಯಾಗಿತ್ತು.ತನಿಖೆ ತೀವ್ರಗೊಳಿಸಿದಾಗ ಉತ್ತರ ಪ್ರದೇಶ ಮತ್ತು ಇಂದೋರ್‌ನಲ್ಲಿ ಇಬ್ಬರನ್ನು ಎಸ್ ಐಟಿ ಪೊಲೀಸರುಬಂಧಿಸಿದೆ ನಂತರ ಸೋನಮ್ ಉತ್ತರ ಪ್ರದೇಶದ ನಂದಗಂಜ್ ಪೊಲೀಸ್ ಠಾಣೆಯಲ್ಲಿ ಶರಣಾಗಿದ್ದು ಅವರನ್ನು ಬಂಧಿಸಲಾಯಿತು ಎಂದು ಅವರು ಹೇಳಿದರು.

ರಘುವಂಶಿಯನ್ನು ಕೊಲ್ಲಲು ಪತ್ನಿ ಸುಪಾರಿ ನೀಡಿರುವುದು ವಿಚಾರಣೆ ವೇಳೆ ಗೊತ್ತಾಗಿದೆ. ಈ ಅಪರಾಧದಲ್ಲಿ ಭಾಗಿಯಾಗಿರುವ ಇನ್ನೂ ಕೆಲವರಿದ್ದು ಅವರನ್ನು ಹಿಡಿಯಲು ಮಧ್ಯಪ್ರದೇಶದಲ್ಲಿ ಕಾರ್ಯಾಚರಣೆ ಇನ್ನೂ ಮುಂದುವರೆದಿದೆ ಎಂದು ಅವರು ಹೇಳಿದರು. ರಾಷ್ಟ್ರವನ್ನೇ ಬೆಚ್ಚಿಬೀಳಿಸಿದ್ದ ಪ್ರಕರಣವನ್ನು ಭೇದಿಸಿದ್ದಕ್ಕಾಗಿ ಮುಖ್ಯಮಂತ್ರಿ ಕಾನ್ರಾಡ್ ಸಂಗ್ಮಾ ರಾಜ್ಯ ಪೊಲೀಸರನ್ನು ಅಭಿನಂದಿಸಿದರು.

ರಾಜಾ ಕೊಲೆ ಪ್ರಕರಣದಲ್ಲಿ ಮೇಘಾಲಯ ಪೊಲೀಸರು 7 ದಿನಗಳಲ್ಲಿ ಪ್ರಮುಖ ಪ್ರಗತಿ ಸಾಧಿಸಿದ್ದಾರೆಮಧ್ಯ ಪ್ರದೇಶದ 3 ಹಂತಕರನ್ನು ಬಂಧಿಸಲಾಗಿದೆ. ಮಹಿಳೆ ಶರಣಾಗಿದ್ದಾಳೆ ಮತ್ತು ಇನ್ನೂ 1 ಹಂತಕನನ್ನು ಹಿಡಿಯಲು ಕಾರ್ಯಾಚರಣೆ ಇನ್ನೂ ಮುಂದುವರೆದಿದೆ ಎಂದು ಅವರು ನಲ್ಲಿ ಪೋಸ್ಟ್ ಮಾಡಿದ್ದಾರೆ.



ಮಾವ್ ಲಾಖಿಯಾತ್‌ನಲ್ಲಿರುವ ಪ್ರವಾಸಿ ಮಾರ್ಗದರ್ಶಿ ಅಲ್ಬರ್ಟ್ ಪಿಡೆ, ರಘುವಂಶಿ ಮತ್ತು ಅವರ ಪತ್ನಿ ಕಾಣೆಯಾದ ದಿನ ಮೂವರು ಪುರುಷರೊಂದಿಗೆ ಇರುವುದನ್ನು ನೋಡಿದ್ದಾರೆ ಎಂದು ತಿಳಿಸಿದ್ದ ದಂಪತಿಯೊಂದಿಗೆ ಇದ್ದ ಮೂವರು ಪುರುಷರು ಹಿಂದಿಯಲ್ಲಿ ಮಾತನಾಡುತ್ತಿದ್ದರು. ಇದರಿಂದ ಅವರು ಸ್ಥಳೀಯರಲ್ಲ ಎಂದು ಗೊತ್ತಾಯಿತು.

ಈ ನಡುವೆ ಪತಿ ಮತ್ತು ಪತ್ನಿಯ ಕುಟುಂಬಗಳು ಸಿಬಿಐ ತನಿಖೆಯನ್ನು ಕೋರಿದ್ದರು.ರಘುವಂಶಿ ಅವರ ಮೃತದೇಹವು ವೈಸಾವ್‌ಡಾಂಗ್ ಜಲಪಾತದ ಬಳಿಯ ಕಮರಿಯಲ್ಲಿ ಪತ್ತೆಯಾದಾಗ ಅವರ ಬೆರಳಿನಲಕ್ಕಿದ್ದ ಚಿನ್ನದ ಉಂಗುರ ಮತ್ತು ಕುತ್ತಿಗೆಯ ಚಿನ್ನದ ಸರಕಾಣೆಯಾಗಿದ್ದು, ಅವರು ಕೊಲೆಯಾಗಿದ್ದಾರೆ ಎಂಬ ಆನುಮಾನಕ್ಕೆ ಕಾರಣವಾಗಿದೆ.

ಒಂದು ದಿನದ ನಂತರ, ರಕ್ತಸಿಕ್ತ ಮಚ್ಚೆಯು ಹತ್ತಿರದಲ್ಲಿ ಕಂಡುಬಂದಿತು, ಮತ್ತು ಎರಡು ದಿನಗಳ ನಂತರ, ದಂಪತಿಗಳು ಬಳಸಿದ ರೇನ್ ಕೋಟ್ಗೆ ಹೋಲುವ ರೇನ್ ಕೋಟ್ ಮಾವ್‌ಕಾ ಗ್ರಾಮದಲ್ಲಿ, ಸೊಹ್ರಾರಿಮ್ ಮತ್ತು ರಘುವಂಶಿ ಅವರ ಮೃತದೇಹ ಪತ್ತೆಯಾದ ಕಮರಿಯ ಅರ್ಧದಾರಿಯಲ್ಲೇ ಕಂಡುಬಂದಿದೆ.

ಮಧ್ಯ ಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಶನಿವಾರ ಈ ಪ್ರಕರಣದ ಬಗ್ಗೆ ಸಿಬಿಐ ತನಿಖೆಗೆ ಆದೇಶಿಸುವಂತೆ ಕೇಂದ್ರ ಗೃಹ ಸಚಿವ ಆಮಿತ್ ಶಾ ಅವರನ್ನು ಕೋರಿದ್ದಾರೆ. ಕಳದ ಮೇ 11 ರಂದು ಅವರ ಮದುವೆಯ ನಂತರ, ದಂಪತಿಗಳು ತಮ್ಮ ಹನಿಮೂನ್‌ಗಾಗಿ ಮೇ 20 ರಂದು ಮೇಘಾಲಯಕ್ಕೆ ತೆರಳಿದರು.

ಮೇ 22 ರಂದು ಬಾಡಿಗೆ ಸ್ಕೂಟರ್‌ನಲ್ಲಿ ಅವರು ಮಾವ್ ಲಾಖಿಯಾತ್ ಗ್ರಾಮಕ್ಕೆ ಬಂದರು. ಮೇ 24 ರಂದು, ಶಿಲ್ಲಾಂಗ್‌ನಿಂದ ಸೊಹಾಗೆ ಹೋಗುವ

# ಪಂಚ ಗ್ಯಾರಂಟಿ ಯೋಜನೆಗಳನ್ನು ಈವರೆಗೂ ಉಪಯೋಗ ಪಡೆಯದ ಅರ್ಹ ಫಲಾನುಭವಿಗಳಿಗೆ ಜೂನ್ 14ರಂದು ವಿಶೇಷ ನೋಂದಣಿ ಅಭಿಯಾನ

ಗದಗ: ಪಂಚ ಗ್ಯಾರಂಟಿಗಳಿಂದ ದೂರವಾಗಿರುವ ಅರ್ಹ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆ ವ್ಯಾಪ್ತಿಗೆ ಸೇರಿಸಲು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರ ವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಗದಗ ತಾಲೂಕು, ಜಿಲ್ಲೆ ಸೇರಿ ರಾಜ್ಯಾದ್ಯಂತ ಬಡತನರೇಖೆಯಲ್ಲಿದ್ದ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಲು ಸಹಕಾರಿಯಾಗಿದೆ. ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದು, ಅರ್ಹ ಫಲಾನುಭವಿಗಳು ಯೋಜನೆಗಳನ್ನು ಸದುಪಯೋಗಪಡಿಸಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೊ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಹಾಕಲಾಗುವುದು. ಇದುವರೆಗೆ ಪಂಚ ಗ್ಯಾರಂಟಿ ಯೋಜನೆಗಳ ಉಪಯೋಗ ಪಡೆಯದಿರುವ ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ನೀಡಿ ಯೋಜನೆಗಳನ್ನು ಸುದಪಯೋಗಪಡಿಸಿಕೊಳ್ಳಬಹುದಾಗಿದೆ.

ಅರ್ಹ ಫಲಾನುಭವಿಗಳು ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿನ ಉಪವಿಭಾಗಾಧಿಕಾರಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರೊಳಗಾಗಿ ಭೇಟಿ ನೀಡಬಹುದಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

# ಪಿಟಿಐ ಸಂಸ್ಥಾಪಕನಿಗೆ ಜನ್ಮದಿನದ ಶುಭ ಕೋರಿದ ಪ್ರಧಾನಿ ಮೋದಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಮಾಧ್ಯಮ ದೊರೆ ಮತ್ತು ಹಿರಿಯ ಪತ್ರಕರ್ತ ಅವೀಕ್ ಸರ್ಕಾರ್ ಅವರ 80 ನೇ ಹುಟ್ಟುಹಬ್ಬದಂದು ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ ಮತ್ತು ಸಾರ್ವಜನಿಕ ಚರ್ಚೆಯ ಪ್ರಮುಖ ಭಾಗವಾಗಿ ಮಾಧ್ಯಮ ಮತ್ತು ಪ್ರಕಾಶನ ಉದ್ಯಮಕ್ಕೆ ಅವರ ಅಪಾರ ಕೊಡುಗೆಯನ್ನು ಶ್ಲಾಘಿಸಿದ್ದಾರೆ.ಪಿಟಿಐನ ಮಾಜಿ ಅಧ್ಯಕ್ಷರು ಮತ್ತು ಸುದ್ದಿ ಸಂಸ್ಥೆಯ ಮಂಡಳಿಯ ನಿರ್ದೇಶಕರಾದ ಸರ್ಕಾರ್ ಅವರು ಹಲವಾರು ಟಿವಿ, ಮುದ್ರಣ ಮತ್ತು ಆನ್‌ಲೈನ್ ಆಸ್ತಿಗಳನ್ನು ಹೊಂದಿರುವ ಮತ್ತು ನಡೆಸುತ್ತಿರುವ ಕೋಲ್ಕತ್ತಾ ಮೂಲದ ಆನಂದ್ ಬಜಾರ್ ಪತ್ರಿಕಾ ಗುಂಪನ್ನು ಮುನ್ನಡೆಸಿದರು.



ಜೂನ್ 9 ರಂದು ಅವರಿಗೆ 80 ವರ್ಷ ತುಂಬುತ್ತದೆ. ಮೋದಿ ಸರ್ಕಾರ್ ಅವರನ್ನು ತಮ್ಮ ಹುಟ್ಟುಹಬ್ಬದ ಆಚರಣೆಗಳಿಗೆ ಆಹ್ವಾನಿಸಿದ್ದಕ್ಕಾಗಿ ಧನ್ಯವಾದಗಳನ್ನು ಅರ್ಪಿಸಿದರು ಮತ್ತು ಅವರ ಜೀವನದಲ್ಲಿ ಈ ಮೈಲಿಗಲ್ಲಿನ ಆಧ್ಯಾತ್ಮಿಕ ಮಹತ್ವವನ್ನು ಎತ್ತಿ ತೋರಿಸಿದರು. ಪ್ರಧಾನಿ ಅವರು, ಸಂಪ್ರದಾಯದ ಪ್ರಕಾರ, 80 ವರ್ಷ ವಯಸ್ಸ ನ್ನು ತಲುಪುವುದು ಎಂದರೆ ಸಾವಿರ ಹುಣ್ಣಿಮೆಗಳನ್ನು ವೀಕ್ಷಿಸಿದ್ದಾರೆ. ಇದನ್ನು ಸಹಸ್ರ ಚಂದ್ರ ದರ್ಶನ ಎಂದೂ ಕರೆಯುತ್ತಾರೆ, ಇದು ಪವಿತ್ರ ಮೈಲಿಗಲ್ಲು. ಎಂದು ಹೇಳಿದರು. ಅವರ ಕೊಡುಗೆಯನ್ನು ಶ್ಲಾಘಿಸುತ್ತಾ, ಹಲವು ವರ್ಷಗಳಿಂದ,

ಅದು ಮುದ್ರಣ ಮಾಧ್ಯಮ, ಎಲೆಕ್ಟ್ರಾನಿಕ್ ಮಾಧ್ಯಮ ಅಥವಾ ಪ್ರಕಾಶನ ಉದ್ಯಮದ ಮೂಲಕವಾಗಿದ್ದರೂ, ನಿಮ್ಮ ಕೆಲಸವು ಸಾರ್ವಜನಿಕ ಚರ್ಚೆಯ ಪ್ರಮುಖ ಭಾಗವಾಗಿದೆ. ಇದು ವಿವಿಧ ಭಾಷೆಗಳಲ್ಲಿ ವ್ಯಾಪಿಸಿದೆ ಎಂಬುದು ಭಾರತದ ಅದ್ಭುತ ವೈವಿಧ್ಯತೆಯನ್ನು ಎತ್ತಿಹಿಡಿಯುವ ಒಂದು ಮಾರ್ಗವಾಗಿದೆ ಎಂದು ಅವರು ಹೇಳಿದರು.

# ಯಕ್ಷಗಾನ, ಶೈಕ್ಷಣಿಕ ಕಾಳಜಿಯ ಸಾಧನೆಗೆ ಶ್ರೀಮತಿ ಜಯಲಕ್ಷ್ಮಿ ಕಾರಂತರಿಗೆ ಸನ್ಮಾನ

**ದಾವಣಗೆರೆ:** ಕೇರಳ ಗಡಿನಾಡಿ ಘಟಕ ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಇತ್ತೀಚೆಗೆ ಕಾಸರಗೋಡು ಜಿಲ್ಲೆಯ ಮೀಯ ಪದವು ಶ್ರೀ ವಿದ್ಯಾವರ್ಧಕ ಉನ್ನತ ಪ್ರೌಢಶಾಲೆಯ ಸಭಾಂಗಣದಲ್ಲಿ "ಕನ್ನಡಿಯಲ್ಲಿ ಕನ್ನಡಿಗ" ಕೃತಿ ಲೋಕಾರ್ಪಣೆ ಸಮಾರಂಭದಲ್ಲಿ ಕೇರಳದ ಗಡಿನಾಡಿನ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಜಯಲಕ್ಷ್ಮಿ ಕಾರಂತ್‌ರವರನ್ನು ಯಕ್ಷಗಾನ ಸೇರಿದಂತೆ ಶೈಕ್ಷಣಿಕ ಕಾಳಜಿಯ ಸಾಧನೆಗಳನ್ನು ಗುರುತಿಸಿ ಸನ್ಮಾನ ಮಾಡಲಾಯಿತು ಎಂದು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಕಾಸರಗೋಡು ಜಿಲ್ಲಾ ಲೇಖಕರ ಸಂಘದ ಅಧ್ಯಕ್ಷರಾದ ಡಾ. ರಮಾನಂದ ಬನಾರಿಯವರ ಅಧ್ಯಕ್ಷತೆಯಲ್ಲಿ ನಡೆದ ಈ ಸಮಾರಂಭದಲ್ಲಿ ಖ್ಯಾತ ಸಾಹಿತಿ ವಿಮರ್ಶಕರಾದ ಅರವಿಂದ ಚೊಕ್ಕಾಡಿ, ಕ.ಸಾ.ಪ.ದ ನಿಕಟಪೂರ್ವ ಅಧ್ಯಕ್ಷರಾದ ಪ್ರದೀಪ್‌ಕುಮಾರ್ ಕಲ್ಕೂರು,



ಖ್ಯಾತ ಹಿರಿಯ ಸಾಹಿತಿ ಡಾ. ಮುರಳೀ ಮೋಹನ್ ಚೂಂತಾರು, ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಎ.ಆರ್.ಸುಬ್ಬಯಕಟ್ಟೆ ಮುಂತಾದವರು ಉಪಸ್ಥಿತರಿದ್ದರು. ಡಾ. ರಮಾನಂದ ಬನಾರಿಯವರು ಕಾಸರಗೋಡಿನ 60 ವರ್ಷ ಮೀರಿದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರ ಸಂದರ್ಶನ ಏರ್ಪಡಿಸಿ ಶ್ರೀಮತಿ ಜಯಲಕ್ಷ್ಮಿ ಕಾರಂತರ ಸಾಧನೆಯ ಲೇಖನ "ಕನ್ನಡಿಯಲ್ಲಿ ಕನ್ನಡಿಗ" ಗ್ರಂಥದಲ್ಲಿ ಪ್ರಕಟಿಸಿದ್ದಾರೆ. ಕಲಾಕುಂಚದ ಪದಾಧಿಕಾರಿಗಳು, ಸರ್ವ ಸದಸ್ಯರು ಶ್ರೀಮತಿ ಜಯಲಕ್ಷ್ಮಿ ಕಾರಂತರವರಿಗೆ ಅಭಿಮಾನದಿಂದ ಅಭಿನಂದಿಸಿದ್ದಾರೆ.

# ಚಿನ್ನಸ್ವಾಮಿ ಸ್ಟೇಡಿಯಂಗೆ ಬಿಬಿಎಂಪಿ ನೋಟೀಸ್

**ಬೆಂಗಳೂರು:** ಕಳೆದ ಹಲವಾರು ವರ್ಷಗಳಿಂದ ಜಾಹೀರಾತು ತೆರಿಗೆ ಪಾವತಿಸದೆ ಕಳ್ಳಾಟವಾಡುತ್ತಿದ್ದ ಕೆಎಸ್‌ಸಿಎಗೆ ಬಿಬಿಎಂಪಿ ನೋಟೀಸ್ ಜಾರಿ ಮಾಡಿದೆ. ಯಾವುದೇ ಕ್ರೀಡಾಂಗಣದ ಒಳಭಾಗ ಹಾಗೂ ಹೊರಭಾಗಗಳಲ್ಲಿ ಜಾಹೀರಾತು ಪ್ರದರ್ಶಿಸಿದರೆ ಕಾನೂನಿನಂತೆ ಅವರು ಬಿಬಿಎಂಪಿಯವರಿಗೆ ತೆರಿಗೆ ಪಾವತಿಸಬೇಕು. ಆದರೆ, ಕಳೆದ ಹಲವಾರು ವರ್ಷಗಳಿಂದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಜಾಹೀರಾತು ಆಳವಡಿಸಿಕೊಂಡು ಬರಲಾಗುತ್ತಿದೆ. ಪ್ರದರ್ಶನವಾಗುವ ಜಾಹೀರಾತಿಗೆ ತೆರಿಗೆ ನೀಡಿ ಎಂದರೆ ಕೆಎಸ್‌ಸಿಎ ಅವರು ಕಿವಿ ಮೇಲೆ ಹಾಕಿಕೊಳ್ಳುತ್ತಿರಲಿಲ್ಲ. ನೋಟೀಸ್ ನೀಡಿದರೂ ಡೋಂಟ್ ಕೇರ್ ಎನ್ನುತ್ತಿದ್ದರು. ಕ್ರಿಕೆಟ್ ಸಂಸ್ಥೆಯವರ ಈ ಧೋರಣೆಯಿಂದ ಬಿಬಿಎಂಪಿಗೆ ಹತ್ತಾರು ಕೋಟಿ ರೂ.ಗಳ ನಷ್ಟ ಸಂಭವಿಸಿತ್ತು. ಇದೀಗ ಸಿಕ್ಕ ಅವಕಾಶವನ್ನು



ಸದುಪಯೋಗ ಪಡಿಸಿಕೊಂಡಿರುವ ಪಾಲಿಕೆ ಅಧಿಕಾರಿಗಳು ಬಾಕಿ ತೆರಿಗೆ ಪಾವತಿಸುವಂತೆ ಮತ್ತೊಂದು ನೋಟೀಸ್ ನೀಡಿ ಬಿಸಿ ಮುಟ್ಟಿಸಿದ್ದಾರೆ.ಕಳೆದ ಹಲವು ವರ್ಷಗಳಿಂದ ಮ್ಯಾಚ್ ನಡೆಯುವಾಗ ಎಲ್‌ಇಡಿ ಸೇರಿದಂತೆ ಅನೇಕ ಜಾಹೀರಾತು ಬೋರ್ಡ್‌ಗಳು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಅಳವಡಿಕೆ ಮಾಡಿ ಅನಧಿಕೃತವಾಗಿ ಜಾಹೀರಾತು ಪ್ರದರ್ಶಿಸುತ್ತಿದ್ದೀರಿ. ಪಾಲಿಕೆಯಿಂದ ' ಜಾಹೀರಾತು ಅಳವಡಿಕೆಗೆ ಅನುಮತಿ ಪಡೆದಿಲ್ಲ ಇದು ಕೂಡ ಕಾನೂನು ಬಾಹಿರ.

ಈ ಬಗ್ಗೆ ಈಗಾಗಲೇ ನೋಟೀಸ್ ಕೊಟ್ಟಿದ್ರು ಉತ್ತರ ನೀಡುತ್ತಿಲ್ಲ ಎಂದು ನೋಟೀಸ್‌ನಲ್ಲಿ ಎಚ್ಚರಿಸಲಾಗಿದೆ. ಜಾಹೀರಾತು ಶುಲ್ಕದ ಜೊತೆ ದಂಡದ ಪ್ರಯೋಗಕ್ಕೂ ಮುಂದಾಗಿರುವ ಬಿಬಿಎಂಪಿ ಅಧಿಕಾರಿಗಳು ಈ ಬಾರಿ ಶುಲ್ಕ ಪಾವತಿಸದಿದ್ದರೆ ದಂಡ ವಿಧಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.


**ಮಾನ್ಯ ಗೌರವನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ.**

**ಸಿ.ಆರ್.ಮಿಸ್.ನಂ:2256/2025**

**ಅರ್ಜಿದಾರರು:** 1)ಜಯದೇವಯ್ಯ ಎಮ್ ಎಸ್ ಬಿನ್ ಲೇಟ್ ಹೆಚ್ ಎಂ ಶಂಭುಲಿಂಗಯ್ಯ ವಯಸ್ಸು 72 ವರ್ಷ
2) ಶ್ರೀಮತಿ ಗಿರಿಜಮ್ಮ ಕೋಂ ಗುರುಸಂಗಯ್ಯ ವಯಸ್ಸು 65 ವರ್ಷ ವಾಸ: ಚೆನ್ನಪಟ್ಟಣ, ಹೊಳಲ್ಕೇರಿ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ,
3) ಶ್ರೀಮತಿ ಹಾಲಮ್ಮ ಕೋಂ ಲೇಟ್ ಸಿದ್ದಯ್ಯ ವಯಸ್ಸು 55 ವರ್ಷ ವಾಸ: ಬೆನಕನಹಳ್ಳಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
4) ಗುರುಸ್ವಾಮಿ ಎಮ್ ಎಸ್ ಬಿನ್ ಲೇಟ್ ಹೆಚ್ ಎಂ ಶಂಭುಲಿಂಗಯ್ಯ ವಯಸ್ಸು 53 ವರ್ಷ5) ಶ್ರೀಮತಿ ಭಾಗ್ಯಮ್ಮ ಕೋಂ ಲೇಟ್ ಎಂ ರೇಣುಕಾ ವಯಸ್ಸು 70 ವರ್ಷ
ಅರ್ಜಿದಾರ ನಂ.1.4.5 ರವರ ವಾಸ: ಬಸಪೂರ ಗ್ರಾಮ, ದಾವಣಗೆರೆ ತಾ

**ವಿರುದ್ಧ**

**ಎದುರುದಾರರು:** ಜನನ ಮತ್ತು ಮರಣ ನೋಂದಣಾಧಿಕಾರಿಗಳು ಮಹಾನಗರ ಪಾಲಿಕೆರವರ ಕಛೇರಿ, ದಾವಣಗೆರೆ,

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು 1 ರಿಂದ 4ನೇ ಅರ್ಜಿದಾರರ ತಾಯಿ 5ನೇ ಅರ್ಜಿದಾರರ ಅತ್ತೆಯಾದ ಶ್ರೀಮತಿ ವೀರಮ್ಮ ಕೋಂ ಹೆಚ್ ಎಮ್ ಶಂಭುಲಿಂಗಯ್ಯ ಇವರು ದಿನಾಂಕ: 25–01–1998ರಂದು, ಬಸಾಪೂರ ಗ್ರಾಮ, ದಾವಣಗೆರೆ ತಾ ಮತ್ತು ಜಿ. ಸ್ವಗ್ರಾಮದ ವಿಳಾಸದ ಮನೆಯಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 18/07/25ರಂದು ಬೆಳಗ್ಗೆ 11–00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ: 9/6/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

**ಸಹಿ/–**
**ಅರ್ಜಿದಾರರ ಪರ ವಕೀಲರು**
**(ಶ್ರೀ. ಅರುಣ್ ಕುಮಾರ್‌ಎಮ್)**
**ದಾವಣಗೆರೆ**
**ದಿನಾಂಕ: 9/6/2025**

**ಶಿರಸ್ತೇದಾರರು**
**ಮಾನ್ಯ ಗೌರವನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ.**

## ಆಸ್ತಿ ವಿವಾದ; ಮಚ್ಚಿನಿಂದ ಕೊಚ್ಚಿ ವ್ಯಕ್ತಿ ಬರ್ಬರ ಹತ್ಯೆ

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ತಾವರಗೇರಾ ಪಟ್ಟಣದಲ್ಲಿ 35 ವರ್ಷದ ವ್ಯಕ್ತಿಯನ್ನು ಏಳು ಜನರ ತಂಡವೊಂದು ಬೇಕರಿಯಲ್ಲಿ ಮಚ್ಚಿನಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಚನ್ನಪ್ಪ ಹುಸೇನಪ್ಪ ನಾರಿನಾಳ್ ಎಂಬಾತನನ್ನು ದುಷ್ಕರ್ಮಿಗಳು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡುತ್ತಿರುವ ದೃಶ್ಯ ಬೇಕರಿಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಕೊಲೆಯಾದ ವ್ಯಕ್ತಿಯ ಕುಟುಂಬ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು 10 ಜನರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಹಳೆಯ ದ್ವೇಷ ಮತ್ತು ಎರಡು ಕುಟುಂಬಗಳ ನಡುವಿನ ಆಸ್ತಿ ವಿವಾದವೇ ಕೊಲೆಗೆ ಕಾರಣ ಎಂದು ಪೊಲೀಸರು ಶಂಕಿಸಿದ್ದಾರೆ.

## ಹೇಮಾವತಿ ಲಿಂಕ್ ಕೆನಾಲ್ ವಿರೋಧಿ ಪ್ರತಿಭಟನೆ: ಮೂವರು ಶಾಸಕರು, ಇಬ್ಬರು ಸ್ವಾಮೀಜಿಗಳು ವಿರುದ್ಧ ಎಫ್ಐಆರ್

ಹೇಮಾವತಿ ಲಿಂಕ್ ಕೆನಾಲ್ ವಿರೋಧಿಸಿ ಶನಿವಾರ ಗುಬ್ಬಿಯಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾ–ಗಿಯಾಗಿದ್ದ ಹೋರಾಟಗಾರರ ಮೇಲೆ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಮೂವರು ಶಾಸಕರು, ಇಬ್ಬರು ಸ್ವಾಮೀಜಿಗಳು ವಿರುದ್ಧ ಎಫ್ಐಆರ್ ದಾಖಲಾಗಿದೆ. ಜೆಡಿಎಸ್‌ನ ತುರುವೇಕೆರೆ ಶಾಸಕ ಎಂ.ಟಿ. ಕೃಷ್ಣಪ್ಪ, ತುಮಕೂರು ಗ್ರಾಮೀಣ ಶಾಸಕ ಬಿ. ಸುರೇಶ್ ಗೌಡ ಮತ್ತು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಸೇರಿದಂತೆ 11 ಜನರ ವಿರುದ್ಧ ಎಫ್ಐಆರ್ ದಾಖಲಾಗಿದೆ. ಪ್ರತಿಭಟನೆ ವೇಳೆ ಪೊಲೀಸ್ ಸಿಬ್ಬಂದಿಗಳಲ್ಲಿ ಒಬ್ಬರಿಗೆ ತೀವ್ರವಾಗಿ ಗಾಯಗೊಂಡಿದ್ದರು. ಮತ್ತೊಂದೆಡೆ, ತಾಂತ್ರಿಕ ಸಮಿತಿ ವರದಿ ಆಧರಿಸಿ ಹೇಮಾವತಿ ಕೆನಾಲ್ ನಿರ್ಮಾಣದ ಕೆಲಸ ಪ್ರಾರಂಭ ಮಾಡಿದ್ದೇವು. ಆದರೆ ಈಗ ಬಿಜೆಪಿ ಶಾಸಕರು ಗಲಾಟೆ ಮಾಡಿಸುತ್ತಿದ್ದಾರೆ ಎಂದು ಗೃಹ ಸಚಿವ ಪರಮೇಶ್ವರ್ ಆರೋಪ ಮಾಡಿದ್ದಾರೆ.

## ಇನ್ಸೂರೆನ್ಸ್ ಕಂಪನಿಯಿಂದ ಸೇವಾ ನ್ಯೂನತೆ : ಪರಿಹಾರ ನೀಡಲು ಆಯೋಗ ಆದೇಶ

ಶಿವಮೊಗ್ಗ : ಶಿವಮೊಗ್ಗದ ಇರ್ಶಾದ್ ಬಿನ್ ಅನ್ವರ್ ಎಂಬುವವರು ದಿ ಮ್ಯಾನೇಜರ್, ಯುನಿಟೆಡ್ ಇಂಡಿಯಾ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ಶಿವಮೊಗ್ಗ ಇವರ ವಿರುದ್ಧ ನಾಲ್ಕು ಚಕ್ರದ ವಾಹನದ ಇನ್ಸೂರೆನ್ಸ್ ಸಂಬಂಧ ಸೇವಾ ನ್ಯೂನತೆ ಕುರಿತು ವಕೀಲರ ಮೂಲಕ ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗವು ದೂರುದಾರಿಗೆ ಸೂಕ್ತ ಪರಿಹಾರ ನೀಡುವಂತೆ ತೀರ್ಪು ನೀಡಿದೆ.

ಇರ್ಶಾದ್ ನಾಲ್ಕು ಚಕ್ರದ ವಾಹನವನ್ನು ಖರೀಸಿದ್ದು, ಎದುರುದಾರರ ಬಳಿ ಇನ್ಸೂರೆನ್ಸ್ ಅನ್ನು ಮಾಡಿಸಿದ್ದು, ಪಾಲಿಸಿಯು ದಿ:23/8/2023 ರಿಂದ 12/6/2024 ರವರೆಗೆ ಚಾಲ್ತಿಯಲ್ಲಿರುತ್ತದೆ. ದಿ:25/9/2023 ರಂದು ವಾಹನ ಚಲಿಸುವಾಗ ಬಾನೆಟ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ವಾಹನವೂ ಸಂಪೂರ್ಣ ಹಾಳಾಗಿದೆ. ಈ ಸಂಬಂಧ ಕ್ರಿಮಿನಲ್ ಕೇಸ್ ದಾಖಲಾಗಿರುತ್ತದೆ. ವಾಹನದ ಬೆಲೆ ರೂ.9,74,378/– ಗಳಾಗಿದೆ ಎಂದು ದೂರುದಾರರು ಎದುರುದಾರರ ಬಳಿ ಎಲ್ಲಾ ದಾಖಾತಿಗಳನ್ನು ಸಲ್ಲಿಸಿ ಇನ್ಸೂರೆನ್ಸ್ ಕ್ಲೈಮ್ ಮಾಡಿಕೊಡಲು ಸೆಪ್ಟೆಂಬರ್–2023 ರಲ್ಲಿ ಕೋರಿರುತ್ತಾರೆ. ಆದರೆ, ದೂರುದಾರರು ಎದುರುದಾರರ ಬಳಿ ಹಲವಾರು ಬಾರಿ ಕೇಳಿಕೊಂಡರು ಕ್ಲೈಮ್ ಮೊತ್ತವನ್ನು ನೀಡದೆ ಇರುವುದರಿಂದ ವಕೀಲರ ಮೂಲಕ ನೋಟೀಸ್ ನೀಡಿದ್ದು, ಎದುರುದಾರರಿಗೆ ನೋಟೀಸ್ ತಲುಪಿದ್ದರು ಯಾವುದೇ ಪ್ರತ್ಯುತ್ತರವಾಗಲೀ ಕ್ಲೈಮಿನ ಮೊತ್ತವನ್ನಾಗಲಿ ನೀಡಿರುವುದಿಲ್ಲವೆಂದು ಮತ್ತು ಇದು ಸೇವಾ ನ್ಯೂನತೆಯಾಗಿರುತ್ತದೆಂದು ಎದುರುದಾರರ ವಿರುದ್ಧ ಅಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ. ಆಯೋಗವು ದೂರನ್ನು ದಾಖಲಿಸಿಕೊಂಡು ಎದುರುದಾರರಿಗೆ ನೋಟೀಸ್ ನೀಡಿದ್ದು, ಎದುರುದಾರರು ವಕೀಲರ ಮೂಲಕ ಹಾಜರಾಗಿ ತಕರಾರನ್ನು ಸಲ್ಲಿಸಿ ದೂರುದಾರರ ವಾಹನದ ಐಡಿವಿ ಮೊತ್ತ ರೂ.5 ಲಕ್ಷಗಳೆಂದು ಮತ್ತು ದೂರುದಾರರು ಮತ್ತು ವಾಹನದ ಚಾಲಕರು ಸರ್ವೆಯರ್ ನಡೆಸಿದ ತನಿಖೆಗೆ ಸಹಕರಿಸಿರುವುದಿಲ್ಲವಾದ್ದರಿಂದ ದೂರುದಾರರು ಸ್ವತಃ ಎದುರುದಾರರು ಕ್ಲೈಮ್ ಸೆಟ್ಲಮೆಂಟ್ ಮಾಡದಿರಲು ಹೊಣೆಯಾಗಿರುವ ಕಾರಣ ದೂರನ್ನು ವಜಾ ಮಾಡಲು ಕೋರಿರುತ್ತಾರೆ. ದೂರುದಾರರ ಮತ್ತು ಎದುರುದಾರರ ಸಾಕ್ಷ ಪ್ರಮಾಣ ಪತ್ರ, ದಾಖಲೆಗಳನ್ನು ಪರಿಶೀಲಿಸಿ ಉಭಯ ಪಕ್ಷಗಾರರ ವಾದ–ವಿವಾದಗಳನ್ನು ಆಲಿಸಿ, ದೂರುದಾರರು ಈ ಆಯೋಗದಲ್ಲಿ ದೂರನ್ನು ಸಲ್ಲಿಸಿದ 3 ತಿಂಗಳ ನಂತರ ದೂರುದಾರರ ಕ್ಲೈಮ್‌ನ್ನು ವಜಾ ಮಾಡಿರುವುದು ಎದುರುದಾರರ ನಡತೆಯನ್ನು ತೋರಿಸುತ್ತದೆ ಮತ್ತು ದೂರುದಾರರು ಸಲ್ಲಿಸಿರುವ ದಾಖಲೆಗಳ ಆಧಾರ ಮೇಲೆ ಎದುರುದಾರರ ಸೇವಾ ನ್ಯೂನತೆ ಎಸಗಿರುವುದಾಗಿ ಪರಿಗಣಿಸಿ ದೂರನ್ನು ಭಾಗಶಃ ಪುರಸ್ಕರಿಸಿದೆ ಹಾಗೂ ಈ ಆದೇಶವಾದ ದಿನಾಂಕದಿಂದ 45 ದಿನಗಳೊಳಗಾಗಿ ಎದುರುದಾರರು ದೂರುದಾರರಿಗೆ ವಾಹನದ ಐಡಿವಿ ಮೊತ್ತ ರೂ.5 ಲಕ್ಷಗಳನ್ನು ಶೇ.9ರ ಬಡ್ಡಿಯೊಂದಿಗೆ ದಿ;27/7/2024 ರಿಂದ ಪಾವತಿಸಬೇಕೆಂದು, ತಪ್ಪಿದಲ್ಲಿ ಆ ಮೊತ್ತಕ್ಕೆ ಶೇ.12 ರಂತೆ ಬಡ್ಡಿಯನ್ನು ಈ ಆದೇಶವಾದ ದಿನಾಂಕದಿಂದ ಪೂರಾ ಹಣ ಪಾವತಿಸುವವರೆಗೂ ನೀಡಬೇಕೆಂದು ಹಾಗೂ ರೂ.25,000/–ಗಳನ್ನು ಮಾನಸಿಕ ಹಿಂಸೆಗಾಗಿ ಮತ್ತು ರೂ.10,000 ವನ್ನು ವ್ಯಾಜ್ಯದ ಖರ್ಚಾಗಿ ಎದುರುದಾರರು ದೂರುದಾರರಿಗೆ ನೀಡಬೇಕು. ತಪ್ಪಿದಲ್ಲಿ ಈ ಮೊತ್ತಗಳಿಗೆ ಶೇ.12 ರಂತೆ ಬಡ್ಡಿಯನ್ನು ಸೇರಿಸಿ ಈ ಆದೇಶವಾದ ದಿನಾಂಕದಿಂದ ಪೂರಾ ಹಣ ಪಾವತಿಸುವವರೆಗೂ ನೀಡಬೇಕೆಂದು ಶಿವಮೊಗ್ಗ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಡಿ.ಶಿವಣ್ಣ ಮತ್ತು ಸದಸ್ಯರಾದ ಬಿ.ಡಿ.ಯೋಗಾನಂದ ಭಾಂಡ್ಯ ಇವರನ್ನೊಳಗೊಂಡ ಪೀಠವು ಮೇ,23 ರಂದು ಆದೇಶಿಸಿದೆ.

# ಪರಿತ್ಯಕ್ತ ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿಗೆ 'ಸಾಥಿ' ಅಭಿಯಾನ : ನ್ಯಾ.ಸಂತೋಷ್




**ಶಿವಮೊಗ್ಗ :** ಸರ್ಕಾರಿ ಯೋಜನೆಗಳ ಸೌಲಭ್ಯವನ್ನು ನೀಡುವ ಉದ್ದೇಶಕ್ಕಾಗಿ ಪಾಲನೆ ಮತ್ತು ಸಂರಕ್ಷಣೆ ಬೇಕಾಗಿರುವ ಪರಿತ್ಯಕ್ತ ಮಕ್ಕಳು ಹಾಗೂ ಇನ್ನಿತರೆ ಕಾರಣಗಳಿಗೆ ಆಧಾರ್ ನೊಂದಣಿಯಾಗದ ಮಕ್ಕಳಿಗೆ ಆಧಾರ್ ನೋಂದಣಿ ಮಾಡಿಸಲು 'ಸಾಥಿ' ಅಭಿಯಾನ ಕೈಗೊಳ್ಳಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ತಿಳಿಸಿದರು.

ಪಾಲನೆ ಮತ್ತು ಸಂರಕ್ಷಣೆ ಬೇಕಾಗಿರುವ ಮಕ್ಕಳಿಗೆ ಆಧಾರ್ ನೋಂದಣಿ, ಸರ್ಕಾರಿ ಯೋಜನೆಗಳ ಸೇರ್ಪಡೆ ಮತ್ತು ಟ್ರಾ ?ಯಕಿಂಗ್‌ಗಾಗಿ 'ಸಾಥಿ' ಅಭಿಯಾನದ ಅಂಗವಾಗಿ ಸಮಿತಿ ಸದಸ್ಯರುಗಳಿಗೆ ಸೋಮವಾರ ಕೋರ್ಟ್ ಸಭಾಂಗಣದಲ್ಲಿ ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸೂಚನೆ ನೀಡಿರುವನ್ವಯ ತಂದೆ–ತಾಯಿ ಇಲ್ಲದಿರುವ ಪರಿತ್ಯಕ್ತ ಮಕ್ಕಳು, ವಲಸೆ ಇನ್ನಾವುದೇ ಕಾರಣಗಳಿಂದ ಆಧಾರ್ ಹೊಂದಿರದ ಮಕ್ಕಳನ್ನು ಗುರುತಿಸಿ ಆಧಾರ್ ಕಾರ್ಡ್ ನೀಡಲು 'ಸಾಥಿ' (ಸರ್ವೆ ಆಫ್ ಆಧಾರ್ ಆಂಡ್ ಆಕ್ಸಸ್ ಟು ಟ್ರಾ ?ಯಕಿಂಗ್ & ಹೊಲಿಸ್ಟಿಕ್ ಇನ್ಕು ?ಲಷನ್) ಅಭಿಯಾನವನ್ನು ಕೈಗೊಳ್ಳಲಾಗುತ್ತಿದೆ. ಪರಿತ್ಯಕ್ತ ಮಕ್ಕಳಿಗೆ ಕಾನೂನು ಗುರುತು ಮತ್ತು ಸರ್ಕಾರದ ಸೌಲಭ್ಯಗಳನ್ನು ಒದಗಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಆದ್ದರಿಂದ ಜಿಲ್ಲೆಯಲ್ಲಿ ಪರಿತ್ಯಕ್ತ, ವಲಸೆ, ಹಾಗೂ ಇನ್ನಿತರೆ ಕಾರಣಗಳಿಂದ ಆಧಾರ್ ನೋಂದಣಿಯಾಗದ ಮಕ್ಕಳನ್ನು ಗುರುತಿಸಿ ನೋಂದಣಿ ಮಾಡಿಸಲಾಗುವುದು.

ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸುವ ಕಾರ್ಯವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಸಾಥಿ ಸಮಿತಿಯನ್ನು ಸಹ ರಚಿಸಲಾಗಿದ್ದು, ಅವರ ಪಾತ್ರಗಳನ್ನು ಈಗಾಗಲೇ ತಿಳಿಸಲಾಗಿದೆ.

ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಮೂಲಕ ಇಂತಹ ಮಕ್ಕಳನ್ನು ಗುರುತಿಸಲು ಸರ್ವೆ ನಡೆಸಲಾಗುವುದು. ಇದಕ್ಕೆ ಸಂಬಂಧಿಸಿದ ಪಾಲುದಾರ ಇಲಾಖೆಗಳು, ಎನ್‌ಜಿಓ ಗಳು ಸಹಕರಿಸಬೇಕು ಎಂದರು.

ಹೀಗೆ ಗುರುತಿಸಲ್ಪಟ್ಟ ಮಕ್ಕಳಿಗೆ ಗ್ರಾಮ, ಹೋಬಳಿ, ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ ಲಭ್ಯವಿರುವ ಆಧಾರ್ ಕೇಂದ್ರಗಳಲ್ಲಿ ಆಧಾರ್ ನೋಂದಣಿ ಮಾಡಿಸಬೇಕು. ಆಧಾರ್ ಜೊತೆಗೆ ಜನನ ದೃಢೀಕರಣ ಪತ್ರವೂ ಇಲ್ಲದಿದ್ದರೆ ಕಾನೂನು ಸೇವೆಗಳ ಪ್ರಾಧಿಕಾರದ ಗಮನಕ್ಕೆ ತಂದಲ್ಲಿ ಉಚಿತವಾಗಿ ಮಾಡಿಸಿಕೊಡಲಾಗುವುದು ಎಂದರು.

ಬೀದಿಗಳಲ್ಲಿ, ಆಶ್ರಯ ಕೇಂದ್ರಗಳಲ್ಲಿ, ಅನಾಥಾಶ್ರಮ, ಶೆಲ್ಟರ್ ಹೋಂ ಗಳು, ಮಕ್ಕಳ ರಕ್ಷಣಾ ಸಂಸ್ಥೆಗಳಲ್ಲಿನ ಮಕ್ಕಳನ್ನು ಆಶಾ ಮತ್ತು ಅಂಗನವಾಡಿ ಮತ್ತು ಪಾಲುದಾರ ಇಲಾಖೆಗಳು ಹಾಗೂ ಎನ್‌ಜಿಓ ಗಳ ಸಹಾಯದಿಂದ ಸರ್ವೆ ನಡೆಸಿ, ಇಂತಹ ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸಬೇಕಾಗಿದ್ದು ಸಂಬಂಧಿಸಿದ ಎಲ್ಲರೂ ಶ್ರಮಿಸಬೇಕು. ಹಾಗೂ ಮಕ್ಕಳ ಶೆಲ್ಟರ್ ಹೋಂ ನಡೆಸುತ್ತಿರುವ ಎನ್‌ಜಿಓ ಗಳು ಕೂಡ ಇಂತಹ ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸಲು ಹಾಗೂ ಆ ಮೂಲಕ ಮಕ್ಕಳಿಗೆ ಶಿಕ್ಷಣ,ಆರೋಗ್ಯ ಮತ್ತು ಇತರೆ ಸರ್ಕಾರದ ಸಮಾಜ ಕಲ್ಯಾಣ ಯೋಜನೆಗಳು ಸಿಗುವಂತೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

ಜೂನ್ 26 ರೊಳಗೆ ಆಧಾರ್ ಇಲ್ಲದ ಮಕ್ಕಳನ್ನು ಗುರುತಿಸಿ, ಜೂನ್ 27 ರಿಂದ ಆಗಸ್ಟ್ 05 ರವರೆಗೆ ಆಧಾರ್ ನೋಂದಣಿ ಮಾಡಿಸಬೇಕು. ಆ.09 ಕ್ಕೆ ಜಿಲ್ಲೆಯಿಂದ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ನೋಂದಣಿ ಕುರಿತಾದ ವರದಿ ಸಲ್ಲಿಸಬೇಕು. ಹಾಗೂ ಆಗಸ್ಟ್ 15 ರಂದು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ವರದಿ ಮಾಡಲಿದೆ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಯಾವುದೇ ಪರಿತ್ಯಕ್ತ ಮಕ್ಕಳು, ಹಾಗೂ ಇನ್ನಿತರೆ ಮಕ್ಕಳು ಆಧಾರ್ ನೋಂದಣಿಯಿಂದ ಹೊರಗುಳಿಯದಂತೆ ಅವರನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸುವ ಮೂಲಕ ಈ ಸಾಥಿ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಡಿಡಿಪಿಐ ಮಂಜುನಾಥ್, ಡಿವೈಎಸ್‌ಪಿ ಬಾಬು ಅಂಜನಪ್ಪ, ಜಿಲ್ಲಾಧಿಕಾರಿಗಳ ಕಚೇರಿ ಸಹಾಯಕ ಪ್ರದೀಪ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೆಂಕಟೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ, ಸಿಡಬ್ಲ್ಯು ಸಿ ಅಧ್ಯಕ್ಷ ತಾಜುದ್ದೀನ್ ಖಾನ್, ಆಧಾರ್ ಸಂಯೋಜಕರು, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಇದ್ದರು.

# ಯೋಗ ಚಾಂಪಿಯನ್ ಶಿಪ್ ಸ್ಪರ್ಧೆ: ಅನುಷ್ಕಾಗೆ ಪ್ರಥಮ




**ದಾವಣಗೆರೆ:** ರಾಷ್ಟ್ರ ಮಟ್ಟದ ಮಹಿಳೆಯರ ಯೋಗಾಸನ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ನಗರ ಎಸ್‌ಎಎಸ್ ಯೋಗ ಕೇಂದ್ರದ ವಿದ್ಯಾರ್ಥಿನಿ ಅನುಷ್ಕಾ ಮಲ್ನಾಡ್ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ನಗರದ ಚಿಂದೋಡಿ ಕಲಾಕ್ಷೇತ್ರದಲ್ಲಿ ನಡೆದ ವಿಶ್ವ ಮಹಿಳಾ ದಿನಾಚರಣೆಯ ಅಂಗವಾಗಿ ಎರಡನೇ ರಾಷ್ಟ್ರಮಟ್ಟದ ಮಹಿಳೆಯರ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ನಗರದ ಎಸ್‌ಎಎಸ್ ಯೋಗ ಕೇಂದ್ರದ ವಿದ್ಯಾರ್ಥಿನಿ ಅನುಷ್ಕಾ ಮಲ್ನಾಡ್ ಪ್ರಥಮ ಸ್ಥಾನ, ನವ್ಯ ರಾಯ್ಕರ್ ದ್ವಿತೀಯ ಸ್ಥಾನ ಹಾಗೂ ಸೀನಿಯರ್ ಗ್ರೂಪ್‌ನಲ್ಲಿ ವಿಜೇತರಾದ ಎಸ್.ಪಿ.ಗೀತಾ ತೃತೀಯ ಸ್ಥಾನ, ಲೀಲಾವತಿ ದೇವರಾಜ್ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಹರಿಹರ ಮತ್ತು ದಾವಣಗೆರೆ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಹಾಗೂ ಕರ್ನಾಟಕ ಯೋಗಾಸನ ಕ್ರೀಡಾ ಸಂಸ್ಥೆಯ ಜಿಲ್ಲಾಧ್ಯಕ್ಷ ಲಯನ್ ವಾಸುದೇವ್ ರಾಯ್ಕರ್ ಹಾಗೂ ಅಂತಾರಾಷ್ಟ್ರೀಯ ಯೋಗ ಪಟು ಹಾಗೂ ಯೋಗ ಗುರು ಯೋಗಾಚಾರ್ಯ ಡಾ.ಎನ್.ಪರಶುರಾಮ್, ಸ್ಪರ್ಧಾ ನಿರ್ದೇಶಕರಾದ ಡಾ.ಕೆ.ಜೈಮುನಿ ಹಾಗೂ ಶಿವಮೊಗ್ಗದ ವರ್ಷಿಣಿ ಯೋಗ ಕೇಂದ್ರದ ಸಂಸ್ಥಾಪಕ ಅಧ್ಯಕ್ಷರು ಯೋಗ ಗುರುಗಳಾದ ವೆಂಕಟೇಶ್ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಪಿಓಕೆ ಭಾರತಕ್ಕೆ ಮರಳುವ ದಿನ ದೂರವಿಲ್ಲ: ರಾಜನಾಥ್

**ನವದೆಹಲಿ:** ಪಾಕಿಸ್ತಾನ ಆಕ್ರಮಿತ ಕಾಶ್ಮೀರ –ಪಿಓಕೆ ಭಾರತಕ್ಕೆ ಸೇರಿದ್ದು,ಸದ್ಯದಲ್ಲಿಯೇ ಭಾರತಕ್ಕೆ ಮರಳುವ ದಿನ ದೂರವಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಪಿಓಕೆ ಜನರು ಭಾರತದೊಂದಿಗೆ ಆಳವಾದ ಸಂಪರ್ಕ ಹೊಂದಿದ್ದಾರೆ. ಅಂತಿಮವಾಗಿ ಪಾಕ್ ಆಕ್ರಮಿತ ಕಾಶ್ಮೀರವನ್ನು ಭಾರತಕ್ಕೆ ಮರಳಿ ಪಡೆಯುವ ದಿನ ದೂರವಿಲ್ಲ, ಏಕ ಭಾರತ, ಶ್ರೇಷ್ಠ ಭಾರತಕ್ಕೆ ಕೇಂದ್ರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ

ಭಾರತೀಯ ಕೈಗಾರಿಕಾ ಒಕ್ಕೂಟ ವಾರ್ಷಿಕ ವ್ಯವಹಾರ ಶೃಂಗಸಭೆ 2025 ರ ಉದ್ಘಾಟಿಸಿ ಮಾತನಾಡಿ ಅವರು ಭಾರತದ ರಕ್ಷಣಾ ರಫ್ತು 10 ವರ್ಷಗಳ ಹಿಂದೆ 1000 ಕೋಟಿ ರೂ.ಗಿಂತ ಕಡಿಮೆಯಿತ್ತು ಈಗ ದಾಖಲೆಯ 23,500 ಕೋಟಿ ರೂ.ಗಳನ್ನು ತಲುಪಿದೆ ಎಂದು ಹೇಳಿದರು.

ಪಿಓಕೆಯೊಂದಿಗಿನ ಭಾರತದ ಭಾವನಾತ್ಮಕ ಮತ್ತು ಸಾಂಸ್ಕೃತಿಕ ಸಂಬಂಧ ಹೊಂದಿದೆ. "ಭಾರತ ಯಾವಾಗಲೂ ಹೃದಯಗಳನ್ನು ವಿಭಜಿಸುವುದಿಲ್ಲ" ಬದಲಾಗಿ ಬೆಸೆಯುವ ಕೆಲಸ ಮಾಡುತ್ತಿದೆ.

# ಆವರಗೆರೆಯ ನೊಂದ ನಿರಾಶ್ರಿತರಿಂದ ಹಕ್ಕುಪತ್ರಕ್ಕಾಗಿ ಕಾಲ್ನಡಿಗೆ ಜಾಥಾ



**ದಾವಣಗೆರೆ:** ಆವಗೆರೆಯ ಹಳ್ಳದ ಖರಾಬು ಜಮೀನಿನಲ್ಲಿ ಮನೆಗಳನ್ನು ಕಟ್ಟಿಕೊಂಡಿರುವವರಿಗೆ ಹಕ್ಕುಪತ್ರಗಳನ್ನು ವಿತರಿಸುವಂತೆ ಆಗ್ರಹಿಸಿ ಪ್ರೊ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸೋಮವಾರ ಕಾಲ್ನಡಿಗೆ ಜಾಥಾ ನಡೆಸಿತು.

ಸಂಘಟನೆಯ ವತಿಯಿಂದ ಅವರಗೆರೆಯ ಅಂಬೇಡ್ಕರ್ ಸರ್ಕಲ್‌ನಿಂದ ತಹಶೀಲ್ದಾರ್‌ರವರ ಕಛೇರಿಯವರೆಗೆ ಕಾಲ್ನಡಿಗೆ ಜಾಥಾ ಹಮ್ಮಿಕೊಂಡಿದ್ದು, ಸಮಿತಿ ಜಿಲ್ಲಾ ಸಂಚಾಲಕ ಡಿ. ಹನುಮಂತಪ್ಪ ನೇತೃತ್ವದಲ್ಲಿ ಹಕ್ಕುಪತ್ರಕ್ಕಾಗಿ ಒತ್ತಡ ಹೇರಲಾಯಿತು.

ನಗರದ ಆವರಗೆರೆ ಸರ್ವೆ ನಂ 264, 265, 225, 110 ರ ಮಧ್ಯ ಖರಾಬು ಜಮೀನಿನಲ್ಲಿ ಸುಮಾರು 6–7 ವರ್ಷಗಳಿಂದ 200–250 ಮನೆಗಳನ್ನು ನಿರ್ಮಿಸಿಕೊಂಡು ವಾಸವಾಗಿದ್ದ ಬಡವರಿಗೆ 04–03–2021 ರಂದು ಮಹಾನಗರ ಪಾಲಿಕೆ ತಾಲ್ಲೂಕು ಆಡಳಿತ ಇವರುಗಳು ಸೇರಿ ಯಾವುದೇ ನೋಟಿಸ್ ಮುನ್ಸೂಚನೆ ಕೊಡದೆ ಮಧ್ಯರಾತ್ರಿ ತೆರವುಗೊಳಿಸಿದ್ದರು.

ಈ ಸಂದರ್ಭದಲ್ಲಿ ಕೆಲವು ನಿರ್ಗತಿಕರ ಮೇಲೆ ಕೇಸನ್ನು ಹಾಕಿ ಗುಳೆ ಎಬ್ಬಿಸಿದ್ದು, ಮನೆಗಳ ಶೀಟ್ ಗಳು, ಕಲ್ಲು, ಕಂಬಿಗಳನ್ನು, ಬಾಗಿಲುಗಳನ್ನು ಇನ್ನುಳಿದ ಸಾಮಾನುಗಳು ಮಹಾನಗರ ಪಾಲಿಕೆಯ ಜೆ.ಸಿ.ಬಿ ಟ್ರ್ಯಾಕ್ಟರನಿಂದ ತೆರವುಗೊಳಿಸದ್ದರಿಂದ ನಿರಾಶ್ರಿತರಾದವರು ಮಾನ್ಯ ಜಿಲ್ಲಾಧಿಕಾರಿಗಳಲ್ಲಿ ಮನವಿ ಸಲ್ಲಿಸಿದಾಗ ಜಿಲ್ಲಾಧಿಕಾರಿಗಳು ಮುಂದಿನ ದಿನಗಳಲ್ಲಿ ವಸತಿ ಕಲ್ಪಿಸಿ ಕೊಡುವುದಾಗಿ ತಿಳಿಸಿದ್ದರು ಎಂದು ಹನುಮಂತಪ್ಪ ತಿಳಿಸಿದರು.

ನೊಂದ ಹಲವು ನಿರಾಶ್ರಿತರು ಅಲ್ಲಿಯ ಪಕ್ಕದ ಜಮೀನು ಮತ್ತು ಇತರೆಯವರ ಜಮೀನಿನಲ್ಲಿ ತಾತ್ಕಾಲಿಕ ಮನೆಗಳನ್ನು ನಿರ್ಮಿಸಿಕೊಂಡು ಜೀವನ ನಡೆಸುತ್ತಿದ್ದು, ಇನ್ನು ಕೆಲವರು ಬಾಡಿಗೆ ಮನೆಗಳಲ್ಲಿ, ಸರ್ಕಾರದ ಖರಾಬು ಜಮೀನಿನಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಈ ಹಿಂದೆ ಜಿಲ್ಲಾಧಿಕಾರಿಗಳು ಭರವಸೆ ನೀಡಿ–ದಂತೆ ಹಕ್ಕುಪತ್ರಗಳನ್ನು ನೀಡುವಂತೆ ಜಾಥಾದಲ್ಲಿ ಪಾಲ್ಗೊಂಡಿದ್ದ ನೂರಾರು ನೊಂದ ನಿರಾಶ್ರಿತರು ಮನವಿ ಮಾಡಿದರು.

# ನ್ಯಾಯಾಲಯ ಸಮಯಕ್ಕೆ ಆದ್ಯತೆ ನೀಡಿ: ನ್ಯಾ. ವೇಲಾ




**ದಾವಣಗೆರೆ:** ಕಕ್ಷಿದಾರರಿಗೆ ನ್ಯಾಯ ಕಲ್ಪಿಸುವ ನಿಟ್ಟಿನಲ್ಲಿ ನ್ಯಾಯಾಲಯದ ಸಮಯ ಅತಿಮುಖ್ಯವಾಗಿದ್ದು, ಸಮಯ ಪಾಲನೆಯನ್ನು ನಿರ್ವಹಿಸಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ. ವೇಲಾ ಕಿವಿಮಾತು ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಗಳ ಸಂಕೀರ್ಣದಲ್ಲಿರುವ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ದಾವಣಗೆರೆ ಜಿಲ್ಲಾ ನ್ಯಾಯಾಲಯಕ್ಕೆ ವರ್ಗಾವಣೆ ಆಗಿ ಆಗಮಿಸಿರುವ ನ್ಯಾಯಾಧೀಶರುಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಇಲ್ಲಿರುವ ನ್ಯಾಯಾಧೀಶರು ಕಠಿಣ ಶ್ರಮ, ಸಹಕರಿಸುವ ಗುಣ ಹೊಂದಿರುವವರು ಹಾಗೂ ಮೆದು ಸ್ವಭಾವದವರೆಂದು ತಿಳಿದು ಬಂದಿದೆ. ಅದೇ ರೀತಿ ಕೋರ್ಟ್ ಟೈಮಿಂಗ್ಸ್ ಕೂಡ ಮುಖ್ಯವಾಗಿದ್ದು, ಅದರೆಡೆಗೂ ನ್ಯಾಯವಾದಿಗಳು, ಎಲ್ಲರೂ ಗಮನಹರಿಸಬೇಕು ಎಂದು ಹೇಳಿದರು.

ಇಲ್ಲಿರುವವರೆಲ್ಲರೂ ಕಾನೂನುಗಳು ಬಗ್ಗೆ ತಿಳಿದಿದ್ದಾರೆ ನಿಜ. ಆದರೆ ಎಲ್ಲವೂ ಗೊತ್ತಿದೆ ಎನ್ನಲು ಸಾಧ್ಯವಿಲ್ಲ. ಪ್ರತಿದಿನವೂ ಕಲಿಕೆ ಇದ್ದೇ ಇರುತ್ತದೆ. ನಿಮ್ಮ ಸಹಕಾರವೂ ಮುಖ್ಯ, ಅದೇ ರೀತಿ ನಮ್ಮ ಸಹಕಾರವೂ ಇರುತ್ತದೆ ಎಂದು ವೇಲಾ ಹೇಳಿದರು.

ಯಾವುದೇ ನ್ಯಾಯವಾದಿಗಳಾಗಲಿ ಅವರಿಗೆ ತಕ್ಕಂತೆ ಅಪೇಕ್ಷೆಗಳು ಇದ್ದೇ ಇರುತ್ತವೆ. ಜಾಮೀನು ಅಥವಾ ಮಧ್ಯಂತರ ಅರ್ಜಿಗಳ ಕುರಿತಂತೆ ಯಾವುದೇ ಗೊಂದಲ ಬೇಡ. ಸರಿಯಾದ ದಾಖಲೆಗಳೊಂದಿಗೆ ನ್ಯಾಯಾಲಯಕ್ಕೆ ಹಾಜರಾಗಿ ಕಕ್ಷಿದಾರರಿಗೆ ನ್ಯಾಯ ಕೊಡಿಸಿ ಎಂದು ಸಲಹೆ ನೀಡಿ–ದರು.

ನ್ಯಾಯಾಧೀಶರಾದ ಆರ್.ಎನ್. ಪ್ರವೀಣ್ ಕುಮಾರ್ ಮಾತನಾಡಿ, ವಾದವನ್ನು ತಾಳ್ಮೆಯಿಂದ ಆಲಿಸಿ. ಅದು ನಿಮ್ಮ ಮುಂದಿನ ಭವಿಷ್ಯಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು. ನ್ಯಾ. ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಮಾತನಾಡಿ, ಒಬ್ಬ ನ್ಯಾಯಾಧೀಶರಾದವರು ನಿಷ್ಪಕ್ಷಪಾತ ನ್ಯಾಯ ನೀಡಿದರೆ ನ್ಯಾಯಾಲಕ್ಕೆ ಗೌರವ ಸಲ್ಲಿಸಿದಂತೆ ಎಂದು ಹಿರಿಯ ನ್ಯಾಯವಾದಿಗಳಾದ ಶಿವರಾಜ್ ಪಾಟೀಲ್ ತಮ್ಮ 'ಶಿವನುಡಿ' ಯಲ್ಲಿ ಹೇಳಿದ್ದಾರೆ. ಆತ್ಮಸಾಕ್ಷಿಯನ್ನು ಅನುಸರಿಸಿ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಎಚ್. ಅರುಣ್ ಕುಮಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ, ದಾವಣಗೆರೆ ಜಿಲ್ಲಾ ಸಂಘ–ಕ್ಕೆ 75 ವರ್ಷಗಳ ಇತಿಹಾಸವಿದೆ. ದಾವಣಗೆರೆ ವಕೀಲರ ಸಂಘದ ಎಸ್. ಸಿದ್ಧವೀರಪ್ಪನವರು ಸಂವಿಧಾನ ಸಂಸ್ಥಾಪನಾ ಸದಸ್ಯರಾಗಿದ್ದರು ಎನ್ನುವುದು ಹೆಮ್ಮೆಯ ವಿಷಯ. ಅನೇಕರು ಸಚಿವರು, ಶಾಸಕರು, ಮಂತ್ರಿಗಳಾಗಿ ಕೆಲಸ ಮಾಡಿದ್ದಾರೆ ಎಂದು ಸ್ಮರಿಸಿದರು.

ಸಂಘದಲ್ಲಿ 1400 ಸದಸ್ಯರಿದ್ದು, ಸಮರ್ಪಕವಾಗಿ ನ್ಯಾಯ ನೀಡುವ ಕೆಲಸ ಮಾಡುತ್ತಿದ್ದಾರೆ. ನೂತನ ನ್ಯಾಯಾಧೀಶರುಗಳು ಯಾವುದೇ ಸಂಕೋಚವಿಲ್ಲದೆ ಕಾರ್ಯ ನಿರ್ವಹಿಸಬಹುದು. ಮಧ್ಯಂತರ ಆದೇಶ ಹಾಗೂ ಜಾಮೀನು ವಿಚಾರದಲ್ಲಿ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂಬ ಆಶಯ ಎಲ್ಲರದ್ದು. ನಿಮ್ಮ ಎಲ್ಲ ಸಮರ್ಪಕ ನ್ಯಾಯವಿತರಣೆ ಸಂದರ್ಭದಲ್ಲಿ ನಮ್ಮ ಸಹಕಾರವಿರುತ್ತದೆ ಎಂದು ತಿಳಿಸಿದರು.

ವೇದಿಕೆಯ ಮುಖ್ಯ ಅತಿಥಿಗಳಾಗಿ ನ್ಯಾಯಾಧೀಶರುಗಳಾದ ಶ್ರೀರಾಮ ನಾರಾಯಣ ಹೆಗಡೆ, ಶಿವಪ್ಪ ಗಂಗಪ್ಪ ಸಲಗರೆ, ಮಹಾವೀರ ಮ. ಕರೆಣ್ಣವರ, ಹೆಚ್.ಡಿ. ಗಾಯತ್ರಿ ಆಗಮಿಸಿದ್ದರು.

ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು ಆದ ಹೆಚ್.ಕೆ. ರೇಷ್ಮಾ, ಒಂದನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ವಿ.ಎಲ್. ಅಮರ್, ಎರಡನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಸಿ. ನಾಗೇಶ್, ಮೂರನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ಕೆ. ಲತಾ, ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ಕೆ.ಎನ್. ಕಿಶೋರ್ ಕುಮಾರ್, ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ಎಂ. ಪದ್ಮಾ, ಮೂರನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ಅಚ್ಚಪ್ಪ ದೊಡ್ಡ ಬಸವರಾಜ್ ಅವರಿಗೆ ಸ್ವಾಗತ ಕೋರಲಾಯಿತು.

ದಾವಣಗೆರೆ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ. ಬಸವರಾಜ್, ಕಾರ್ಯದರ್ಶಿ ಎಸ್. ಬಸವರಾಜ್, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್, ಭಾಗ್ಯಲಕ್ಷ್ಮಿ, ವಾಗೀಶ್ ಕಟಗಿಹಳ್ಳಿಮಠ ಕಾರ್ಯಕ್ರಮ ನಿರ್ವಹಿಸಿದರು.

# ಸಿಂಧೂ ನದಿ ಒಪ್ಪಂದ ರದ್ದು, ತೀವ್ರ ಶಾಖ; ಪಾಕಿಸ್ತಾನದಲ್ಲಿ ನೀರಿನ ಬಿಕ್ಕಟ್ಟು, ಖಾರಿಫ್ ಬೆಳೆ ಬೆಳೆಯಲು ರೈತರಿಗೆ ಸಂಕಷ್ಟ



**ಇಸ್ಲಮಾಬಾದ್**: ಸಿಂಧೂನದಿ ನೀರು ಒಪ್ಪಂದ, ತಾಪಮಾನ ಏರಿಕೆಯಿಂದ ನೀರಿನ ಕೊರತೆ ಎದುರಿಸುತ್ತಿರುವ ಪಾಕಿಸ್ತಾನದಲ್ಲಿ ಖಾರಿಫ್ ಬೆಳೆಗಳ ಬೆಳೆಯಲು ಭಾರಿ ಸಂಕಷ್ಟ ಎದುರಾಗಿದೆ. ಇದರಿಂದ ಮುಂದಿನ ದಿನಗಳಲ್ಲಿ ಭಾರಿ ಸಂಕಷ್ಟ ಎದುರಾಗಲಿದೆ ಎಂದು ಪ್ರಧಾನಿ ಶೆಹಬಾಜ್ ಷರೀಫ್ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಬಿಕ್ಕಟ್ಟಿನಿಂದ ಪ್ರೇರಿತರಾಗಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು ತಜಕಿಸ್ತಾನದ ದುಶಾನ್ಬೆಯಲ್ಲಿ ನಡೆದ ಹಿಮನದಿ ಸಂರಕ್ಷಣೆ ಕುರಿತ ಸಮ್ಮೇಳನದಲ್ಲಿ ಈ ಬಗ್ಗೆ ಮಾತನಾಡಿದ್ದಾರೆ.

ಇಂಡಸ್, ಝೀಲಂ ಮತ್ತು ಚೆನಾಬ್ ನದಿಗಳ ನೀರಿನ ಮಟ್ಟ ಕಡಿಮೆಯಾಗಿದೆ. ಅಲ್ಲದೆ, ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತವು ಚೆನಾಬ್ ನದಿಗೆ ನೀರು ಸರಬರಾಜು ಕಡಿಮೆ ಮಾಡಿದ್ದರಿಂದ ಒಳಹರಿವು ಇಳಿಕೆಯಾಗಿದೆ ಎಂದು ಹೇಳಿದೆ. ಇದರಿಂದಾಗಿ ಪಂಜಾಬ್‌ನಲ್ಲಿ ನೀರಿನ ಸಮಸ್ಯೆ ಉಂಟಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.ಪಾಕಿಸ್ತಾನ ಸರ್ಕಾರದ ಇತ್ತೀಚಿನ ಮಾಹಿತಿಯ ಪ್ರಕಾರ, ಜೂನ್ 2, 2024ಕ್ಕೆ ಹೋಲಿಸಿದರೆ, ಜೂನ್ 2, 2025 ರ ಹೊತ್ತಿಗೆ ಇಂಡಸ್ ನದಿಯಲ್ಲಿ ನೀರಿನ ಲಭ್ಯತೆ ಶೇಕಡಾ 10.3 ರಷ್ಟು ಕಡಿಮೆಯಾಗಿದೆ. ನೈಋತ್ಯ ಮಾನ್ಸೂನ್ ಪ್ರಾರಂಭವಾಗಲು ಇನ್ನೂ ಕನಿಷ್ಠ ನಾಲ್ಕು ವಾರಗಳಿರುವುದರಿಂದ ಪರಿಸ್ಥಿತಿ ಇನ್ನಷ್ಟು ಹದಗೆಡುವ ಸಾಧ್ಯತೆಯಿದೆ ಎನ್ನಲಾಗುತ್ತಿದೆ. ಇಸ್ಲಾಮಾಬಾದ್‌ನ ಇಂಡಸ್ ರಿವರ್ ಸಿಸ್ಟಮ್ ಅಥಾರಿಟಿ (IRSA) ಪ್ರಕಾರ, ಪಂಜಾಬ್ ಪ್ರಾಂತ್ಯದಲ್ಲಿ ನೀರಿನ ಲಭ್ಯತೆ ಕೇವಲ 1,28,800 ಕ್ಯೂಸೆಕ್‌ಗಳಷ್ಟಿತ್ತು. ಕಳೆದ ವರ್ಷ ಇದೇ ದಿನಾಂಕದಂದು ಲಭ್ಯವಿದ್ದ ನೀರಿಗಿಂತ ಇದು 14,800 ಕ್ಯೂಸೆಕ್‌ಗಳಷ್ಟು ಕಡಿಮೆಯಾಗಿದೆ ಎನ್ನಲಾಗುತ್ತಿದೆ.

ಖಾರಿಫ್ ಬಿತ್ತನೆ ಋತು ಮಧ್ಯೆ ನೀರಿನ ಕೊರತೆ ಇರುವ ಹಿನ್ನೆಲೆ, ರೈತರಿಗೆ ತೊಂದ–ರೆಯುಂಟು ಮಾಡಬಹುದು. ಅಲ್ಲದೆ, ನೈಋತ್ಯ ಮಾನ್ಸೂನ್ ಜೂನ್ ಅಂತ್ಯದವರೆಗೆ ಪಂಜಾಬ್ ಪ್ರಾಂತ್ಯವನ್ನು ತಲುಪುವ ಸಾಧ್ಯತೆಯಿಲ್ಲ ಎಂದರು.

ಇದರಿಂದಾಗಿ ತೀವ್ರ ಶಾಖದಿಂದಾಗಿ, ನೀರಾವರಿ ಸಮಸ್ಯೆಗಳು ಉಂಟಾಗಬಹುದು.

ಬೇಸಿಗೆಯಲ್ಲಿ ಒಟ್ಟಾರೆ ಶೇಕಡಾ 21 ರಷ್ಟು ನೀರಿನ ಕೊರತೆಯನ್ನು ಅಂದಾಜಿಸಲಾಗಿತ್ತು. ಅಣೆಕಟ್ಟು ಅಧಿಕಾರಿಗಳು ಮತ್ತು ನೀರಾವರಿ ಸರಬರಾಜು ಮೇಲ್ವಿಚಾರಣಾ ಸಂಸ್ಥೆಗಳಿಗೆ ಜಲಾಶಯಗಳಿಂದ ನೀರನ್ನು ಮಿತವಾಗಿ ಬಳಸಲು ಸೂಚಿಸಿತ್ತು. ಪಂಜಾಬ್ ಮತ್ತು ಸಿಂಧ್ ಪ್ರಾಂತ್ಯಗಳಿಗೆ ನೀರಾವರಿಗಾಗಿ ನೀರನ್ನು ಒದಗಿಸುವಲ್ಲಿ ಮತ್ತು ಜಲವಿದ್ಯುತ್ ಉತ್ಪಾದಿಸುವಲ್ಲಿ ಪ್ರಮುಖ ಪಾತ್ರವಹಿಸುವ ಎರಡು ಪ್ರಮುಖ ಅಣೆಕಟ್ಟುಗಳ ಲೈವ್ ಸ್ಟೋರೇಜ್‌ನಲ್ಲಿ ಶೇಕಡಾ 50 ರಷ್ಟು ನೀರಿನ ಕೊರತೆಯನ್ನು ಇಸ್ಲಾಮಾಬಾದ್ ಅಂದಾಜಿಸಿದೆ.

### ವಿಜಯಪುರ: ರಾಜ್ಯದಲ್ಲಿ ಮತ್ತೊಂದು 'ಮಹಾ' ದರೋಡೆ

# ಕೆನರಾ ಬ್ಯಾಂಕ್ ಮಂಗೋಲಿ ಶಾಖೆಯಿಂದ 59 ಕೆಜಿ ಚಿನ್ನ ದೋಚಿದ ಕಳ್ಳರು!

**ವಿಜಯಪುರ:** ಕೆನರಾ ಬ್ಯಾಂಕಿನ ಮಂಗೋಲಿ ಶಾಖೆಯಿಂದ 59 ಕೆಜಿ ಚಿನ್ನವನ್ನು ಕಳ್ಳರು ದೋಚಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬ್ಯಾಂಕಿನಿಂದ ಸಾಲ ಪಡೆದ ಗ್ರಾಹಕರು ಚಿನ್ನವನ್ನು ಠೇವಣಿ ಇಟ್ಟಿದ್ದರು ಎಂದು ವಿಜಯಪುರ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ್ ಬಿ ನಿಂಬರ್ಗಿ ತಿಳಿಸಿದ್ದಾರೆ. 59 ಕೆಜಿ ಚಿನ್ನ ಕಳವಾಗಿದೆ ಎಂದು ಬ್ಯಾಂಕ್ ಅಧಿಕಾರಿಗಳು ಅಂದಾಜಿಸಿದ್ದು ಮೇ 26ರಂದು ಕೆನರಾ ಬ್ಯಾಂಕ್ ಮಂಗೋಲಿ ಶಾಖೆಯ ವ್ಯವಸ್ಥಾಪಕರು ದೂರು ದಾಖಲಿಸಿದರು. ಮೇ 23ರಂದು ಸಂಜೆ ಬ್ಯಾಂಕ್‌ಗೆ ಬೀಗ ಹಾಕಿ ಸಿಬ್ಬಂದಿಗಳು ತೆರಳಿದ್ದರು. ಮೇ 24 ಮತ್ತು 25 ರಂದು (ನಾಲ್ಕನೇ ಶನಿವಾರ ಮತ್ತು ಭಾನುವಾರ) ಬ್ಯಾಂಕ್ ರಜೆ ಇತ್ತು. ಮೇ 26 ಸೋಮವಾರ ಸಿಬ್ಬಂದಿಗಳು ಬ್ಯಾಂಕ್ ಗೆ ಬಂದಿದ್ದು ಸ್ವಚ್ಛತ ಸಿಬ್ಬಂದಿ ಶಾಖೆಯನ್ನು ಸ್ವಚ್ಛಗೊಳಿಸುವ ವೇಳೆ ಶಟರ್ ಬೀಗಗಳನ್ನು ಕತ್ತರಿಸಿರುವುದನ್ನು ಅವರು ಗಮನಿಸಿದ್ದು ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದರು.

ತಪಾಸಣೆಯ ನಂತರ, ಕಳ್ಳರು ಬ್ಯಾಂಕಿಗೆ ನುಸುಳಿ ಲೂಟಿ ಮಾಡಿರುವುದು ಕಂಡುಬಂದಿದೆ. ಬ್ಯಾಂಕ್ ಅಧಿಕಾರಿಗಳು ಲೂಟಿ ಮಾಡಿದ ಸೊತ್ತನ್ನು ಮೌಲ್ಯಮಾಪನ ಮಾಡಿದಾಗ 59 ಕೆಜಿ ಚಿನ್ನವನ್ನು ಕಳವು ಮಾಡಲಾಗಿದೆ ಎಂದು ಕಂಡುಬಂದಿದೆ. ಇದರ ಮೌಲ್ಯ 53 ಕೋಟಿ ಎಂದು ಅಂದಾಜಿಸಲಾಗಿದೆ. ಪ್ರಕರಣದ ತನಿಖೆಗಾಗಿ ಎಂಟು ತಂಡಗಳನ್ನು ರಚಿಸಲಾಗಿದೆ ಎಂದು ನಿಂಬರ್ಗಿ ಹೇಳಿದರು.

ಮೇ 24 ಮತ್ತು 25 ರ ಮಧ್ಯರಾತ್ರಿ ಕಳ್ಳತನ ನಡೆದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ತನಿಖೆ ಪ್ರಗತಿಯಲ್ಲಿದೆ. ನಾವು ಶೀಘ್ರದಲ್ಲೇ ಆರೋಪಿಯನ್ನು ಬಂಧಿಸಿ ಪ್ರಕರಣವನ್ನು ಅದರ ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುತ್ತೇವೆ ಎಂದು ಪೊಲೀಸ್ ಅಧಿಕಾರಿ ಹೇಳಿದರು.



# ಉದ್ಯಮಿಯಾದ ತೋಟಗಾರಿಕೆ ಬೆಳೆಗಾರ

**ಕೊಪ್ಪಳ:** ಹಣ್ಣಿನ ಬೆಳೆಗಳಿಂದ ಹೆಚ್ಚು ಲಾಭ ಸಿಗುತ್ತದೆ ಎಂಬುದನ್ನು ಅರಿತು ಕುಷ್ಟಗಿ ತಾಲ್ಲೂಕಿನ ಜೂಲಕಟ್ಟಿ ಗ್ರಾಮದ ಗ್ಯಾನಪ್ಪ ಗುಂಡಗಿ ಹಾಗೂ ಅವರ 11 ಜನ ಮಕ್ಕಳು ಮೂರ್ನಾಲ್ಕು ವರ್ಷಗಳ ಹಿಂದೆ ತಮ್ಮ ಒಟ್ಟು 30 ಎಕರೆ ತೋಟದ ಪೈಕಿ ಆರು ಎಕರೆಯಲ್ಲಿ ನಾಲ್ಕು ಸಾವಿರ ದಾಳಿಂಬೆ ಸಸಿಗಳನ್ನು ನಾಟಿಮಾಡಿ 20 ಲಕ್ಷ ಖರ್ಚು ಮಾಡಿದರು. 14 ತಿಂಗಳಲ್ಲಿ ಮೊದಲ ಫಸಲು ಬಂದಾಗ ಮಾಡಿದ ಖರ್ಚು ಕಳೆದು 22 ಲಕ್ಷ ಲಾಭ ಕೈ ಸೇರಿತು. ಇದಾದ ನಂತರದ ಋತುವಿಗೆ ಎರಡನೇ ಫಸಲಿಗೆ ಬಂಪರ್ ಬೆಲೆಯೂಲಭಿಸಿ ಬರೋಬ್ಬರಿ 1.06 ಕೋಟಿ ಲಾಭ ಬಂತು! ಮೂರನೇ ಋತುವಿನ ಫಸಲಿನಲ್ಲಿಯೂದೊಡ್ಡಮಟ್ಟದಲ್ಲಿ ಹಣ ಜೇಬಿಗಿಳಿಯಿತು. ಅವರೀಗ ನಾಲ್ಕನೇ ಫಸಲಿನ ನಿರೀಕ್ಷೆಯಲ್ಲಿದ್ದಾರೆ...

ಮೊದಲು ಶೇಂಗಾ ಬೆಳೆದು ಸಂಕಷ್ಟ ಎದುರಿಸಿ ಸಾಲಮಾಡುವ ಸ್ಥಿತಿಗೆ ತಲುಪಿದ್ದ ಗ್ಯಾನಪ್ಪ ಗುಂಡಗಿ ಅವರ ಕುಟುಂಬ ಈಗ ಆರ್ಥಿಕವಾಗಿ ಗಟ್ಟಿಯಾಗಿದೆ. 'ನಮ್ಮ ತಂದೆಗೆ ಏಳು ಜನ ಪುತ್ರರು, ನಾಲ್ಕು ಜನ ಪುತ್ರಿಯರಿದ್ದಾರೆ. ಸೊಸೆಯಂದಿರು, ಮಕ್ಕಳು, ಮೊಮ್ಮಕ್ಕಳು ಸೇರಿ ಮನೆಯಲ್ಲಿ 70 ಜನರಿದ್ದೇವೆ. ದಾಳಿಂಬೆ ಬೆಳೆಗೆ ಉತ್ತಮಮಾರುಕಟ್ಟೆ ಲಭಿಸಿದ್ದರಿಂದ ಭರಪೂರ ಆದಾಯ ಗಳಿಸಲು ಸಾಧ್ಯವಾಯಿತು. ಇದು ನಮ್ಮ ಕುಟುಂಬದವರನ್ನು ವಿದ್ಯಾವಂತರನ್ನಾಗಿಸಿದೆ. ನನ್ನ ತಂದೆಗೆ 19 ಜನ ಮೊಮ್ಮಕ್ಕಳಿದ್ದು ಅದರಲ್ಲಿ ಒಬ್ಬ ಪಿಎಸ್ಐ ಸೇರಿ ಆರು ಜನ ಸರ್ಕಾರಿ ನೌಕರಿ ಪಡೆದುಕೊಂಡಿದ್ದಾರೆ' ಎಂದು ಗ್ಯಾನಪ್ಪ ಗುಂಡಗಿ ಅವರ ಆರನೇ ಮಗ ದ್ಯಾಮಣ್ಣ ಗುಂಡಗಿ ಹೇಳಿದರು.

ಕೊಪ್ಪಳ ತಾಲ್ಲೂಕಿನ ಅಳವಂಡಿ ಸಮೀಪದ ಮೈನಹಳ್ಳಿ ಗ್ರಾಮದ ಈಶಪ್ಪ ಹಳ್ಳಿ ಎರಡು ವರ್ಷಗಳಿಂದ ತೈವಾನ್ ಪಿಂಕ್ ತಳಿಯ ಪೇರಲ ಬೆಳೆಯುತ್ತಿದ್ದು ವಾರ್ಷಿಕವಾಗಿ ಆರೇಳು ಲಕ್ಷ ಲಾಭ ಪಡೆಯುತ್ತಿದ್ದಾರೆ. 'ಅತಿಯಾದ ರಾಸಾಯನಿಕ ಬಳಕೆಯಿಂದ ಸತ್ವ ಕಳೆದುಕೊಂಡಿದ್ದ ಭೂಮಿಗೆಹೊಲದಲ್ಲಿಯೇ ಕೊಟ್ಟಿಗೆ ಗೊಬ್ಬರ, ಸೆಗಣಿ, ಕುರಿಹಿಕ್ಕಿ, ಜೀವಾಮೃತ ತಯಾರಿಸಿ ಅದನ್ನೇ ಬಳಕೆಮಾಡಿದ್ದರಿಂದ ಖರ್ಚು ಕಡಿಮೆಯಾಗಿ ಆರ್ಥಿಕ ಸ್ಥಿತಿ ಬದಲಾಗಿದೆ. ತೋಟಗಾರಿಕಾ ಕೃಷಿ ಆಯ್ಕೆ ಮಾಡಿಕೊಂಡಿದ್ದು ಬದುಕು ನೀಡಿದೆ' ಎನ್ನುತ್ತಾರೆ ಈಶಪ್ಪ ಹಳ್ಳಿ.

ಕೊಪ್ಪಳ ತಾಲ್ಲೂಕಿನ ಕಲ್ಲತಾವರಗೇರಾ ಗ್ರಾಮದ 33 ವರ್ಷದ ಅಂಬರೀಶ್ ತಟ್ಟಿ ಎನ್ನುವಯುವರೈತ ತಮ್ಮ ನಾಲ್ಕೂವರೆ ಎಕರೆ ತೋ ಟದಲ್ಲಿ ಮಾವಿನ ಹಣ್ಣುಗಳ ತಳಿ ಬೇನಿಷಾ ಬೆಳೆದಿದ್ದಾರೆ. ಕೊಪ್ಪಳ ತಾಲ್ಲೂಕು ವ್ಯಾಪ್ತಿಯ ರೈತರಿಗೆ ಮೆಕ್ಕೆಜೋಳ, ಕಡಲೆ, ಶೇಂಗಾ ಸಾಂಪ್ರದಾಯಿಕ ಬೆಳೆಯಾಗಿದೆ. ಅಂಬರೀಶ್ ಕೂಡ ಇದೇ ಸಾಂಪ್ರದಾಯಿಕ ಬೆಳೆಯ ಬೆನ್ನಿಗೆ ಬಿದ್ದು ವಾರ್ಷಿಕ 30 ಸಾವಿರದಿಂದ 40 ಸಾವಿರ ಮಾತ್ರ ಲಾಭ ಗಳಿಸುತ್ತಿದ್ದರು. ಇದಕ್ಕೆ ವಿದಾಯ ಹೇಳಿ ಏಳು ವರ್ಷಗಳ ಹಿಂದೆ ನೆಟ್ಟ ಮಾವಿನ ಸಸಿಗಳು ಈಗ ಪ್ರತಿವರ್ಷವೂ 'ಅಕ್ಷಯ ಪಾತ್ರೆ'ಯಂತೆ ಫಸಲು ನೀಡುತ್ತಿವೆ. ವಾರ್ಷಿಕ ಆದಾಯ ಗಳಿಕೆ ಪ್ರಮಾಣ 5 ಲಕ್ಷದಿಂದ 6 ಲಕ್ಷಕ್ಕೆ ಏರಿಕೆಯಾಗಿದೆ.

ಇದರಿಂದ ಪ್ರೇರಣೆಗೊಂಡು ದೇಶ ಹಾಗೂ ವಿದೇಶಗಳಲ್ಲಿ ಖ್ಯಾತಿ ಪಡೆಯುತ್ತಿರುವ 'ಕೇಸರ್'ಮಾವನ್ನೂ ಈಗ ಬೆಳೆಯಲು ಆರಂಭಿಸಿದ್ದಾರೆ. ಕೊಪ್ಪಳ ತಾಲ್ಲೂಕಿನ ಇರಕಲ್ಲಗಡ ಹೋಬಳಿ ಸಮೀಪದ ಯಲಮಗೇರಿ ಎಂಬ ಗ್ರಾಮದಲ್ಲಿ ಯುವರೈತ ಪಾಲಾಕ್ಷಗೌಡ ಮೇಟಿ ಆರೇಳು ವರ್ಷಗಳಿಂದ ನಿರಂತರವಾಗಿ ಪಪ್ಪಾಯ ಬೆಳೆದು ಪ್ರತಿ ಋತುವಿಗೂ 20 ಲಕ್ಷ ವಹಿವಾಟು ನಡೆಸುತ್ತಿದ್ದಾರೆ. ನಾಲ್ಕು ವರ್ಷಗಳ ಹಿಂದೆ ನಾಟಿಮಾಡಿದ್ದ ಕೇಸರ್ಮಾವು ಮೊದಲ ವರ್ಷ ಹೇರಳವಾಗಿ ಹೂಬಿಟ್ಟಿವೆ. ಮೊದಲ ಫಸಲು ಇದೇ



ವರ್ಷದ ಏಪ್ರಿಲ್ ಅಂತ್ಯದಲ್ಲಿ ಬರಲಿದ್ದು ಈಗಾಗಲೇ ಎಜೆಂಟರು ಬಂದು ತೋಟ ಗುತ್ತಿಗೆ ಪಡೆದಿದ್ದಾರೆ. ಹಣ್ಣುಗಳ ಕಣ್ಗಾವಲಿಗೆ ಹೊಲದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಿದ್ದಾರೆ.

ಇವು ಕೆಲವು ಉದಾಹರಣೆಗಳಷ್ಟೇ. ಸಣ್ಣ ಮತ್ತು ಮಧ್ಯಮ ವರ್ಗದ ರೈತರು ಕೂಡ ಈಗ ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳ ಬೆನ್ನು ಹತ್ತಿದ್ದಾರೆ. ಕಡಿಮೆ ವರ್ಷಗಳಲ್ಲಿ ಗುಣಮಟ್ಟದ ಫಸಲು ಲಭಿಸುವುದು, ನಿರ್ವಹಣೆ ಸುಲಭ, ತೋಟಗಾರಿಕಾ ಇಲಾಖೆಯ ಯೋಜನೆಗಳನ್ನು ರೈತರಿಗೆ ತಲುಪಿಸುವಲ್ಲಿ ಅಧಿಕಾರಿಗಳ ನಿರಂತರ ಪ್ರಯತ್ನ, ಜಿಲ್ಲೆಯ ಬಿರುಬಿಸಿಲು, ಬಹುತೇಕ ಕೆಂಪು ಮಣ್ಣಿನ ಭೂಮಿ ಈ ಎಲ್ಲ ಅಂಶಗಳು ರೈತರು ತೋಟಗಾರಿಕಾ ಕ್ಷೇತ್ರದತ್ತ ಒಲವು ತೋರಲು ಕಾರಣವಾಗಿವೆ. ಮುಖ್ಯವಾಗಿ ಮೂಲತಃ ಕೃಷಿಕರೇ ಆಗಿರುವ ಕೊಪ್ಪಳ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಸಿ.ಉಕ್ಕುಂದ ಹಾಗೂ ಅವರ ತಂಡದವರು ಮಾರುಕಟ್ಟೆ ಕಲ್ಪಿಸಿಕೊಡುತ್ತಿರುವುದು ರೈತರಿಗೆ ವರದಾನವಾಗಿದೆ.

'ಬೆಳೆಗಳಿಗೆ ಇಲಾಖೆಯಿಂದಲೇ ಮಾರುಕಟ್ಟೆ ಸೌಲಭ್ಯ ಒದಗಿಸಲಾಗುತ್ತಿದೆ. ವ್ಯಾಪಾರಿಗಳು ಜೊತೆ ಒಪ್ಪಂದ, ವ್ಯವಹಾರ ಸಂಬಂಧಿತ ಸಂಪನ್ಮೂಲ ವ್ಯಕ್ತಿಗಳಿಂದ ರೈತರಿಗೆ ತರಬೇತಿ, ಋತುವಾರು ನಡೆಯುವ ಹಣ್ಣುಗಳು ಮೇಳ, ಸಸ್ಯ ಸಂತೆ ಕಾರ್ಯಕ್ರಮಗಳಿಂದ ರೈತರು, ವ್ಯಾಪಾರಿಗಳು ಮತ್ತು ರಫ್ತುದಾರರ ನಡುವೆ ನೇರ ಸಂಹವನ ಸಾಧ್ಯವಾಗುತ್ತಿದೆ. ಸಸಿ ನೀಡಿದವರೇ ಫಸಲು ಬಂದ ಬಳಿಕ ರೈತರಿಂದ ಪಡೆಯುವ 'ಮರಳಿ ಖರೀದಿ' ವ್ಯವಸ್ಥೆ ಮಾಡಲಾಗಿದೆ. ಈ ಎಲ್ಲ ಪ್ರಯತ್ನಗಳಿಂದ ವಾರ್ಷಿಕವಾಗಿ 450 ಕೋಟಿಯಿಂದ 500 ಕೋಟಿ ತೋಟಗಾರಿಕಾ ಬೆಳೆಗಳ ವಹಿವಾಟು ನಡೆಸಲಾಗುತ್ತಿದೆ' ಎನ್ನುತ್ತಾರೆ ಕೃಷ್ಣ ಸಿ.ಉಕ್ಕುಂದ. ಐದು ವರ್ಷಗಳ ಹಿಂದೆ ಜಿಲ್ಲೆಯಲ್ಲಿ 22 ಸಾವಿರ ಹೆಕ್ಟೇರ್ ಮಾತ್ರ ತೋಟಗಾರಿಕಾ ಪ್ರದೇಶವಿತ್ತು. ಈಗ 55 ಸಾವಿರ ಹೆಕ್ಟೇರ್‌ಗೆ ಏರಿಕೆಯಾಗಿದೆ.

ಇಲಾಖೆಯುತನ್ನ ಕಚೇರಿ ಆವರಣದಲ್ಲಿ ಕಿಸಾನ್ ಕೇರ್ ಸೆಂಟರ್ ಆರಂಭಿಸಿದ್ದು, ಇದು



ರಾಜ್ಯದಮಾದರಿ ಕೇಂದ್ರವಾಗಿದೆ. ಈ ಕೇಂದ್ರದಲ್ಲಿ ಕೃಷಿ ಪರಿಕರಕಗಳ ಮಾರಾಟ, ರೈತರಿಗೆ ಸಲಹೆ ನೀಡಲಾಗುತ್ತದೆ. ರೈತರೇ ನೇರವಾಗಿ ಇಲಾಖೆ ಯೋಜನೆಗಳ ಮಾಹಿತಿ ಪಡೆದುಕೊಳ್ಳಬಹುದು. ಬ್ಯಾಂಕ್ ಸೌಲಭ್ಯಗಳು, ರೈತ ಸಂಸ್ಥೆಗಳಮಾಹಿತಿ, ರೈತರೊಂದಿಗೆ ಆಪ್ತ ಸಮಾಲೋಚನೆ, ಮರು ಖರೀದಿ ಒಪ್ಪಂದ, ಬೆಳೆಗಳ ಮೌಲ್ಯವರ್ಧನೆಗೆ ಕ್ರಮ, ಸ್ಥಳೀಯ ಮಾರುಕಟ್ಟೆ ಹಾಗೂ ರಫ್ತು ಮಾರುಕಟ್ಟೆ, ತಂತ್ರಜ್ಞಾನ ಆಧರಿತ ತೋಟಗಾರಿಕೆ ಮತ್ತು ಸಾವಯವ ದೃಢೀಕರಣ ಪತ್ರಗಳ ಮಾಹಿತಿ ಇವೆಲ್ಲವೂಗಳಮಾಹಿತಿ ಕೇಂದ್ರದಲ್ಲಿ ಸಿಗುತ್ತದೆ. ಈ ಅಂಶಗಳು ಕೂಡ ಜಿಲ್ಲೆಯಲ್ಲಿ ತೋಟಗಾರಿಕಾ ಕ್ಷೇತ್ರ ಹೆಚ್ಚಿಸಲು ಕಾರಣವಾಗಿವೆ ಎನ್ನುತ್ತಾರೆ ಅಧಿಕಾರಿಗಳು.

ರೈತರು ಹಣ್ಣುಗಳನ್ನು ಬೆಳೆದರೂ ಕೋವಿಡ್ ಸಮಯದಲ್ಲಿ ಮಾರುಕಟ್ಟೆ ಸಿಗದೇ ಪರದಾಡುವಂತಾಗಿತ್ತು. ಆಗ ತೋಟಗಾರಿಕಾ ಇಲಾಖೆ ಹಣ್ಣುಗಳನ್ನು ಬೆಳೆದ ರೈತರನ್ನು ಒಂದೇ ವೇದಿಕೆಗೆ ತಂದಿತು. ವಾಟ್ಸ್ ಆಪ್ ಮೂಲಕಯಾವ ಹಣ್ಣುಗಳಿಗೆ ಎಲ್ಲಿ ಹೆಚ್ಚು ಬೇಡಿಕೆಯಿದೆ ಎನ್ನುವಮಾಹಿತಿ ವಿನಿಮಯವಾಯಿತು. ಇದರಿಂದ ಎಲ್ಲ ರೈತರಿಗೂ ಅನುಕೂಲವಾಯಿತು. ಕೋವಿಡ್ ಸಂಕಷ್ಟದ ಕಾಲದಲ್ಲಿ ಹೀಗೆ ಆರಂಭವಾದ 'ಮಾರುಕಟ್ಟೆ ಗ್ರೂಪ್' ವರದಾನವಾಗಿದೆ.

**ಅನ್ನದ ಬಟ್ಟಲು:**

ಜಿಲ್ಲೆಯಲ್ಲಿ ಒಟ್ಟು 4.10 ಲಕ್ಷ ಹೆಕ್ಟೇರ್ ಕೃಷಿ ಭೂಮಿಯಿದೆ. ತುಂಗಭದ್ರಾ ಜಲಾಶಯದ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ ಗಂಗಾವತಿ, ಕನಕಗಿರಿ, ಕಾರಟಗಿ ಭಾಗದಲ್ಲಿ ಹೆಚ್ಚು ಭತ್ತ ಬೆಳೆಯುತ್ತಿದ್ದಾರೆ. ಒಟ್ಟು 65 ಸಾವಿರ ಹೆಕ್ಟೇ ರ್ ಭತ್ತದ ಕೃಷಿಯಿದೆ. ಹೀಗಾಗಿ ಗಂಗಾವತಿಯು ರಾಜ್ಯದ ಭತ್ತದ ಕಣಜವೆಂದು ಖ್ಯಾತಿ ಪಡೆದಿದೆ. ನಿರಂತರವಾಗಿ ಭತ್ತ ಬೆಳೆಯುತ್ತಿರುವ ಪರಿಣಾಮ ಮಣ್ಣಿನ ಫಲವತ್ತತೆ ನಾಶವಾಗಿ ಸವಕಳಿ, ವಿಪರೀತ ರಾಸಾಯನಿಕ ಗೊಬ್ಬರ ಬಳಕೆ, ಅತಿಯಾಗಿ ನೀರು ಹೊಲದಲ್ಲಿ ನಿಲ್ಲಿಸುತ್ತಿರುವುದರಿಂದ ಭತ್ತ ಬೆಳೆಯುವ ರೈತನ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಭತ್ತದ ಕೃಷಿ ಆರಂಭಿಸಿದಹೊಸತರಲ್ಲಿ ಪ್ರತಿ ಎಕರೆಗೆ 35ರಿಂದ 40 ಕ್ವಿಂಟಲ್ ಭತ್ತ ಬೆಳೆಯುತ್ತಿದ್ದ ರೈತನಿಗೆ ಈಗ 15ರಿಂದ 20 ಕ್ವಿಂಟಲ್ ಬಂದರೆ ಅದೇ ಹೆಚ್ಚು ಎನ್ನುವಂತಾಗಿದೆ. ಭತ್ತದಿಂದ ಆಗುತ್ತಿರುವ ನಷ್ಟ ಮತ್ತು ತೋ ಟಗಾರಿಕೆಯಿಂದ ಸಿಗುತ್ತಿರುವ ಸುಲಭಮಾರುಕಟ್ಟೆ ಸೌಲಭ್ಯದಿಂದಾಗಿ ಜಿಲ್ಲೆಯಲ್ಲಿ ತೋಟಗಾರಿಕಾ ಕ್ಷೇತ್ರದತ್ತ ಒಲವು ಹೆಚ್ಚಾಗುತ್ತಿದೆ. ಸತ್ವ ಕಳೆದುಕೊಂಡ ಭೂಮಿಯಲ್ಲಿ ತಾಳೆ ಹಾಗೂ ಬಾಳೆ ಬೆಳೆದು ಕಳೆದುಹೋದ ಭೂಮಿಯ ಸತ್ವ ಮರಳಿ ಗಳಿಸುವ ಪ್ರಯತ್ನ ನಡೆಯುತ್ತಿದೆ.

**ಬೇಡಿಕೆ ಹೆಚ್ಚಿಸಿದ ಬ್ರ್ಯಾಂಡ್ ಮೌಲ್ಯ:**

ಜಿಲ್ಲೆಯಲ್ಲಿ ರೈತರು ತೋಟಗಾರಿಕಾ ಬೆಳೆಗಳಲ್ಲಿ ಮಾವಿನ ವಿವಿಧ ತಳಿಗಳು, ದಾಳಿಂಬೆ, ಪಪ್ಪಾಯ, ಪೇರಲ, ದ್ರಾಕ್ಷಿ, ಸೀತಾಫಲ, ಬಾಳೆ, ಅಂಜೂರು, ಕಲ್ಲಂಗಡಿ, ಕರಬೂಜ ಬೆಳೆಯುತ್ತಿದ್ದಾರೆ. ಮಾವಿನ ಹಣ್ಣುಗಳಲ್ಲಿ ಕೇಸರ್, ಬೇನಿಷಾ, ಆಪೋಸ್ ಬೆಳೆಯುತ್ತಿದ್ದರೂ, ಕೇಸರ್ ಹಣ್ಣಿಗೆ ಬೇಡಿಕೆಯಿದೆ. ಪ್ರಕಾಶ ಮಾನವಾದ ಕಿತ್ತಳೆ ಬಣ್ಣದ ತಿರುಳಿಗೆ ಕೇಸರ್ ಎಂದೂ ಕರೆಯಲ್ಪಡುವ 'ಗಿರ್ ಕೇಸರ್'ಮಾವು ಗುಜರಾತ್ನಲ್ಲಿ ಖ್ಯಾತಿಯಾಗಿದ್ದು ಪ್ರತಿ ವರ್ಷ ಜೂನ್ ವೇಳೆಗೆ ಮಾರುಕಟ್ಟೆಗೆ ಬರುತ್ತದೆ. ಅದೇ ಬಣ್ಣ ಹಾಗೂ ರುಚಿಹೊಂದಿರುವ ಕೊಪ್ಪಳ ಕೇಸರ್ ಏಪ್ರಿಲ್ ಅಂತ್ಯದಲ್ಲಿ ಮಾರುಕಟ್ಟೆಗೆ ಬರುವುದರಿಂದ ಬೇಡಿಕೆಯೂಸಿಗುತ್ತದೆ. ಜಿಲ್ಲೆಯಲ್ಲಿ ಬೆಳೆಯುವ ಎಲ್ಲಾ ಹಣ್ಣುಗಳ ಹಿಂದೆ ತೋಟಗಾರಿಕಾ ಇಲಾಖೆ 'ಕೊಪ್ಪಳ' ಎನ್ನುವ ಬ್ರ್ಯಾಂಡ್ ಸೃಷ್ಟಿಸಿದ್ದು, 'ಕೊಪ್ಪಳ ಕೇಸರ್' ಒಂದು ಋತುವಿನಲ್ಲಿ 25 ಸಾವಿರ ಟನ್, ಕೊಪ್ಪಳ ದಾಳಿಂಬೆ 35 ಸಾವಿರ ಟನ್ ಮತ್ತು ಪಪ್ಪಾಯ ಐದು ಸಾವಿರ ಮೆಟ್ರಿಕ್ ಟನ್ ಮುಂಬೈ, ದೆಹಲಿ, ಗುಜರಾತ್, ಉತ್ತರ ಪ್ರದೇಶದ ಜೊತೆಗೆ ದುಬೈ, ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಕತಾರ್ ರಾಷ್ಟಗಳಿಗೂ ಕಳುಹಿಸಲಾಗುತ್ತಿದೆ. ಸ್ಥಳೀಯ ದಲ್ಲಾಳಿಗಳು ನೇರವಾಗಿ ರೈತರಹೊಲಕ್ಕೆ ಬಂದು ಖರೀದಿಸಿ ಅದನ್ನು ಮುಂಬೈ, ಕೋಲ್ಕತ್ತ ಹಾಗೂ ದೆಹಲಿಮಾರುಕಟ್ಟೆ ಮೂಲಕ ವಿದೇಶಗಳಿಗೆ ರಫ್ತು ಮಾಡುತ್ತಿದ್ದಾರೆ. ದಾಳಿಂಬೆಯು ಶ್ರೀಲಂಕಾ ಮತ್ತು ದುಬೈಗೆ ರಫ್ತಾಗುತ್ತಿದೆ. ಗುಜರಾತ್ 'ಗಿರ್ ಕೇಸರ್' ಮಾದರಿಯಲ್ಲಿಯೇ 'ಕೊಪ್ಪಳ ಕೇಸರ್'ಮಾವಿನ ಹಣ್ಣಿನ ತಳಿಗೆ ಭೌಗೋಳಿಕ ಸೂಚಕ ಸ್ಥಾನಮಾನ (ಜಿಐ ಟ್ಯಾಗ್) ಪಡೆಯುವ ಪ್ರಯತ್ನಗಳು ನಡೆಯುತ್ತಿವೆ.

ಎರಡು ವರ್ಷಗಳ ಹಿಂದೆ ಕೊಪ್ಪಳದಲ್ಲಿ ನಡೆದಿದ್ದ ರಫ್ತುದಾರರ, ಖರೀದಿದಾರರ ಹಾಗೂಮಾರಾಟಗಾರರ ಸಮಾವೇಶದಿಂದ ನೇರವಾಗಿ ರೈತರು ಹಾಗೂ ರಫ್ತುದಾರರ ನಡುವೆ ವ್ಯವಹಾರ ಏರ್ಪಟ್ಟಿದೆ. ಹಣ್ಣುಗಳು ಕಾಯಿ ಕಟ್ಟುವಾಗಲೇ ದಲ್ಲಾಳಿಗಳು ತೋಟಕ್ಕೆ ಬಂದು ಗುತ್ತಿಗೆ ಪಡೆಯುತ್ತಿದ್ದಾರೆ. ಇದರಲ್ಲಿ ಕೆಲವರು ಸ್ಥಳೀಯ ಮಾರುಕಟ್ಟೆಗೆ ಮಾರಾಟ ಮಾಡಿದರೆ, ಇನ್ನೂ ಕೆಲವರು ರಾಜ್ಯ,ಹೊರರಾಜ್ಯ ಮತ್ತು ವಿದೇಶಗಳಿಗೆ ಕಳುಹಿಸುತ್ತಿದ್ದಾರೆ.

**ವಿದೇಶಿ ಹಣ್ಣುಗಳ ಆಕರ್ಷಣೆ:**

ವಿದೇಶಗಳಲ್ಲಿ ಬೆಳೆಯುವ ದುಬಾರಿ ಬೆಲೆಯ ಸಸಿಗಳನ್ನು ಪ್ರತಿವರ್ಷವೂ ಸಸ್ಯಸಂತೆಯಲ್ಲಿ ತರಿಸಲಾಗುತ್ತದೆ. ಅವುಗಳ ಆಕರ್ಷಣೆಗೆ ಒಳಗಾಗಿ ರೈತರು ಕೃಷಿಯಲ್ಲಿ ಹೊಸ ಪ್ರಯೋ ಗಮಾಡಿ ವಿದೇಶಿ ತಳಿಗಳನ್ನೂ ಬೆಳೆಯುತ್ತಿದ್ದಾರೆ. ದುಬಾರಿ ಬೆಲೆಯಮಾವಿನ ಹಣ್ಣುಗಳಲ್ಲಿ ಒಂದಾದ ಜಪಾನ್ಮೂಲದ 'ಮೀಯಾಜಾಕಿ' ತಳಿ 2023ರಮಾವು ಮೇಳದಲ್ಲಿ ಮೊದಲ ಬಾರಿಗೆ ಪ್ರದರ್ಶನಕ್ಕೆ ಇರಿಸಲಾಗಿತ್ತು. ಆರಂಭದಲ್ಲಿ ಈ ತಳಿಯ ಒಂದು ಸಸಿಗೆ 5 ಸಾವಿರವಿತ್ತು. ಈಗ ಜಿಲ್ಲೆಯಲ್ಲಿಯೇ ರೈತರು ಹತ್ತು ಹೆಕ್ಟೇರ್ ಪ್ರದೇಶದಲ್ಲಿ ಮೀಯಾಜಾಕಿ ಬೆಳೆದಿದ್ದು, ಸಸಿಗಳ ದರ 1,000ಕ್ಕೆ ಇಳಿದಿದೆ.ಜಿಲ್ಲೆಯ ತೋಟಗಾರಿಕಾ ಬೆಳೆಗಾರರಿಗೆ ಸಿಗುತ್ತಿರುವ ಉತ್ತೇ ಜನದಿಂದಾಗಿ ಸಣ್ಣ ರೈತರೂ ತಮ್ಮ ಕಿರಿದಾದ ಜಾಗದಲ್ಲಿ ತರಕಾರಿ,ಹೂ, ಹಣ್ಣುಗಳನ್ನು ಬೆಳೆಯುತ್ತಿದ್ದಾರೆ. ತೋಟಗಾರಿಕಾ ಹಬ್ ಆಗಿ ಬೆಳೆಯುತ್ತಿರುವ ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕಾ ಹೈಟೆಕ್ನಾಲಜಿ ಪಾರ್ಕ್ ನಿರ್ಮಾಣ ಮಾಡುವುದಾಗಿ 2020–21ರಲ್ಲಿ ಬಜೆಟ್ನಲ್ಲಿ ಸರ್ಕಾರ ಘೋಷಿಸಿತ್ತು. ಇದಕ್ಕೆ ಡಿಪಿಆರ್ ಸಿದ್ಧವಾಗಿದ್ದು, ಅನುಷ್ಠಾನವಾದರೆ ತೋಟಗಾರಿಕಾ ಪ್ರದೇಶ ಮತ್ತಷ್ಟು ವಿಸ್ತಾರವಾಗುತ್ತದೆ. ಉತ್ತರ ಕರ್ನಾಟಕದ ಜಿಲ್ಲೆಗಳ ತೋಟಗಾರಿಕಾ ಬೆಳೆಗಳಿಗೆ ಕೊಪ್ಪಳ ಜಿಲ್ಲೆಯಲ್ಲಿ ಸ್ಥಳೀಯವಾಗಿ ಮತ್ತಷ್ಟು ಮಾರುಕಟ್ಟೆ ಲಭಿಸುತ್ತದೆ. ಸಂಸ್ಕರಣೆ, ಮೌಲ್ಯವರ್ಧನೆಗಳ ಅವಕಾಶಗಳು ಕೂಡ ಹೆಚ್ಚಾಗುತ್ತವೆ.





# ರಕ್ಷಿತ್ ತೀರ್ಥಹಳ್ಳಿ ನಿರ್ದೇಶನದ ‘ತಿಮ್ಮನ ಮೊಟ್ಟೆಗಳು’ ಚಿತ್ರ ಬಿಡುಗಡೆ ದಿನಾಂಕ ಫಿಕ್ಸ್!

ರಕ್ಷಿತ್ ತೀರ್ಥಹಳ್ಳಿ ನಿರ್ದೇಶನದ ‘ತಿಮ್ಮನ ಮೊಟ್ಟೆಗಳು’ ಚಿತ್ರ ಬಿಡುಗಡೆಗೆ ಸಿದ್ಧವಾಗಿದ್ದು, ಜೂನ್ 27ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ಘೋಷಿಸಿದೆ. ವಾಸುಕಿ ವೈಭವ್ ಹಾಡಿರುವ ‘ಕಾಡು ದಾರಿ’ ಹಾಡಿನ ಲಿರಿಕಲ್ ವಿಡಿಯೋ ಬಿಡುಗಡೆಯೊಂದಿಗೆ ಚಿತ್ರ ಬಿಡುಗಡೆ ದಿನಾಂಕವನ್ನು ಘೋಷಿಸಲಾಗಿದೆ.



ಚಿತ್ರವನ್ನು ಶ್ರೀಕೃಷ್ಣ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಶಿವಮೊಗ್ಗ ಮೂಲದ ಅನಿವಾಸಿ ಭಾರತೀಯ ಆದರ್ಶ್ ಅಯ್ಯಂಗಾರ್ ನಿರ್ಮಿಸಿದ್ದಾರೆ. ಚಿತ್ರವು ರಕ್ಷಿತ್ ತೀರ್ಥಹಳ್ಳಿ ಅವರ ಸ್ವರಚಿತ ‘ಕಾಡಿನ ನೆಂಟರು’ ಸಣ್ಣ ಕಥೆಯನ್ನು ಆಧರಿಸಿದ್ದು, ಮಾನವರು, ಪ್ರಕೃತಿ ಮತ್ತು ಪ್ರಾಣಿಗಳ ನಡುವಿನ ಹೆಣೆದುಕೊಂಡಿರುವ ಸಂಬಂಧದ ಕುರಿತು ಹೇಳುತ್ತದೆ.

ಶಿವಮೊಗ್ಗ ಮತ್ತು ಚಿಕ್ಕಮಗಳೂರು ಸುತ್ತಮುತ್ತ ಚಿತ್ರೀಕರಣ ಮಾಡಲಾಗಿದ್ದು, ಪಶ್ಚಿಮ ಘಟ್ಟಗಳ ಜೀವನದ ಸಾರವನ್ನು ಸೆರೆಹಿಡಿದಿದೆ. ಅಲ್ಲಿ ವಾಸಿಸುವ ಜನರ ಮೌಲ್ಯಗಳು, ಸರಳತೆ ಮತ್ತು ಸೂಕ್ಷ್ಮತೆಯನ್ನು ಎತ್ತಿ ತೋರಿಸುತ್ತದೆ. ಈ ಚಿತ್ರವು ಅಮೆರಿಕದ ಡಲ್ಲಾಸ್‌ನಲ್ಲಿ ಮೊದಲು ಪ್ರದರ್ಶನಗೊಂಡಿತು. ಅಲ್ಲಿ ಸಕಾರಾತ್ಮಕ ಪ್ರತಿಕ್ರಿಯೆ ಪಡೆದ ಬಳಿಕ ಕೋಲ್ಕತ್ತಾ ಅಂತರರಾಷ್ಟ್ರೀಯ ಚಿತ್ರೋತ್ಸವದಲ್ಲಿಯೂ ಪ್ರದರ್ಶನ ಕಂಡಿತು. ದೆಹಲಿಯಲ್ಲಿ ನಡೆದ ದಾದಾಸಾಹೇಬ್ ಫಾಲ್ಕೆ ಚಿತ್ರೋತ್ಸವದಲ್ಲಿ ಪ್ರಶಸ್ತಿ ಗಳಿಸಿತು.

ಚಿತ್ರದ ತಾರಾಗಣದಲ್ಲಿ ಶೃಂಗೇರಿಯ ಕೇಶವ ಗುತ್ತಳಿಕೆ, ಸುಚೇಂದ್ರ ಪ್ರಸಾದ್, ಆಶಿಕಾ ಸೋಮಶೇಖರ್, ಶೃಂಗೇರಿ ರಾಮಣ್ಣ, ಪ್ರಗತಿ ಪ್ರಭು, ರಘು ರಾಮನಕೊಪ್ಪ, ಮಾಸ್ಟರ್ ಹರ್ಷ, ವಿನಯ್ ಕಣಿವೆ, ಪೃಥ್ವಿರಾಜ್ ಕೊಪ್ಪ ಮತ್ತು ಪ್ರಾಣೇಶ್ ಕುಳೇಗದ್ದೆ ಇದ್ದಾರೆ. ಚಿತ್ರಕ್ಕೆ ಪ್ರವೀಣ್ ಎಸ್ ಅವರ ಛಾಯಾಗ್ರಹಣ, ಕೆಂಪರಾಜು ಬಿಎಸ್ ಅವರ ಸಂಕಲನ ಮತ್ತು ಹೇಮಂತ್ ಜೋಯಿಸ್ ಅವರ ಸಂಗೀತ ನಿರ್ದೇಶನವಿದೆ.

2ಸತ್ಯಜಿತ್ ಶಬ್ಬೀರ್ ನಿರ್ದೇಶನದ, ಧರ್ಮ ಕೀರ್ತಿರಾಜ್ ನಟನೆಯ ‘ಬುಲೆಟ್’ ಚಿತ್ರ ಬಿಡುಗಡೆ ದಿನಾಂಕ ನಿಗದಿ

ಬಿಗ್ ಬಾಸ್ ಖ್ಯಾತಿಯ ಧರ್ಮ ಕೀರ್ತಿರಾಜ್ ನಟನೆಯ, ಸತ್ಯಜಿತ್ ಶಬ್ಬೀರ್ ನಿರ್ದೇಶಿಸಿರುವ ಮತ್ತು ನಿರ್ಮಾಣದ ‘ಬುಲೆಟ್’ ಚಿತ್ರ ಜೂನ್ 20ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ.

ತೆಲುಗು, ತಮಿಳು, ಮಲಯಾಳಂ ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸಿರುವ ಸತ್ಯಜಿತ್ ಶಬ್ಬೀರ್, ಇದೇ ಮೊದಲ ಬಾರಿಗೆ ನಿರ್ದೇಶಕ ಮತ್ತು ನಿರ್ಮಾಪಕರಾಗಿ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ.

‘ನಾನು ಭಾರತಿರಾಜ ಅವರ ತಮಿಳು ಚಿತ್ರ ‘ಪಧಿನಾರು ವಯತಿನಿಲೆ’ ಎಂಬ ಚಿತ್ರದ ಮೂಲಕ ಚಿತ್ರರಂಗಕ್ಕೆ ಪ್ರವೇಶಿಸಿದೆ. ಸಂಗೀತ ನಿರ್ದೇಶಕ ಇಳಯರಾಜ ನನ್ನ ಹೆಸರಿನ ಮುಂದೆ ‘ಸತ್ಯಜಿತ್’ ಸೇರಿಸಿದರು. ಅಂದಿನಿಂದ, ನಾನು ಸತ್ಯಜಿತ್ ಶಬ್ಬೀರ್ ಆದೆ. ನಾನು ವಿವಿಧ ಭಾಷೆಗಳಲ್ಲಿ 75 ಚಿತ್ರಗಳಲ್ಲಿ ನಟಿಸಿದ್ದೇನೆ. ಆದರೆ, ಕರ್ನಾಟಕದವನಾಗಿ, ಕನ್ನಡದಲ್ಲಿ ನಿರ್ದೇಶಕನಾಗಿ ಪ್ರವೇಶ ಮಾಡುವ ಕನಸು ಕಂಡಿದ್ದೆ. ಬುಲೆಟ್ ಮೂಲಕ ಆ ಆಸೆ ಈಡೇರುತ್ತಿದೆ’ ಎಂದು ಹೇಳಿದರು.

ಧರ್ಮ ಕೀರ್ತಿರಾಜ್ ನಾಯಕನಾಗಿ ನಟಿಸಿರುವ ಈ ಚಿತ್ರದಲ್ಲಿ ಶ್ರೇಯಾ ಶುಕ್ಲಾ ನಾಯಕಿಯಾಗಿದ್ದಾರೆ. ಹಿರಿಯ ನಟಿ ಭವ್ಯಾ, ಶೋಭರಾಜ್ ಮತ್ತು ಶಿವ್ ಕೂಡ ತಾರಾಗಣದಲ್ಲಿದ್ದಾರೆ.

ಬುಲೆಟ್ ಚಿತ್ರಕ್ಕೆ ಪಿವಿಆರ್ ಸ್ವಾಮಿ ಅವರ ಛಾಯಾಗ್ರಹಣವಿದೆ. ರಾಜ್ ಭಾಸ್ಕರ್ ಅವರ ಸಂಗೀತ ಮತ್ತು ಗುರುಪ್ರಸಾದ್ ಅವರ ಸಂಕಲನವಿದೆ. ಛಾಯಾಗ್ರಾಹಕರಾಗಿ ಪಿವಿಆರ್ ಸ್ವಾಮಿ ಅವರ 50ನೇ ಚಿತ್ರ ಇದಾಗಿದೆ. ಚಿತ್ರವನ್ನು ಜಯದೇವ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಮರಿಸ್ವಾಮಿ ವಿತರಿಸಲಿದ್ದಾರೆ.

# ‘ಮುಧೋಳ್’ ಚಿತ್ರೀಕರಣ ಮುಕ್ತಾಯದ ಹಂತಕ್ಕೆ, ಇನ್ನೂ ಹೆಸರಿಡದ ಹೊಸ ಚಿತ್ರದಲ್ಲಿ ವಿಕ್ರಮ್ ರವಿಚಂದ್ರನ್!

**ರವಿಚಂದ್ರನ್ ಪುತ್ರ ವಿಕ್ರಮ್ ರವಿಚಂದ್ರನ್ ಅಭಿನಯದ ಎರಡನೇ ಸಿನಿಮಾ ‘ಮುಧೋಳ್’ ಚಿತ್ರೀಕರಣ ಮುಕ್ತಾಯದ ಹಂತಕ್ಕೆ ಬಂದಿದ್ದು, ಇನ್ನೂ ಕೇವಲ 10 ರಿಂದ 14 ದಿನಗಳ ಚಿತ್ರೀಕರಣ ಬಾಕಿ ಉಳಿದಿದೆ. ಈ ನಡುವೆ ನಟ ಮಂಜುನಾಥ್ ರೆಡ್ಡಿ ನಿರ್ಮಾಣದ ಇನ್ನೂ ಹೆಸರಿಡದ ಚಿತ್ರಕ್ಕೆ ಈಗಾಗಲೇ ಕ್ಯಾಮೆರಾ ಎದುರಿಸುತ್ತಿದ್ದಾರೆ.**

**“ನನ್ನ ಕೈಯಲ್ಲಿ ಪ್ರಸ್ತುತ ಮೂರು ಚಿತ್ರಗಳಿವೆ. ಎಲ್ಲವೂ ಹೊಸ ನಿರ್ದೇಶಕರು ಮತ್ತು ಹೊಸ ಕಥೆಗಳಾಗಿವೆ. ಅದರಲ್ಲಿ ಒಂದನ್ನು ಮಂಜುನಾಥ್ ರೆಡ್ಡಿ ನಿರ್ಮಿಸುತ್ತಿದ್ದಾರೆ. ಚಿತ್ರದ ಹೆಸರನ್ನು ಶೀಘ್ರದಲ್ಲೇ ಘೋಷಿಸುತ್ತೇವೆ. ಮೂರನೇ ಸಿನಿಮಾದ ಬಗ್ಗೆ ಅಂತಿಮ ಹಂತದ ಚರ್ಚೆ ನಡೆಯುತ್ತಿದೆ ಎಂದು ವಿಕ್ರಮ್ ತಿಳಿಸಿದರು.**



ಒಂದು ವರ್ಷದಿಂದ ಸ್ನಾಯು ಎಳೆತ ಸಮಸ್ಯೆಯಿಂದ ಬಳಲುತ್ತಿದ್ದು, ಈಗ ಎರಡೂ ಭುಜಗಳಿಗೆ ಶಸ್ತ್ರಚಿಕಿತ್ಸೆಯ ಅಗತ್ಯವಿದೆ. ಅದಕ್ಕೂ ಮುನ್ನಾ ಶೂಟಿಂಗ್ ಮುಗಿಸಲು ಪರ್ಯಾಯ ಮಾರ್ಗ ಹುಡುಕುತ್ತಿರುವುದಾಗಿ ಅವರು ಹೇಳಿದರು.

ಸಂಭಾವನೆ ಹೊರತಾಗಿ ವೃತ್ತಿಪರತೆಗೆ ಬದ್ಧತೆ ದೃಢವಾಗಿ ಉಳಿದಿದೆ. ನೆಲ್ಸನ್ ಚಿತ್ರದಲ್ಲಿ ಒಂದು ಪಾತ್ರವಿದ್ದರೂ ಆ ಪ್ರಾಜೆಕ್ಟ್ ಸದ್ಯ ಸ್ಥಗಿತಗೊಂಡಿದೆ. ಮೂರು ನಿರ್ಮಾಪಕರಿಗೆ ಮುಂಗಡ ಹಣವನ್ನು ಹಿಂದಿರುಗಿಸಿದ್ದೇನೆ. ನನ್ನಗೆ ಪಾತ್ರ ಹೊಂದಿಕೆಯಾಗದಿದ್ದರೆ ನಿರ್ಮಾಪಕರ ಹಣ ದುರುಪಯೋಗವಾಗಲು ಬಯಸುವುದಿಲ್ಲ. ಪ್ರತಿಯೊಂದು ಪ್ರಾಜೆಕ್ಟ್‌ಗೂ ಸೂಕ್ತ ಸಮಯ ಮತ್ತು ಶ್ರಮವನ್ನು ಗೌರವಿಸುತ್ತೇನೆ ಎನ್ನುತ್ತಾರೆ ವಿಕ್ರಮ್.

ಮಂಜುನಾಥ್ ರೆಡ್ಡಿ ಅವರ ಸಹಯೋಗದಲ್ಲಿ ನಿರ್ಮಾಣವಾಗುತ್ತಿರುವ ಚಿತ್ರ ಕಮರ್ಷಿಯಲ್ ಸಿನಿಮಾವಾಗಿದೆ. ಆದರೆ ಪೌರಾಣಿಕ ಹಿನ್ನೆಲೆಯ ಕಥಾಹಂದರವೂ ಇದೆ. ಹೊಸ ಪ್ರಕಾರದ ಚಿತ್ರಗಳಲ್ಲಿ ಅಭಿನಯಿಸಲು ಪ್ರಯತ್ನಿಸುತ್ತಿದ್ದೇನೆ ಮತ್ತು ಹೊಸ ನಿರ್ದೇಶಕರೊಂದಿಗೆ ಕೆಲಸ ಮಾಡುತ್ತಿದ್ದೇನೆ” ಎಂದು ಅವರು ಹೇಳಿದರು.

# ಯುವ ರಾಜ್‌ಕುಮಾರ್ ನಟನೆಯ ‘ಎಕ್ಕ’ ಚಿತ್ರ ಬಿಡುಗಡೆ ದಿನಾಂಕ ಮುಂದಕ್ಕೆ; ಜುಲೈನಲ್ಲಿ ತೆರೆಗೆ!

**ಯುವ ರಾಜ್‌ಕುಮಾರ್ ಅಭಿನಯದ ‘ಎಕ್ಕ’ ಚಿತ್ರ ಬಿಡುಗಡೆ ದಿನಾಂಕವನ್ನು ಮುಂದೂಡಲಾಗಿದೆ. ಈ ಮೊದಲು ಜೂನ್ 6 ರಂದು ಚಿತ್ರವನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿತ್ತು. ಆದರೆ, ಚಿತ್ರತಂಡ ಇದೀಗ ಜುಲೈ 18 ರಂದು ಚಿತ್ರವನ್ನು ಬಿಡುಗಡೆ ಮಾಡಲು ಯೋಜನೆ ರೂಪಿಸಿದೆ.**



**ಡಾಲಿ ಧನಂಜಯ್ ನಟನೆಯ ‘ರತ್ನನ್ ಪ್ರಪಂಚ’ ಸಿನಿಮಾ ನಿರ್ದೇಶಿಸಿದ್ದ ರೋಹಿತ್ ಪದಕಿ ಈ ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದು, ಕಾರ್ತಿಕ್ ಗೌಡ ಮತ್ತು ಯೋಗಿ ಜಿ. ರಾವ್ ಅವರ ಕೆಆರ್‌ಜಿ ಸ್ಟುಡಿಯೋಸ್, ಜಯಣ್ಣ ಮತ್ತು ಭೋಗೇಂದ್ರ ಅವರ ಜಯಣ್ಣ ಫಿಲ್ಮ್ಸ್ ಮತ್ತು ಅಶ್ವಿನಿ ಪುನೀತ್ ರಾಜ್‌ಕುಮಾರ್ ನೇತೃತ್ವದ ಪಿಆರ್‌ಕೆ ಪ್ರೊಡಕ್ಷನ್ಸ್ ಜಂಟಿಯಾಗಿ ಎಕ್ಕ ಚಿತ್ರವನ್ನು ನಿರ್ಮಿಸಿವೆ.**

ರೋಹಿತ್ ಪದಕಿ ಮತ್ತು ಯುವ ರಾಜ್‌ಕುಮಾರ್ ಮೊದಲ ಬಾರಿಗೆ ಒಟ್ಟಾಗಿ ಕೆಲಸ ಮಾಡಿದ್ದಾರೆ. ಈ ಮೊದಲು ಯುವ ರಾಜ್‌ಕುಮಾರ್ ಸಂತೋಷ್ ಆನಂದ್‌ರಾಮ್ ನಿರ್ದೇಶನದ ‘ಯುವ’ ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಇತ್ತೀಚೆಗಷ್ಟೇ ಎಕ್ಕ ಚಿತ್ರದ ಟೀಸರ್ ಬಿಡುಗಡೆಯಾಗಿದ್ದು, ಪುನೀತ್ ರಾಜ್‌ಕುಮಾರ್ ಅವರ ಜಾಕಿ ಚಿತ್ರವನ್ನು ನೆನಪಿಸುತ್ತದೆ.

ಚಿತ್ರದಲ್ಲಿ ಸಂಪದ ಮತ್ತು ಸಂಜನಾ ಆನಂದ್ ನಾಯಕಿಯರಾಗಿ ನಟಿಸಿದ್ದಾರೆ. ಜೊತೆಗೆ ಅತುಲ್ ಕುಲಕರ್ಣಿ ಮತ್ತು ಡೆಡ್ಲಿ ಆದಿತ್ಯ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

# ಉಪೇಂದ್ರ ನಟನೆಯ ‘ಭಾರ್ಗವ’ನಿಗೆ ಮುಹೂರ್ತ: ವಿಲನ್ ಆಗಿ ‘ದುರ್ಯೋಧನ’ ಖ್ಯಾತಿಯ ಅರ್ಪಿತ್ ರಂಕಾ

ರಿಯಲ್ ಸ್ಟಾರ್ ಉಪೇಂದ್ರ ಮತ್ತು ನಿರ್ದೇಶಕ ನಾಗಣ್ಣ ಅವರ ಸಹಯೋಗದ ಭಾರ್ಗವ ಸಿನಿಮಾದ ಮುಹೂರ್ತ ಶುಕ್ರವಾರ ನೆರವೇರಿದೆ. ನಿರ್ಮಾಪಕ ಕೆ.ಪಿ. ಸೂರಪ್ಪ ಬಾಬು ಅವರ ಬೆಂಬಲದೊಂದಿಗೆ, ಈ ಚಿತ್ರ ಜೂನ್ 23 ರಂದು ಶೂಟಿಂಗ್ ಆರಂಭಿಸಲಿದೆ.



ಕೂಲಿ ಸೇರಿದಂತೆ ತೆಲುಗು ಸಿನಿಮಾದಲ್ಲಿ ಬ್ಯುಸಿಯಾಗಿರುವ ಉಪೇಂದ್ರ ಶೀಘ್ರದಲ್ಲೇ ಭಾರ್ಗವ ಚಿತ್ರದ ಸೆಟ್‌ಗೆ ಸೇರಲಿದ್ದಾರೆ. ಈ ಆಕ್ಷನ್–ಪ್ಯಾಕ್ಡ್ ಎಂಟರ್‌ಟೈನರ್ ಸಿನಿಮಾದಲ್ಲಿ ಅಂಕಿತಾ ಅಮರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಮೊದಲ ಬಾರಿಗೆ ಉಪೇಂದ್ರ ಅವರೊಂದಿಗೆ ಪರದೆಯನ್ನು ಹಂಚಿಕೊಳ್ಳುತ್ತಾರೆ.

ಕಣ್ಣಪ್ಪದಲ್ಲಿ ಖಳನಾಯಕನಾಗಿ ನಟಿಸುತ್ತಿರುವ ಕಿರುತೆರೆ ನಟ ಅರ್ಪಿತ್ ರಂಕಾ ಅವರನ್ನು ಭಾರ್ಗವದಲ್ಲಿ ವಿಲನ್ ಆಗಿ ನಟಿಸುತ್ತಿದ್ದಾರೆ. ಅವರು ಈ ಹಿಂದೆ ಚಿರಂಜೀವಿ ಸರ್ಜಾ ಅಭಿನಯದ ಅಜಿತ್ ಚಿತ್ರದಲ್ಲಿ ಸಣ್ಣ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು, ಆದರೆ ಇದು ಕನ್ನಡದಲ್ಲಿ ಅವರ ಮೊದಲ ಪೂರ್ಣ ಪ್ರಮಾಣದ ಖಳನಾಯಕನ ಪಾತ್ರವಾಗಿದೆ.

ಈ ಚಿತ್ರವು ಅನುಭವಿ ತಾಂತ್ರಿಕ ತಂಡವಿದೆ. ಜನ್ಯ ಸಂಗೀತ ಮತ್ತು ರಾಜರತ್ನಂ ಛಾಯಾಗ್ರಹಣವಿದೆ. ಹಿರಿಯ ನಟರಾದ ರಂಗಾಯಣ ರಘು ಮತ್ತು ಅವಿನಾಶ್ ಕೂಡ ಈ ಚಿತ್ರದ ಭಾಗವಾಗಿದ್ದಾರೆ.

5ಜನರ ಮಧ್ಯೆ ಸಿಲುಕಿ ನನಗೂ ಉಸಿರಾಡಲು ಕಷ್ಟ ಆಯ್ತು: ಘಟನೆ ಬಗ್ಗೆ ಮಾಹಿತಿ ಬಿಚ್ಚಿಟ್ಟ ಚಂದನ್ ಶೆಟ್ಟಿ

ಬೆಂಗಳೂರು: ಬುಧವಾರ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ಘಟನೆಯನ್ನು ನಾನು ಕಣ್ಣಾರೆ ನೋಡಿದೆ ಎಂದು ರ್‍ಯಾಪರ್ ಚಂದನ್ ಶೆಟ್ಟಿ ಹೇಳಿದ್ದಾರೆ.

ಆರ್‌ಸಿಬಿ (ಖಅಃ) ಗೆಲುವಿನ ಸಂಭ್ರಮಾಚರಣೆಯಲ್ಲಿ ಕಾಲ್ತುಳಿತ ಉಂಟಾಗಿ 11 ಮಂದಿ ಸಾವನ್ನಪ್ಪಿದ ಕುರಿತು ಮಾತನಾಡಿದ ಅವರು, ಗೇಟ್ ನಂಬರ್ 3ರಲ್ಲಿ ಹೋಗಲು ನನಗೆ ಪಾಸ್ ಸಿಕ್ಕಿತ್ತು. ಗೇಟ್ ನಂಬರ್ 3ಕ್ಕೆ ತಲುಪಲು ಆಗಲೇ ಇಲ್ಲ, ಅಷ್ಟು ಜನ ಸೇರಿದ್ದರು. ಗೇಟ್ ನಂಬರ್ 10ಕ್ಕೆ ಹೋದೆ, ಅಲ್ಲೂ ತುಂಬಾ ಜನರಿದ್ದರು. ಜನರ ಮಧ್ಯೆ ಸಿಲುಕಿ ನನಗೂ ಉಸಿರಾಡಲು ಕಷ್ಟ ಆಯಿತು ಎಂದರು.

ಅಲ್ಲಿಂದ ಹೇಗೋ ಮಾಡಿ ಗೇಟ್ ನಂಬರ್ 10 ಹತ್ತಿರ ಬಂದೆ. ಅಲ್ಲಿ ಇನ್ನೂ ತುಂಬಾ ತುಂಬಾ ಕ್ರೌಡ್ ಇತ್ತು. ಒಂದು ಘಳಿಗೆ ನನಗೆ ಉಸಿರಾಡೋಕೆ ಕಷ್ಟ ಆಯ್ತು. ಅದೆಷ್ಟು ಕಷ್ಟ ಆಗಿರಬಹುದು ಎನ್ನುವುದು ನನಗೆ ಅನಿಸಿತು. ಕಾಲ್ತುಳಿತದಲ್ಲಿ ಮೃತಪಟ್ಟ 11 ಜನರ ಆತ್ಮಕ್ಕೆ ಶಾಂತಿ ಸಿಗಲಿ ಎಂದಿದ್ದಾರೆ ಚಂದನ್ ಶೆಟ್ಟಿ.

“ಆ ಕ್ಷಣ ಅಲ್ಲಿ ಏನಾಗಿರಬಹುದು ಎಂಬುದು ನಾನು ಊಹಿಸಿದೆ. ಯಾಕೆಂದರೆ, ನಾನು ಅಂಥದ್ದೇ ಪರಿಸ್ಥಿತಿಯನ್ನು ಅಲ್ಲಿ ಎದುರಿಸಿದೆ.

ಕಾಲ್ತುಳಿತಲ್ಲಿ ಪ್ರಾಣ ಕಳೆದಕೊಂಡವರ ಆತ್ಮಕ್ಕೆ ಶಾಂತಿ ಸಿಗಲಿ ಅಂತ ನಾನು ಕೇಳಿಕೊಳ್ಳುತ್ತೇನೆ. ನನಗಂತೂ ತುಂಬಾ ಬೇಜಾರು ಆಗ್ತಿದೆ. ಇದಕ್ಕೆ ಯಾರು ಹೊಣೆ ಅಂತ ಹೇಳೋದಕ್ಕೆ ತುಂಬಾ ಕಷ್ಟ ಆಗ್ತಿದೆ. ಸರಿಯಾಗಿ ಆಯೋಜನೆ ಮಾಡಲಿಲ್ವಾ” ಎಂದು ಬೇಸರ ಮಾಡಿಕೊಂಡಿದ್ದಾರೆ ಚಂದನ್ ಶೆಟ್ಟಿ.

ಇಲ್ಲ, ಎರಡ್ಮೂರು ದಿನ ಬಿಟ್ಟು ಸರಿಯಾಗಿ ಪಾಸ್‌ಗಳನ್ನು ಹಂಚಿ ಶನಿವಾರನೋ, ಭಾನುವಾರನೋ ಇವೆಂಟ್ ಮಾಡಬಹುದಿತ್ತಾ? ನನಗೆ ಗೊತ್ತಿಲ್ಲ. ಆದರೆ ಇನ್ನೂ ಯಾರೆಲ್ಲಾ ಗಂಭೀರ ಪರಿಸ್ಥಿತಿಯಲ್ಲಿ ಇದ್ದಾರೋ, ಅವರೆಲ್ಲಾ ಬೇಗ ಗುಣವಾಗಿ ಬರಲಿ ಅಂತ ದೇವರಲ್ಲಿ ನಾನು ಪ್ರಾರ್ಥನೆ ಮಾಡುತ್ತೇನೆ. ಆ 11 ಜೀವಗಳ ಆತ್ಮಕ್ಕೆ ಶಾಂತಿ ಸಿಗಲಿ” ಎಂದು ಚಂದನ್ ಶೆಟ್ಟಿ.

ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತಕ್ಕೆ 11 ಆರ್‌ಸಿಬಿ ಅಭಿಮಾನಿಗಳು ದುರ್ಮರಣಕ್ಕೀಡಾಗಿದ್ದಾರೆ. 50ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತರ ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ.

# ಪ್ರಶಾಂತ್ ರಾಜಪ್ಪ ನಿರ್ದೇಶನದ ಚಿತ್ರದಲ್ಲಿ ರಿಷಿಗೆ ‘ಪದವಿ ಪೂರ್ವ’ ಖ್ಯಾತಿಯ ಅಂಜಲಿ ಅನೀಶ್ ಜೋಡಿ



**ಪ್ರಶಾಂತ್ ರಾಜಪ್ಪ ನಿರ್ದೇಶನದ ಚೊಚ್ಚಲ ಚಿತ್ರದಲ್ಲಿ ನಟ ರಿಷಿ ನಾಯಕನಾಗಿ ನಟಿಸುತ್ತಿದ್ದು, ಚಿತ್ರ ಇದೀಗ ವೇಗ ಪಡೆಯುತ್ತಿದೆ. ತಮ್ಮ ತೀಕ್ಷ್ಣ ಮತ್ತು ಹಾಸ್ಯಮಯ ಸಂಭಾಷಣೆಗಳಿಗೆ ಹೆಸರುವಾಸಿಯಾದ ಪ್ರಶಾಂತ್, ಇನ್ನೂ ಹೆಸರಿಡದ ಈ ಕಾಮಿಡಿ–ಡ್ರಾಮಾ ಮೂಲಕ ಮೊದಲ ಬಾರಿಗೆ ನಿರ್ದೇಶಕನ ಕ್ಯಾಪ್ ತೊಟ್ಟಿದ್ದಾರೆ.**

**ಸದ್ಯ ಚಿತ್ರದ ಪಾತ್ರವರ್ಗವನ್ನು ಗೌಪ್ಯವಾಗಿಟ್ಟಿದ್ದರೂ, ಸಿನಿಮಾ ಎಕ್ಸ್‌ಪ್ರೆಸ್‌ಗೆ ಲಭ್ಯವಾಗಿರವ ಮಾಹಿತಿ ಪ್ರಕಾರ, ಚಿತ್ರಕ್ಕೆ ಅಂಜಲಿ ಅನೀಶ್ ನಾಯಕಿಯಾಗಿ ನಟಿಸಲಿದ್ದಾರೆ ಎಂದು ತಿಳಿದುಬಂದಿದೆ.**

ಪದವಿ ಪೂರ್ವ ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟಿದ್ದ ಅಂಜಲಿ, ಇದೀಗ ಆಸಕ್ತಿದಾಯಕ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಅಂಜಲಿ ಮೊದಲ ಬಾರಿಗೆ ನಟ ರಿಷಿ ಜೊತೆಗೆ ತೆರೆ ಹಂಚಿಕೊಳ್ಳಲಿದ್ದಾರೆ.ಅಂಜಲಿ ಮೊದಲ ಬಾರಿಗೆ ನಟ ರಿಷಿ ಜೊತೆಗೆ ತೆರೆ ಹಂಚಿಕೊಳ್ಳಲಿದ್ದಾರೆ.

ಅವರು ಕೊನೆಯ ಬಾರಿಗೆ ಯೋಗರಾಜ್ ಭಟ್ ನಿರ್ದೇಶನದ ‘ಮನದ ಕಡಲು’ ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಅವರು ಸೆಟ್‌ಗೆ ಸೇರಿದ ನಂತರ ಚಿತ್ರತಂಡ ಅವರ ಪಾತ್ರದ ವಿವರಗಳನ್ನು ಬಹಿರಂಗಪಡಿಸಲಿದೆ.

ಚಿತ್ರದ ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯನ್ನು ಪ್ರಶಾಂತ್ ರಾಜಪ್ಪ ಬರೆದಿದ್ದಾರೆ. ಚಿತ್ರಕ್ಕೆ ಅಶೋಕ್ ಅವರ ಛಾಯಾಗ್ರಹಣವಿದೆ. ಚಿತ್ರೀಕರಣವು ಪ್ರಾಥಮಿಕವಾಗಿ ಬೆಂಗಳೂರಿನಲ್ಲಿ ನಡೆಯುತ್ತಿದ್ದು, ಕೆಲವು ಸನ್ನಿವೇಶಗಳನ್ನು ಬೇರೆಡೆ ಯೋಜಿಸಲಾಗಿದೆ.

# ಸಿದ್ದು ಪೂರ್ಣಚಂದ್ರ ನಿರ್ದೇಶನದ ‘ಪುಟ್ಟಣ್ಣನ ಕತ್ತೆ’ ಸಿನಿಮಾ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆ!



**‘ದಾರಿ ಯಾವುದಯ್ಯ ವೈಕುಂಠಕ್ಕೆ, ಬ್ರಹ್ಮಕಮಲ, ತಾರಿಣಿ ಚಿತ್ರಗಳಿಂದ ಹೆಸರಾದ ನಿರ್ದೇಶಕ ಸಿದ್ದು ಪೂರ್ಣಚಂದ್ರ ಅವರು, ತಮ್ಮ ಮುಂದಿನ ಚಿತ್ರ ‘ಪುಟ್ಟಣ್ಣನ ಕತ್ತೆ’ ಶೀರ್ಷಿಕೆ ಘೋಷಿಸಿದ್ದಾರೆ.**

**ಇದು ಹಿರೋಯಿಸಂ ತೋರಿಸುವ ವಿಶಿಷ್ಟ ಕಥೆಯಲ್ಲ. ಈ ಬಾರಿ ಕತ್ತೆ ಚಿತ್ರದ ಕೇಂದ್ರಬಿಂದುವಾಗಿದೆ. ಶ್ವಾನಗಳಿಗಿಂತಲೂ ವಿನಮ್ರ ಕತ್ತೆಯೊಂದರಲ್ಲಿ ಹಿರೋನನ್ನು ಕಂಡುಕೊಂಡಿದ್ದೇನೆ ಎಂದು ಹೇಳುವ ನಿರ್ದೇಶಕರು, ವಿಶಿಷ್ಟ ನಿರೂಪಣೆಗೆ ಧ್ವನಿ ಹೊಂದಿಸುತ್ತಿದ್ದಾರೆ.**

**ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದ್ದು, ಪೋಸ್ಟರ್‌ನಲ್ಲಿ ಕತ್ತೆಯನ್ನು ತೋರಿಸಲಾಗಿದೆ. ಈ ಪರಿಕಲ್ಪನೆ ಹುಟ್ಟಿದ ಬಗ್ಗೆ ವಿವರಿಸಿದ ಪೂರ್ಣಚಂದ್ರ, ಎಲ್ಲರೂ ಶ್ವಾನಗಳ ಬಗ್ಗೆ ಚಿತ್ರ ಮಾಡ್ತಾರೆ. ಹಾಗಾಗಿ ನಾನೇಕೆ? ಕತ್ತೆಯೊಂದರ ಚಿತ್ರ ಮಾಡಬಾರದು ಎಂದು ಯೋಚಿಸಿದೆ. ತದನಂತರ ಈ ಚಿತ್ರದ ಕಲ್ಪನೆ ಹೊಳೆಯಿತು ಎಂದು ತಿಳಿಸಿದರು.**

ಪುಟ್ಟಣ್ಣನ ಕತ್ತೆ’ ಹಳ್ಳಿಯೊಂದರ ಕತ್ತೆಯ ಪ್ರಯಾಣ ಮತ್ತು ಅದರ ಸುತ್ತಲಿನ ಜನರೊಂದಿಗೆ ಬೆಳೆಸಿಕೊಳ್ಳುವ ಬಾಂಧವ್ಯವನ್ನು ಗುರುತಿಸುತ್ತದೆ. ಮಾನವ–ಪ್ರಾಣಿ ಸಂಬಂಧಗಳಲ್ಲಿನ ಅಸಂಬದ್ಧತೆ ಮತ್ತು ಅನಿರೀಕ್ಷಿತ ಕೋಪ, ತಾಪ ಎಲ್ಲವನ್ನೂ ಬಹಿರಂಗಪಡಿಸುತ್ತದೆ. ಸಹಾನುಭೂತಿ, ಘನತೆ ಮತ್ತು ಸಾಮಾಜಿಕ ನಿಯಮಗಳೊಂದಿಗೆ ಕಥೆ ಸಾಗುತ್ತದೆ.

ಕತ್ತೆಯೊಂದಿಗೆ ಕೆಲಸ ಮಾಡುವುದು ಸುಲಭವಲ್ಲ. ತರಬೇತಿ ಮತ್ತು ಶೂಟಿಂಗ್ ಸವಾಲಿನಿಂದ ಕೂಡಿತ್ತು. ಆದರೆ ತದನಂತರ, ಅದರ ಸಿಬ್ಬಂದಿ ಒಳ್ಳೆಯ ಬಾಂಧವ್ಯ ಮೂಡಿಸಿದರು. ಯಾವುದೇ ತರಬೇತಿ ನೀಡದೆ ಅದರ ವರ್ತನೆ ಅರ್ಥ ಮಾಡಿಕೊಂಡೆವು ಎಂದು ನಿರ್ದೇಶಕರು ಹೇಳಿದರು.

ಚಿತ್ರದಲ್ಲಿ ಅನೀಶ್ ಆರ್ಯನ್, ಭೀಮೇಶ್, ಲಿಯೋ ಶರ್ಮಾ ಮತ್ತು ವಿಭಾ ವಂದನ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರ. ಜೊತೆಗೆ ಕಲಾರತಿ ಮಹದೇವ್, ಲಕ್ಕಿ ಶಂಕರ್, ಸಿದ್ದು ಮಂಡ್ಯ, ರಶ್ಮಿ ಮೈಸೂರು, ಬಾಬು, ರೋಹಿಣಿ, ಎನ್‌ಟಿ ರಾಮಸ್ವಾಮಿ, ಮತ್ತು ಕವಿತಾ ಕಂಬಾರರಂತಹ ತಾರಾಗಣವಿದೆ. ತನ್ಮಯ್ ಎಸ್ ಗೌಡರಿಂದ ಪೂರ್ಣಚಂದ್ರ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾಗುತ್ತಿರುವ ಈ ಚಿತ್ರಕ್ಕೆ ರಾಜು ಹೆಮ್ಮಿಗೆಪುರ ಛಾಯಾಗ್ರಹಣ ಒದಗಿಸಿದ್ದು, ಅನಂತ್ ಆರ್ಯನ್ ಸಂಗೀತ ಸಂಯೋಜಿಸಿದ್ದಾರೆ.

# ತಮಿಳಿನಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ ನಟ ಕಮಲ್ ಹಾಸನ್ ಬೆಂಬಲಕ್ಕೆ ನಿಂತ ನಟ ಕಿಶೋರ್

**ಬೆಂಗಳೂರು:** ‘ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ’ ಎಂಬ ತಮಿಳು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿರುವ ಬೆನ್ನಲ್ಲೇ ಬಹುಭಾಷಾ ನಟ ಕಿಶೋರ್ ಅವರು ಕಮಲ್ ಹಾಸನ್ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.



ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಮಲ್ ಹಾಸನ್ ಹೇಳಿಕೆಯನ್ನು ಅಷ್ಟೊಂದು ಭಾವುಕವಾಗಿ ನೋಡುವ ಅವಶ್ಯಕತೆ ಇಲ್ಲ. ಭಾಷಾ ಉಗಮದ ನಿಖರ ಮಾಹಿತಿ ಇಲ್ಲ ಎಂದಾದಲ್ಲಿ ಅವರ ಹೇಳಿಕೆ ಅವಮಾನವಲ್ಲ. ತಮಿಳಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ’ ಎಂದರು.

‘ನನ್ನ ತಾಯಿಯ ಹೊಟ್ಟೆ ಯಿಂದ ನಾನು ಹುಟ್ಟಿ ಬಂದೆ ಎಂದರೆ ನನಗೆ ಹಾಗೂ ನನ್ನ ತಾಯಿಗೆ ಅದು ಅವಮಾನವಲ್ಲ. ಅದನ್ನು ಅವಹೇಳನಕಾರಿ ಎಂದು ಯಾಕೆ ಅಂದುಕೊಳ್ಳಬೇಕು? ತುಂಬಾ ತಿಳಿದಂತಹ ಮನುಷ್ಯ ಏನೋ ಹೇಳಿದ್ದಾರೆ ಎಂದರೆ ಅದಕ್ಕೊಂದು ತರ್ಕ ಇರುತ್ತದೆ. ಅದಕ್ಕೆ ಏನೋ ಒಂದು ಅರ್ಥ ಇರಬೇಕು. ಅದನ್ನು ಪ್ರಶ್ನೆ ಮಾಡಿ, ಏನು ಎಂಬುದನ್ನು ತಿಳಿದುಕೊಳ್ಳಬೇಕು. ಅವರ ಹೇಳಿಕೆಯಿಂದ ಯಾರಿಗೂ ಅವಮಾನವಾಗಿಲ್ಲ’ ಎಂದು ಹೇಳಿದರು.

ಎಲ್ಲಾ ಭಾಷೆಗಳು ಎಲ್ಲಿಂದಲೋ ಹುಟ್ಟಿ ಬಂದಿರುತ್ತವೆ. ಹಾಗಂತ ಒಂದು ಭಾಷೆ ಮೇಲು, ಇನ್ನೊಂದು ಭಾಷೆ ಕೀಳು ಎಂಬುದಿಲ್ಲ. ಕನ್ನಡ ಎಲ್ಲಿಂದಲೋ ಹುಟ್ಟಿ ಬಂದಿದೆ, ಹಾಗೆಯೇ ತಮಿಳು ಸಹ ಎಲ್ಲಿಂದಲೂ ಹುಟ್ಟಿ ಬಂದಿದೆ. ಇಂತಹ ವಿಷಯದಲ್ಲಿ ಜನರನ್ನು ಭಾವುಕವಾಗಿ ರೊಚ್ಚಿಗೆಬ್ಬಿಸಬಾರದು ಎಂದು ಸಲಹೆ ನೀಡಿದರು.

ಬೆಂಗಳೂರು: ‘ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ’ ಎಂಬ ತಮಿಳು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿರುವ ಬೆನ್ನಲ್ಲೇ ಬಹುಭಾಷಾ ನಟ ಕಿಶೋರ್ ಅವರು ಕಮಲ್ ಹಾಸನ್ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಮಲ್ ಹಾಸನ್ ಹೇಳಿಕೆಯನ್ನು ಅಷ್ಟೊಂದು ಭಾವುಕವಾಗಿ ನೋಡುವ ಅವಶ್ಯಕತೆ ಇಲ್ಲ. ಭಾಷಾ ಉಗಮದ ನಿಖರ ಮಾಹಿತಿ ಇಲ್ಲ ಎಂದಾದಲ್ಲಿ ಅವರ ಹೇಳಿಕೆ ಅವಮಾನವಲ್ಲ. ತಮಿಳಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ’ ಎಂದರು.

‘ನನ್ನ ತಾಯಿಯ ಹೊಟ್ಟೆ ಯಿಂದ ನಾನು ಹುಟ್ಟಿ ಬಂದೆ ಎಂದರೆ ನನಗೆ ಹಾಗೂ ನನ್ನ ತಾಯಿಗೆ ಅದು ಅವಮಾನವಲ್ಲ. ಅದನ್ನು ಅವಹೇಳನಕಾರಿ ಎಂದು ಯಾಕೆ ಅಂದುಕೊಳ್ಳಬೇಕು? ತುಂಬಾ ತಿಳಿದಂತಹ ಮನುಷ್ಯ ಏನೋ ಹೇಳಿದ್ದಾರೆ ಎಂದರೆ ಅದಕ್ಕೊಂದು ತರ್ಕ ಇರುತ್ತದೆ. ಅದಕ್ಕೆ ಏನೋ ಒಂದು ಅರ್ಥ ಇರಬೇಕು. ಅದನ್ನು ಪ್ರಶ್ನೆ ಮಾಡಿ, ಏನು ಎಂಬುದನ್ನು ತಿಳಿದುಕೊಳ್ಳಬೇಕು. ಅವರ ಹೇಳಿಕೆಯಿಂದ ಯಾರಿಗೂ ಅವಮಾನವಾಗಿಲ್ಲ’ ಎಂದು ಹೇಳಿದರು.

ಎಲ್ಲಾ ಭಾಷೆಗಳು ಎಲ್ಲಿಂದಲೋ ಹುಟ್ಟಿ ಬಂದಿರುತ್ತವೆ. ಹಾಗಂತ ಒಂದು ಭಾಷೆ ಮೇಲು, ಇನ್ನೊಂದು ಭಾಷೆ ಕೀಳು ಎಂಬುದಿಲ್ಲ. ಕನ್ನಡ ಎಲ್ಲಿಂದಲೋ ಹುಟ್ಟಿ ಬಂದಿದೆ, ಹಾಗೆಯೇ ತಮಿಳು ಸಹ ಎಲ್ಲಿಂದಲೂ ಹುಟ್ಟಿ ಬಂದಿದೆ. ಇಂತಹ ವಿಷಯದಲ್ಲಿ ಜನರನ್ನು ಭಾವುಕವಾಗಿ ರೊಚ್ಚಿಗೆಬ್ಬಿಸಬಾರದು ಎಂದು ಸಲಹೆ ನೀಡಿದರು.

# ಹೊರಗುತ್ತಿಗೆ ಪೌರ ನೌಕರರ ಖಾಯಂಗೊಳಿಸಲು ಪ್ರಾಮಾಣಿಕ ಪ್ರಯತ್ನ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು :** ಆಸ್ಪತ್ರೆ, ಪುರಸಭೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಪೌರಕಾರ್ಮಿಕರಾಗಿ ಬದುಕಿಗಾಗಿ ವೃತ್ತಿ ಮಾಡುತ್ತಿರುವ ಪೌರ ನೌಕರರಿಗೆ ಸರ್ಕಾರದಿಂದ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಹೆಚ್.ಡಿ ತಮ್ಮಯ್ಯ ಭರವಸೆ ನೀಡಿದರು.

ಅವರು ಇಂದು ನಗರದ ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಏರ್ಪಡಿಸಿದ್ದ ದಲಿತ ಚಳುವಳಿಯ ಪಿತಾಮಹ ಪ್ರೋ. ಬಿ.ಕೃಷ್ಣಪ್ಪ ರವರ 87ನೇ ಜಯಂತಿ ಅಂಗವಾಗಿ ದ.ಸಂ.ಸ ಸದಸ್ಯತ್ವ ನೋಂದಣಿ ಆಂದೋಲನಾ ಸಮಾರಂಭದಲ್ಲಿ ಕೃಷ್ಣಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಪುರಸಭೆಗಳಲ್ಲಿ ಪೌರ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡಬೇಕೆಂಬ ಬೇಡಿಕೆಯ ಜೊತೆಗೆ ಸರ್ಕಾರಿ ನೌಕರರ ಎಲ್ಲಾ ಸೌಲಭ್ಯಗಳು ಸಿಗಬೇಕು ಎಂಬ ಮನವಿಯನ್ನು ಸ್ವೀಕರಿಸಿ ಉತ್ತರಿಸಿದರು.

ಈ ಸಮಸ್ಯೆ ಕೇವಲ 3 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿಲ್ಲ ಇಡೀ ರಾಜ್ಯದ ಸಮಸ್ಯೆಯಾಗಿದ್ದು, ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರನ್ನು ಈಗಾಗಲೇ ರಾಜ್ಯ ಸರ್ಕಾರ ಖಾಯಂ ನೌಕರರೆಂದು ಘೋಷಿಸಿದೆ ಎಂದು ಹೇಳಿದರು.

ಇದೇ ಮಾದರಿಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಪೌರಕಾರ್ಮಿಕರು ತಮ್ಮ ಜೀವದ ಅಂಗು ತೊರೆದು ಕೆಲಸ ಮಾಡುತ್ತಿರುವವರಿಗೆ ಸರ್ಕಾರ ಸ್ಪಂದಿಸಬೇಕೆಂದು ತಿಳಿಸಿದರು.

ಬಡವರು, ಶೋಷಿತರು ಸಮಾಜದ ಮುನ್ನೆಲೆಗೆ ಬರಬೇಕೆಂದು ಹೋರಾಟ ಮಾಡಿದ ಬಿ. ಕೃಷ್ಣಪ್ಪ ನವರಿಗೆ ನ್ಯಾಯ ಒದಗಿಸುವ ಕಾಯಕವಾದಾಗ ಮಾತ್ರ ಅವರ ಹೆಸರು ಚಿರಸ್ಥಾಯಿಯಾಗಿ ಜನಮಾನಸದಲ್ಲಿ ಉಳಿಯುತ್ತದೆ, ಬುದ್ಧ, ಬಸವ, ವಾಲ್ಮೀಕಿ, ಕನಕದಾಸ, ಅಂಬೇಡ್ಕರ್, ನಾರಾಯಣಗುರು ಇವರ ತತ್ವ ಆದರ್ಶಗಳು ಜನಮಾಸದಲ್ಲಿ ಉಳಿದಿದೆ ಎಂದರು.



ದ.ಸಂ.ಸ ಸದಸ್ಯತ್ವ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಸಾಮಾಜಿಕವಾಗಿ, ಆರ್ಥಿಕವಾಗಿ ಉನ್ನತ ಸ್ಥಾನಕ್ಕೇರಿದ ಸಮುದಾಯದ ಜನ ತನ್ನ ಮೂಲ ಬೇರನ್ನು ಮರೆಯಬಾರದು, ಮರೆತರೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ವಿಚಾರ ಧಾರೆಗಳಿಗೆ ಅಪಮಾನ ಮಾಡಿದಂತೆಯೇ ಎಂದು ಹೇಳಿದರು.

ವೈಚಾರಿಕ ಚಳುವಳಿಯನ್ನು ಎಲ್ಲರೂ ಸೇರಿ ಮುನ್ನಡೆಸುವ ಜೊತೆಗೆ ಈ ಸದಸ್ಯತ್ವ ಅಭಿಯಾನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ ಅವರು ವೈಚಾರಿಕ ವಿಚಾರವನ್ನು ಅಳವಡಿಸಿಕೊಂಡು ಸದಸ್ಯತ್ವ ಪಡೆದುಕೊಂಡಾಗ ಮಾತ್ರ ಸದಸ್ಯತ್ವಕ್ಕೆ ಶಕ್ತಿ ಬರುತ್ತದೆ ಎಂದರು.

ದ.ಸಂ.ಸ ರಾಜ್ಯ ಸಂಚಾಲಕ ತರೀಕೆರೆ ಎನ್. ವೆಂಕಟೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ ದೇಶದಲ್ಲಿ ದಲಿತರ ಮೇಲಿನ ದೌರ್ಜನ್ಯ, ದಬ್ಬಾಳಿಕೆಯನ್ನು ಮನಗಂಡು ಪ್ರಗತಿಪರ ಚಿಂತಕರಾದ ಬಿ. ಕೃಷ್ಣಪ್ಪನವರು ಸಂಘಟಿತರಾಗಿ ಹೋರಾಟ ಮಾಡಿದ ಪರಿಣಾಮ ಇಂದು ದಲಿತರು ನ್ಯಾಯಯುತ ಜೀವನ ನಡೆಸಲು ಸಾಧ್ಯವಾಗಿದೆ ಎಂದು ಹೇಳಿದರು.

ಕೃಷ್ಣಪ್ಪನವರ ಜನ್ಮ ದಿನೋತ್ಸವದ ಅಂಗವಾಗಿ ದ.ಸಂ.ಸ ಸದಸ್ಯತ್ವ ಅಭಿಯಾನ ನಡೆಸುತ್ತಿದ್ದು, ರಾಜ್ಯಾದ್ಯಂತ ಕೃಷ್ಣಪ್ಪನವರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ, 1970 ರ ಕಾಲಘಟ್ಟದಲ್ಲಿ ದೇಶದಲ್ಲಿ ನಡೆಯುತ್ತಿದ್ದ ಅಸಮಾನತೆ, ಜಾತಿ ಪದ್ಧತಿ ವಿರುದ್ಧ ಹೋರಾಟ ಮಾಡಿದವರಿಗೆ ಈ ಜಯಂತಿ ಅರ್ಥಪೂರ್ಣ ಎಂದು ತಿಳಿಸಿದರು.

ರಾಜ್ಯಾದ್ಯಂತ ದಲಿತ ಸಮುದಾಯದ ಮುಖಂಡರುಗಳನ್ನು ದೆಹಲಿಗೆ ಆಹ್ವಾನಿಸಿದಾಗ ದೇವನೂರು ಮಹಾದೇವ್, ಬಿ. ಕೃಷ್ಣಪ್ಪ ಮತ್ತಿತರರು ಆ ಸಭೆಯಲ್ಲಿ ಭಾಗವಹಿಸಿ ಹೋರಾಟದ ರೂಪುರೇಷಗಳ ಬಗ್ಗೆ ತಿಳಿಸುಕೊಂಡು ಬಂದು ರಾಜ್ಯದಲ್ಲಿ 1975 ರಲ್ಲಿ ದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿದ್ದು, ಇಂದು ಬೃಹದಾಕಾರವಾಗಿ ಸಂಘಟನೆ ಬೆಳೆಯುತ್ತಿದೆ ಎಂದು ಬಣ್ಣಿಸಿದರು.

ಈ ಕಾರ್ಯಕ್ರಮದಲ್ಲಿ ಬೆಂಗಳೂರಿನ ಪೌರಕಾರ್ಮಿಕರ ಮಹಾ ಸಂಘದ ರಾಜ್ಯಾಧ್ಯಕ್ಷ ನಾರಾಯಣ, ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಜಿ.ಎನ್ ರಾಜಶೇಖರ್, ಡಾ. ಭರತ್ ಅಂಚೆ, ಶ್ರೀಧರ್ ಕಲಿವೀರ್ ಮತ್ತಿತರರು ಉಪಸ್ಥಿತರಿದ್ದರು.

# ಜೂ.14ರಂದು ಕುವೆಂಪು ಕಲಾ ಮಂದಿರದಲ್ಲಿ ತಾಲ್ಲೂಕು ಪ್ರಥಮ ಮಹಿಳಾ ಸಾಹಿತ್ಯ ಸಮ್ಮೇಳನ : ಸೂರಿ ಶ್ರೀನಿವಾಸ್

**ಚಿಕ್ಕಮಗಳೂರು:** ನಗರದ ಕುವೆಂಪು ಕಲಾಮಂದಿರದಲ್ಲಿ ಜೂ 14 ರಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಹಿಳಾ ಘಟಕದಿಂದ ತಾಲೂಕು ಪ್ರಥಮ ಮಹಿಳಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸೂರಿಶ್ರೀನಿವಾಸ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಸಮ್ಮೇಳನದ ಅಧ್ಯಕ್ಷೆ ಲಕ್ಷ್ಮೀಶ್ಯಾಮರಾವ್ ಆಯ್ಕೆಯಾಗಿದ್ದಾರೆ. ಅಂದು ಬೆಳಿಗ್ಗೆ 8ಗಂಟೆಗೆ ರಾಷ್ಟ್ರಧ್ವಜವನ್ನು ತಹಸೀಲ್ದಾರ್ ರೇಷ್ಮಾ, ಪರಿಷತ್ತಿನ ಧ್ವಜವನ್ನು ತಾಲೂಕು ಕನ್ನಡ ಸಾಹಿತ್ಯಪರಿಷತ್ ಮಹಿಳಾ ಘಟಕದ ಅಧ್ಯಕ್ಷ ಹೆಚ್.ಕೆ. ವಿಜಯಲಕ್ಷ್ಮೀ ವಿಶ್ವನಾಥ್, ನಾಡಧ್ವಜವನ್ನು ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷೆ ರೇಖಾಹುಲಿಯಪ್ಪಗೌಡ ನೆರವೇರಿಸುವರು. ಬೆಳಿಗ್ಗೆ 9 ಗಂಟೆಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸಿ.ರಮೇಶ್ ಉದ್ಘಾಟಿಸುತ್ತಿದ್ದು, ಆಜಾದ್ವೃತ್ತದಿಂದ ಕುವೆಂಪು ಕಲಾಮಂದಿರದವರೆಗೆ ಮೆರವಣಿಗೆ ಸಾಗಲಿದೆ ಎಂದರು.

ಉದ್ಘಾಟನಾ ಸಮಾರಂಭ ಬೆಳಿಗ್ಗೆ 10.30ಕ್ಕೆ ನಡೆಯುತ್ತಿದ್ದು, ಸಾಹಿತಿ ಮೈಸೂರಿನ ಡಾ.ಎಸ್.ಪಿ.ಉಮಾದೇವಿ ಸುತ್ತೂರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಹೆಚ್.ಡಿ.ತಮ್ಮಯ್ಯ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ವಿಧಾನಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಸಿ.ಟಿ.ರವಿ, ಬೆಂಗಳೂರು ಕನ್ನಡಸಾಹಿತ್ಯ ಪರಿಷತ್ ಖಜಾಂಚಿ ಪಟೇಲ್ಪಾಂಡು ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪನಮ ಸಲ್ಲಿಸುವರು. ಕೆ.ವಿಜಯಲಕ್ಷ್ಮೀ ವಿಶ್ವನಾಥ ಸಮ್ಮೇಳನಾಧ್ಯಕ್ಷರನ್ನು ಪರಿಚಯಿಸುವರು. ಲಕ್ಷ್ಮೀಶ್ಯಾಮರಾವ್ ಅಧ್ಯಕ್ಷ ನುಡಿಗಳನ್ನಾಡುವರು. ಸಮ್ಮೇಳನಾಧ್ಯಕ್ಷರ ಭಾಷಣ ಪ್ರತಿಯನ್ನು ಜಿಲ್ಲಾಧಿಕಾರಿ



ಸಿ.ಎನ್.ಮೀನಾನಾಗರಾಜ್ ಬಿಡುಗಡೆಗೊಳಿಸುವರು. ಜಿಲ್ಲಾಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ನಿರ್ಮಲಾಮಂಚೇಗೌಡ, ತಾಲೂಕು ಕಸಾಪ ಅಧ್ಯಕ್ಷ ಮಾವಿನಕೆರೆ ದಯಾನಂದ ಪುಸ್ತಕಗಳನ್ನು ಬಿಡುಗಡೆಗೊಳಿಸುವರೆಂದು ತಿಳಿಸಿದರು.

ಎಸ್.ಎಸ್.ವೆಂಕಟೇಶ್, ಪಿ.ರಾಜೇಶ್, ಬಿ.ಪ್ರಕಾಶ್, ಹನುಮಂತೇಗೌಡ, ಶೈಲಾನಾಗರಾಜ್, ಅನುಮಧುಕುಮಾರ್, ಲತಾಶ್ರೀನಿವಾಸ, ಪಿ.ಸಿ.ರಾಜೇಗೌಡ, ಡಾ.ಎ.ಹರ್ಷ, ಭಾಗ್ಯ, ಎಂ.ಎಲ್.ರಮೇಶಬಾಬು, ಸಚಿನ್ಸಿಂಗ್, ಶಶಿಕಲಾ ಬಿ.ನಾಯಕ್, ಬನಶಂಕರಿಜೋಷಿ, ಆರಾಧನಾ ಸೋಮಶೇಖರ್, ಸುನಿತಾಕಿರಣ್, ಲತಾರಾಜಶೇಖರ್, ಪುಷ್ಪರಾಜೇಂದ್ರ, ಭಾಗ್ಯರಂಗನಾಥ, ಸುವರ್ಣಕೇಶವಮೂರ್ತಿ, ವೀಣಾ ಮಲ್ಲಿಕಾರ್ಜುನ, ಕಲಾವತಿ ಸಮಾರಂಭದಲ್ಲಿ ಉಪಸ್ಥಿತರಿರುವರೆಂದು ಹೇಳಿದರು.

ಮಧ್ಯಾಹ್ನ 1.30ಕ್ಕೆ ಜಾನಪದ ಗೋಷ್ಠಿಯ ಅಧ್ಯಕ್ಷತೆಯನ್ನು ಮಾಜಿ ಸಚಿವೆ ಮೋಟಮ್ಮ ವಹಿಸುವರು. ಸಮಾಜಕಲ್ಯಾಣ ಇಲಾಖೆ ಉಪನಿರ್ದೇಶಕಿ ಮಾಲತಿ ಗೋಷ್ಠಿ ಉದ್ಘಾಟಿಸುವರು. ಸವಿತಾರಮೇಶ್ ಪ್ರಾಸ್ತಾವಿಸುವರು. ಹಾಸನ ಕಸಾಪ ಜಿಲ್ಲಾಧ್ಯಕ್ಷ ಮಲ್ಲೇಶ್ಗೌಡ ಉಪನ್ಯಾಸ ನೀಡುವರು. ಜಸಂತ ಅನಿಲ್ಕುಮಾರ್, ಹಳೇಬೀಡು ಬಸವರಾಜು, ಸತೀಶ್ ಜಕ್ಕನಹಳ್ಳಿ, ವಾಸುಪೂಜಾರಿ, ನೂರ್ ಅಹ್ಮದ್, ಮಲ್ಲಿಕಾದೇವಿ, ಸಿ.ಪಿ.ಸಂತೋಷ್, ಟಿ.ಸಂದೀಪ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಪ್ರಿಯಾಂಕ್ಭರತ್, ಡಾ.ವಿಜಯಕುಮಾರ್, ವಿಶಾಲಾಕ್ಷಮ್ಮ, ಮೈನಾರಾಜೇಗೌಡ, ಲತಾರಾಜಶೇಖರ್, ಪಂಕಜವಿಶ್ವನಾಥ, ಸವಿತಾಸತ್ಯನಾರಾಯಣ, ರೂಪಮಧುಕುಮಾರ್ರಾಜ್ ಅರಸ್, ಚೈತ್ರಾಗೌಡ, ಮಹಾಲಕ್ಷ್ಮೀ, ರೂಪಮಧುಕುಮಾರ್, ಮಂಜುಳಾಜಯಣ್ಣ ಆಗಮಿಸುವರೆಂದು ತಿಳಿಸಿದರು.

ಅಂದು ಮಧ್ಯಾಹ್ನ 3 ಗಂಟೆಗೆ ಕವಿಗೋಷ್ಠಿಯನ್ನು ಅಜ್ಜಂಪುರ ಎಸ್.ಶೃತಿ ಉದ್ಘಾಟಿಸುತ್ತಿದ್ದು, ಡಾ.ಪುಷ್ಪಭಾರತಿ ಅಧ್ಯಕ್ಷತೆವಹಿಸುವರು. ಹಿರೇಮಗಳೂರು ಕಣ್ಣನ್, ಡಾ.ನಮನ, ತನ್ಮಯಿ ಪ್ರೇಂಕುಮಾರ್ ಮಾತನಾಡುವರು. ಶೀಲಾದೇವಿ, ಸೌಭಾಗ್ಯ ಮಾಂತೇಶ್, ಲತಾಶೇಖರ್, ದೇವಿಕಾಷಡಕ್ಷರಿ, ಪೂರ್ಣಿಮಾ ಬಾಬು, ಶಾಂತಜಯಾನಂದ್, ಸುಮಿತ್ರ ಅಂಬಳೆ, ಲಕ್ಷ್ಮೀ ಕೆಂಪನಹಳ್ಳಿ, ಸುಮ, ಉಮಾಪ್ರೇಮಕುಮಾರ್ ಕವಿಗಳಾಗಿ ಪಾಲ್ಗೊಳ್ಳುವರು.

# ಕ.ಸಾ.ಪ ಸಂಸ್ಥಾಪನೆಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪಾತ್ರ ಹಿರಿದು: ಡಿ.ಟಿ. ರಾಜನ್

**ಕಡೂರು:** ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನೆಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪಾತ್ರ ತುಂಬಾ ಹಿರಿದಾದದ್ದು ಅವರಿಂದಾಗಿ ನಾಡಿಗೆ ಅತ್ಯುತ್ತಮವಾದ ಅಭಿವೃದ್ಧಿಯ ಕಾರ್ಯಗಳು ನಡೆದಿದೆ ಎಂದು ಕಡೂರು ರೋಟರಿ ಕ್ಲಬ್ ಅಧ್ಯಕ್ಷರಾದ ಟಿ.ಡಿ. ರಾಜನ್ ತಿಳಿಸಿದರು

ಅವರು ಬಿಸಿಲೆಹಳ್ಳಿ ಗ್ರಾಮದ ಶ್ರೀ ಬಾಬು ನರೇಂದ್ರ ಪ್ರೌಢಶಾಲೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಮಹಿಳಾ ಘಟಕಗಳು ಇವರ ಸಂಯುಕ್ತಾಶ್ರಯದಲ್ಲಿ ನಡೆದ ದತ್ತಿ ಉಪನ್ಯಾಸ ಮತ್ತು ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದ ಅವರು ಪರಿಸರದ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಅದನ್ನು ನಾವು ಕಡ್ಡಾಯವಾಗಿ ಪಾಲಿಸಲೇ ಬೇಕಾಗಿದೆ ಒಂದು ಮನೆ ಒಂದು ಮರ ಎನ್ನುವ ಚಿಂತನೆಯೊಂದಿಗೆ ಸಾಲುಮರದ ತಿಮ್ಮಕ್ಕನನ್ನು ನಾವು ಆದರ್ಶವಾಗಿ ಇರಿಸಿಕೊಂಡು ಅವರ ಪದ್ಧತಿಯನ್ನು ನಾವುಗಳು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ವಚನ ಸಾಹಿತ್ಯ ಅತ್ಯಂತ ಶ್ರೀಮಂತವಾದ ಹಾಗೂ ಶರಣ ಸಂಸ್ಕೃತಿಯನ್ನು ಬಿಂಬಿಸುವ ಕಲ್ಪನೆಯಾಗಿದೆ ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯ ವಿಶೇಷವಾದ ಕೊಡುಗೆಯನ್ನು ನೀಡಿದೆ ಅತ್ಯಂತ ಸರಳವಾದ ವಚನ ಸಾಹಿತ್ಯ ಬಸವಣ್ಣನವರು ಹಾಗೂ ಅಂದಿನ ಎಲ್ಲ ಶಿವಶರಣರು ಕಾಯಕ ದಾಸೋಹ ಇವುಗಳಿಗೆ ಹೆಚ್ಚು ಮನ್ನಣೆಯನ್ನು ನೀಡಿ ಮಾನವೀಯತೆಯನ್ನು ಮುಂಚೂಣಿಗೆ ತಂದ ಅನುಭವಿಗಳು ಜಾತಿ ಮತ ಪಂಥ ಪರಂಪರೆ ಹುಚ್ಚ ನೀಚ ಗಂಡು-ಹೆಣ್ಣು ಎಂಬ ಭೇದ ಭಾವಗಳನ್ನೆಲ್ಲ ತೊರೆದು ಹಾಕಿ ಎಲ್ಲರಿಗೂ ಸಮಾನತೆಯನ್ನು ನೀಡಿದವರು ಶರಣರು ವಿಶೇಷವಾಗಿ



ಬಸವಣ್ಣನವರು ಒಂದು ವೇಳೆ ಅಂಬೇಡ್ಕರ್ ರವರು ಕರ್ನಾಟಕದಲ್ಲಿ ಕನ್ನಡ ನಾಡಿನಲ್ಲಿ ಜನಿಸಿದ್ದರೆ ಅವರು ಬಸವಣ್ಣನವರ ಅನುಯಾಯಿಗಳಾಗುತ್ತಿದ್ದರು ಎಂಬುದರಲ್ಲಿ ಯಾವುದೇ ಉತ್ಪ್ರೇಕ್ಷೆ ಇಲ್ಲ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸೂರಿ ಶ್ರೀನಿವಾಸ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದರು. ಪ್ರಾಮಾಣಿಕ ಹಾಗೂ ದಕ್ಷ ಆಡಳಿತಗಾರರಾಗಿದ್ದ ಅವರು ನಾಡಿನ ಬಹುತೇಕ ನೀರಾವರಿಗಳಿಗೆ ಸೌಲಭ್ಯವನ್ನು ಕಲ್ಪಿಸಿ ಕೊಟ್ಟವರು ಬೆಂಗಳೂರು ನಗರಕ್ಕೆ ಪ್ರಪ್ರಥಮವಾಗಿ ವಿದ್ಯುತ್ ದೀಪವನ್ನು ನೀಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಚಕ್ರವರ್ತಿ ಪಿಯು ಕಾಲೇಜಿನ ಅಧ್ಯಕ್ಷರಾದ ಕೆ.ಪಿ. ರಾಘವೇಂದ್ರ ತಿಳಿಸಿದರು.

ತರೀಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಅಧ್ಯಕ್ಷರಾದ ಸುನಿತ ಕಿರಣ್ ಅವರು ಕುಮಾರವ್ಯಾಸ ಭಾರತದ ಪಠ್ಯಧಾರಿತ ಪದ್ಯವನ್ನು ವಿಶ್ಲೇಷಣೆ ಮಾಡಿ ಗಮಕಗಾಯನ ಮತ್ತು ವಾಚನ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು.

ಕಡೂರು ರೋಟರಿ ಕ್ಲಬ್ ನ ಮಾಜಿ ಅಧ್ಯಕ್ಷರಾದ ಕೆ. ಹೆಚ್. ಶ್ರೀನಿವಾಸ್ ಮತ್ತು ಬಿ. ವಿ. ರಾಜಶೇಖರ್ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಯುವ ಘಟಕದ ಅಧ್ಯಕ್ಷರಾದ ಪ್ರಿಯಾಂಕ ಭರತ್ ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಆರ್ ಸತೀಶ್ ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಕೊಪ್ಪಳ ಶಾಂತ ಮೂರ್ತಿ ಕಡೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಅಧ್ಯಕ್ಷರಾದ ಲತಾ ರಾಜಶೇಖರ್ ಕವಿ ಲೇಖಕಿ ಗೀತಾ ಹಾಸ್ಮಕಲ್ ಹಾಗೂ ಚಿಕ್ಕಮಗಳೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಅಧ್ಯಕ್ಷರಾದ ಬಿ. ಎಚ್. ಸೋಮಶೇಖರ್ ಮಾತನಾಡಿದರು.

ಕಡೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಅಧ್ಯಕ್ಷರಾದ ಲತಾ ರಾಜಶೇಖರ್ ಇದೇ ಸಂದರ್ಭದಲ್ಲಿ ಪರಿಸರ ದಿನಾಚರಣೆಯನ್ನು ಆಚರಣೆ ಮಾಡಿ ಶಾಲಾ ಆವರಣದಲ್ಲಿ ಗಿಡ ನೆಡುವ

## ಜೂ.11: ಕಳಸದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ

**ಚಿಕ್ಕಮಗಳೂರು, ಜೂ.3:** ಕಳಸ ತಾಲ್ಲೂಕಿನ ಲೋಕಾಯುಕ್ತ ಜನಸಂಪರ್ಕ ಸಭೆಯು ಜೂನ್ 11 ರಂದು ಬೆಳಿಗ್ಗೆ 11 ಗಂಟೆಗೆ ಕಳಸ ಪಟ್ಟಣದ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳಿಯ ಸಭಾಂಗಣದಲ್ಲಿ ನಿಗದಿಯಾಗಿದ್ದು, ಲೋಕಾಯುಕ್ತ ಪೊಲೀಸ್ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕರ್ನಾಟಕ ಲೋಕಾಯುಕ್ತದ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹದ್ದೂರ್ಘಟ್ಟ: ಮನೆ ಮನೆ ಭೇಟಿ, ಲಾರ್ವಾ ಸಮೀಕ್ಷೆ

**ಚಿತ್ರದುರ್ಗ :** ಚಿತ್ರದುರ್ಗ ತಾಲ್ಲೂಕಿನ ಕೋಗುಂಡೆ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಬಹದ್ದೂರ್ಘಟ್ಟ ಉಪಕೇಂದ್ರದಲ್ಲಿ ಎರಡು ಡೆಂಗ್ಯೂ ಪಾಸಿಟಿವ್ ಪ್ರಕರಣಗಳು ಕಂಡುಬಂದ ಹಿನ್ನಲೆಯಲ್ಲಿ ಮಂಗಳವಾರ ಮನೆ ಮನೆ ಭೇಟಿ ನೀಡಿ, ಲಾರ್ವಾ ಸಮೀಕ್ಷೆ ನಡೆಸಲಾಯಿತು. ಗ್ರಾಮದ ಪ್ರೌಢಶಾಲೆಯಲ್ಲಿ ಲಾರ್ವಾ ಮುಕ್ತ ಸಭೆ ನಡೆಸಿ, ಡೆಂಗ್ಯೂ ರೋಗ ಲಕ್ಷಣಗಳು ಹಾಗೂ ಮುಂಜಾಗ್ರತಾ ಕ್ರಮಗಳ ಬಗ್ಗೆ ಹಾಗೂ ಸ್ವಚ್ಚತೆ ಕುರಿತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ್ ಆರೋಗ್ಯ ಶಿಕ್ಷಣ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಸುರೇಶ್ ಬಾಬು, ಆರೋಗ್ಯ ಮೇಲ್ವಿಚಾರಕ ಶ್ರೀನಿವಾಸ್, ಆರೋಗ್ಯ ನಿರೀಕ್ಷಣಾಧಿಕಾರಿ ಆಂಜನೇಯ ಸೇರಿದಂತೆ ಆಶಾ ಕಾರ್ಯಕರ್ತರು, ಶಾಲೆಯ ಶಿಕ್ಷಕರು ಇದ್ದರು.

## ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ :** 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಚಳ್ಳಕೆರೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಯ ಆಧಾರ್ ಕಾರ್ಡ್, ತಂದೆ-ತಾಯಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಎಸ್‌ಎಟಿಎಸ್ ನಂಬರ್, ಮೊಬೈಲ್ ನಂಬರ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು. ಕೌನ್ಸಿಲಿಂಗ್ ಮೂಲಕ ಆಯ್ಕೆ ಪ್ರಕ್ರಿಯೆ ನಡೆಯುವುದು. ಅರ್ಜಿ ಸಲ್ಲಿಸಿದ ಒಂದು ಪ್ರತಿ ನಿಲಯದ ಮೇಲ್ವಿಚಾರಕರಿಗೆ ಸಲ್ಲಿಸಬೇಕು ಎಂದು ಚಳ್ಳಕೆರೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್-1) ತಿಳಿಸಿದ್ದಾರೆ.

# ಜನರನ್ನು ಅಲೆದಾಡಿಸದೇ ಆಡಳಿತ ಸೇವೆ ನೀಡಬೇಕು

## ಅಧಿಕಾರಿಗಳಿಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಖಡಕ್ ಸೂಚನೆ

**ಹರಪನಹಳ್ಳಿ:** ಸರ್ಕಾರಿ ಕಚೇರಿಗಳಿಗೆ ಗ್ರಾಮೀಣ ಭಾಗದ ಜನರನ್ನು ಅಲೆದಾಡಿಸದಂತೆ ಹರಪನಹಳ್ಳಿ ಅಧಿಕಾರಿಗಳು ಆಡಳಿತ ಸೇವೆ ನೀಡಬೇಕು ಎಂದು ದಾವಣಗೆರೆ ಕ್ಷೇತ್ರದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸೂಚಿಸಿದರು.

ಅರಸೀಕೆರೆ ಗ್ರಾಮದಲ್ಲಿರುವ ಕೋಲಶಾಂತೇಶ್ವರ ಮಠದಲ್ಲಿ ಜಿಲ್ಲಾಡಳಿತ, ಜಿ.ಪಂ. ಸಹಯೋಗದಲ್ಲಿ ಏರ್ಪಡಿಸಿದ್ದ ತಾಲ್ಲೂಕು ಮಟ್ಟದ ಜನಸ್ಪಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನಸ್ಪಂದನ ಕಾರ್ಯಕ್ರಮದ ಮೂಲಕ ಸರ್ಕಾರವೇ ಜನರ ಬಳಿಗೆ ಬರುವಂತಾಗಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡುವ ಪ್ರಯತ್ನ ಇದಾಗಿದೆ ಎಂದು ಅವರು ಹೇಳಿದರು.

ಅರಸೀಕೆರೆ ಹೋಬಳಿಯಲ್ಲಿ ತುರ್ತಾಗಿ ಬಸ್ ನಿಲ್ದಾಣ, ಶೌಚಾಲಯ ನಿರ್ಮಾಣ, ಕುಡಿಯುವ ನೀರು, ಸೇರಿ ವಿದ್ಯಾರ್ಥಿಗಳಿಗೆ ನಿಗದಿತ ವೇಳೆಗೆ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಅಗತ್ಯವಿದೆ. ಶಾಲಾ ಕಾಲೇಜುಗಳಲ್ಲಿ




ಗುಣಮಟ್ಟದ ಶಿಕ್ಷಣ ನೀಡಬೇಕು. ಫಲಿತಾಂಶ ಸುಧಾರಣೆಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಕ್ರಮವಹಿಸಬೇಕು. ಕೇಂದ್ರ ಪುರಾತತ್ವ ಇಲಾಖೆಯಿಂದ ತಾಲ್ಲೂಕಿನಲ್ಲಿನ ಐತಿಹಾಸಿಕ ದೇಗುಲಗಳನ್ನು ಅಭಿವೃದ್ಧಿಗೊಳಿಸಲು ಯೋಜನೆ ರೂಪಿಸಲಾಗುವುದು. ಮಹಿಳೆಯರನ್ನು ಆರ್ಥಿಕವಾಗಿ ಸಬಲಗೊಳಿಸಲು ಕೌಶಲ್ಯ ಅಭಿವೃದ್ಧಿ ಯೋಜನೆಗಳನ್ನು ನೀಡಬೇಕಿದೆ ಎಂದರು.

ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ.ದೇವೇಂದ್ರಪ್ಪ ಜನಸ್ಪಂದನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಅರಸೀಕೆರೆ ಗ್ರಾಮದ ಗ್ರಂಥಾಲಯಕ್ಕೆ ಪುಸ್ತಕಗಳು ಸೇರಿ ಅಗತ್ಯ ಪರಿಕರಗಳನ್ನು ಒದಗಿಸಬೇಕು. ಬಸ್ ನಿಲ್ದಾಣ ಸಮಸ್ಯೆ ಶೀಘ್ರ ಪರಿಹರಿಸಲಾಗುವುದು. ಶೀಘ್ರವೇ ಜನಸಂಪರ್ಕ ಕಚೇರಿ ತೆರೆದು ಕನಿಷ್ಠ ವಾರಕ್ಕೊಮ್ಮೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಪರಿಹರಿಸಲಾಗುವುದು. ಉಚ್ಚಂಗಿದುರ್ಗದಲ್ಲಿ ವೈದ್ಯರ ಕೊರತೆಗೆ ಕಾರಣ ಗ್ರಾಮೀಣ ಪ್ರದೇಶದಲ್ಲಿ ಕರ್ತವ್ಯ ನಿರತ ವೈದ್ಯರನ್ನು ಅಗೌರವ ತೋರುವ ಪ್ರವೃತ್ತಿ ಕೈಬಿಡಬೇಕಿದೆ. ಅದ್ದರಿಂದಲೇ ವೈದ್ಯರ ಕೊರತೆ ಸಮಸ್ಯೆ ಹೆಚ್ಚಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಮಾತನಾಡಿ, ಅರಸೀಕೆರೆ ಗ್ರಾಮದ ಬಸ್ ನಿಲ್ದಾಣ ಕಾಮಗಾರಿ 30 ತಿಂಗಳಿನಿಂದ ಸ್ಥಗಿತಗೊಂಡಿದೆ. 47 ಲಕ್ಷರೂ ಅಗತ್ಯ ಅನುದಾನ ನೀಡುವ ಮೂಲಕ 60 ದಿನಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ಗ್ರಾ.ಪಂ.ಗಳಿಂದ ಇ-ಸ್ವತ್ತು ಮೂಲಕ ಹಕ್ಕುಪತ್ರಗಳನ್ನು ಮನೆ ಬಾಗಿಲಿಗೆ ವಿತರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ. ಕೂಡಲೇ ಎಲ್ಲಾ ಹಕ್ಕುಪತ್ರಗಳನ್ನು ಫಲಾನುಭವಿಗಳ ಮನೆ ಬಾಗಿಲಿಗೆ ತಲುಪಿಸುವ ಕಾರ್ಯ ಮಾಡಲಾಗು ವುದು. ಅರಸೀಕೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರಾತ್ರಿ ವೇಳೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ನೀಗಿಸುವಂತೆ ಡಿಎಚ್‌ಒ ಶಂಕರನಾಯ್ಕರಿಗೆ ಸೂಚಿಸಲಾಯಿತು.

ಹೆರಿಗೆ ವೈದ್ಯರು ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆ ನೀಡಲು ಮುಂದಾಗುತ್ತಿಲ್ಲ. ಸಂಸದರು ದಾವಣಗೆರೆಯಿಂದ ಓರ್ವ ವೈದ್ಯರನ್ನು ಸೂಚಿಸಿದರೇ 1.40 ಲಕ್ಷರೂ ಮಾಸಿಕ ವೇತನ ನೀಡಲು ಸಿದ್ಧರಿದ್ದೇವೆ. ಜಿಲ್ಲೆಯಲ್ಲಿ ತಿಂಗಳಿಗೆ ಒಟ್ಟು 15,630 ಹೆರಿಗೆ ಆಗಿವೆ. ಅದರಲ್ಲಿ 11,700 ಹೆರಿಗೆಗಳು ಸರ್ಕಾರಿ ಆಸ್ಪತ್ರೆಯಲ್ಲಿ ಮಾಡಲಾಗಿದೆ. ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಿಗೆ ಹೆಚ್ಚಿನ ಆದ್ಯತೆ ನೀಡಿ ಬಾಣಂತಿಯರ ಬಗ್ಗೆ ಹೆಚ್ಚು ಕಾಳಜಿ ವಹಿಸಿ ಚಿಕಿತ್ಸೆ ನೀಡಲಾಗುತ್ತದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ಕಾರಣಕ್ಕೆ ಔಷಧಗಳನ್ನು ಹೊರಗಡೆ ಬರೆಯದಂತೆ ಕ್ರಮವಹಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

ಇದೇ ವೇಳೆ ಸಹಾಯಕ ಆಯುಕ್ತ ಚಿದಾನಂದ ಗುರುಸ್ವಾಮಿ, ತಹಸೀಲ್ದಾರ ಬಿ.ವಿ.ಗಿರೀಶ್ ಬಾಬು, ಗ್ರಾ.ಪಂ. ಅಧ್ಯಕ್ಷೆ ಕೆ.ಹಾಲಮ್ಮ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ, ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಸಹನೆ, ಸಹಕಾರ, ತ್ಯಾಗದ ಮೂಲಕ ಒತ್ತಡದ ಜೀವನದಿಂದ ಹೊರ ಬರಲು ಸಾಧ್ಯ

**ಚಿತ್ರದುರ್ಗ:** ಸಹನೆ, ಸಹಕಾರ, ತ್ಯಾಗದ ಮೂಲಕ ಒತ್ತಡದ ಜೀವನದಿಂದ ಹೊರ ಬರಲು ಸಾಧ್ಯ ಎಂದು ಆರ್ಥಿಕ ಚಿಂತಕ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ತಿಳಿಸಿದರು.

ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದಲ್ಲಿ ಭಾನುವಾರ ಏರ್ಪಡಿಸಲಾಗಿದ್ದ ಪ್ರತಿಭಾ ಪುರಸ್ಕಾರದಲ್ಲಿ ಭಾಗವಹಿಸಿ ಮಾತನಾಡಿದರು.

ಸರ್ಕಾರಿ ನೌಕರರು ಕೆಲಸದಿಂದ ನಿವೃತ್ತರಾಗಿರಬಹುದು. ಆದರೆ ಪ್ರವೃತ್ತಿಯಿಂದ ಅಲ್ಲ. ಪ್ರತಿಭೆಗಳನ್ನು ಗೌರವಿಸುವ ಮೂಲಕ ವಿದ್ಯಾರ್ಥಿಗಳಿಗೆ ಇನ್ನು ಪ್ರೋತ್ಸಾಹ ನೀಡಿದಂತಾಗುತ್ತದೆ. ಹೆಚ್ಚಿನ ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳನ್ನು ಪುರಸ್ಕರಿಸುವುದಿಂದ ಜೀವನದಲ್ಲಿ ಉತ್ತಮ ಸಾಧನೆ ಮಾಡಲು ಸಹಕಾರಿಯಾಗಲಿದೆ. ಒಳ್ಳೆಯ ಹೃದಯವಿದ್ದವರು ದೀರ್ಘಾಯುಷಿಗಳಾಗಿರುತ್ತಾರೆ. ಮಾನಸಿಕ ಹಾಗೂ ದೈಹಿಕವಾಗಿ ಆರೋಗ್ಯವಾಗಿರಬೇಕಾದರೆ ಭಾವನಾತ್ಮಕ ಬದುಕು ಮುಖ್ಯ ಎಂದು ಹೇಳಿದರು.

ಆಧುನಿಕ ಯುಗದಲ್ಲಿ ಅವಿಭಕ್ತ ಕುಟುಂಬಳು ಕಡಿಮೆಯಾಗುತ್ತಿವೆ. ಸಹನೆ, ಸಹಿಸಿಕೊಳ್ಳುವ ಗುಣ ದೊಡ್ಡ ಶಕ್ತಿಯಿದ್ದಂತೆ. ಧ್ಯಾನ, ಮಿತವಾದ



ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ನಿವೃತ್ತರು ಒಂದಲ್ಲ ಒಂದು ರೀತಿಯ ಚಟುವಟಿಕೆಯಲ್ಲಿ ತೊಡಗಿಕೊಂಡಾಗ ಲವಲವಿಕೆಯಿಂದ ಇರಬಹುದಲ್ಲದೆ ತಲ್ಲಣಗೊಂಡಿರುವ ವ ೯ನಸ್ಸುಗಳನ್ನು ಹತೋಟಿಯಲ್ಲಿಟ್ಟುಕೊಳ್ಳಬಹುದು. ಸ್ಥಿತ ಪ್ರಜ್ಞೆ ಬೆಳೆಸಿಕೊಂಡು ಸುತ್ತಮುತ್ತಲಿನ ವಾತಾವರಣವನ್ನು ತಣ್ಣಗಾಗಿಸಿಕೊಂಡು ಹಿರಿಯರ ಸಲಹೆ ಮಾರ್ಗದರ್ಶನಗಳನ್ನು ಪಡೆದುಕೊಂಡಾಗ ಸಂಘಟನೆ ಬಲಿಷ್ಟವಾಗಿರುತ್ತದೆಂದರು.

ಸರ್ಕಾರಿ ನೌಕರರ ಸಂಘದ ನೂತನ ಜಿಲ್ಲಾಧ್ಯಕ್ಷ ಪ್ರೇಮನಾಥ್ ಮಾತನಾಡಿ ಸಂಘದ ಬೆಳವಣಿಗೆ ಹಿಂದೆ ನಿವೃತ್ತ ನೌಕರರ ಸಹಕಾರವಿದೆ. ಎಲ್ಲರ ದೇಣಿಗೆಯಿಂದ ಕಟ್ಟಡ ನಿರ್ಮಾಣವಾಗಿದೆ. ದಿನನಿತ್ಯವೂ ನಗರವನ್ನು ಶುಚಿಗೊಳಿಸುವ ಹತ್ತು ಪೌರ ಕಾರ್ಮಿಕರಿಗೆ ಮುಂದಿನ ದಿನಗಳಲ್ಲಿ ಸನ್ಮಾನ ಮಾಡಲಾಗುವುದು. ಸಂಘದಲ್ಲಿ ಮನೋರಂಜನಾ ಕೇಂದ್ರವಿದೆ. ನಿವೃತ್ತ ನೌಕರರು ಆರಾಮವಾಗಿ ಕಾಲ ಕಳೆಯಬಹುದು. ಪ್ರತಿಭಾ ಪುರಸ್ಕಾರಕ್ಕೆ ಒಳಗಾಗಿರುವ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ಹೋದ ಮೇಲೆ ಹೆತ್ತವರನ್ನು ಕೈಬಿಡದೆ ಪೋಷಿಸುವಂತೆ ಮನವಿ ಮಾಡಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ತಿಮ್ಮಯ್ಯ ಮಾತನಾಡಿ ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಇದಕ್ಕೆ ಹಿರಿಯರು ಕೈಜೋಡಿಸಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಜಾಸ್ತಿಯಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ಫಲಿತಾಂಶ ಕುಂಠಿತವಾಗಿದೆ. ನಿವೃತ್ತ ನೌಕರರ ಮಾರ್ಗದರ್ಶನ ಬೇಕು ಎಂದು ಮನವಿ ಮಾಡಿದರು. ನಿವೃತ್ತ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ರಂಗಪ್ಪರೆಡ್ಡಿ, ಗೌರವಾಧ್ಯಕ್ಷ ವೈ.ಚಂದ್ರಶೇಖರಯ್ಯ, ಉಪಾಧ್ಯಕ್ಷರುಗಳಾದ ಮಂಜುನಾಥ್, ಎಫ್.ಆರ್.ಅಲಗೇರಿ

ಪ್ರಧಾನ ಕಾರ್ಯದರ್ಶಿ ತಿಮ್ಮಪ್ಪ, ಖಜಾಂಚಿ ಎನ್.ಆರ್.ಬೈಯಣ್ಣ, ಕಾರ್ಯಾಧ್ಯಕ್ಷ ಎಂ.ಶಿವಾನಂದಪ್ಪ ಇವರುಗಳು ವೇದಿಕೆಯಲ್ಲಿದ್ದರು.

ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankri Temple Arch, Main Road, Davanagere, Karnataka-577004. Editor: **MALLIKARJUNAPPA H.G.**